ಸಂಪುಟ: 21, ಸಂಚಿಕೆ: 276, ಪುಟಗಳು: 8, ಭಾನುವಾರ, 14 ಜುಲೈ 2024 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ ₹3

### ಸುಭಾಷಿತ

ಮನಸ್ಸಿನ ವಿಕಸವು ಮಾನವನ ಅಸ್ತಿತ್ವದ ಅಂತಿಮ ಗುರಿಯಾಗಿರಬೇಕು.
। ಡಾ.ಬಿ.ಆರ್.ಅಂಬೇಡ್ಕರ್

### ಪಂಚಾಂಗ

(ಭಾನುವಾರ 14, ಜುಲೈ-2024)

- ಸಂವತ್ಸರ: ಕ್ರೋಧಿನಾಮ
- ಋತು: ಗ್ರೀಷ್ಮ
- ಅಯನ: ದಕ್ಷಿಣಾಯನ
- ಮಾಸ: ಆಷಾಢ, ಪಕ್ಷ: ಶುಕ್ಲ
- ತಿಥಿ: ಅಷ್ಟಮಿ, ನಕ್ಷತ್ರ: ಚಿತ್ರಾ
- ರಾಹುಕಾಲ: 05:14 - 6:50
- ಗುಳಿಕಕಾಲ: 03:37 - 5:14
- ಯಮಗಂಡಕಾಲ: 12:25 - 2:01

## ಸಂಕ್ಷಿಪ್ತ ಸುದ್ದಿ

### ನಂದಿಬೆಟ್ಟಕ್ಕೆ ಪ್ರವಾಸಿಗರ ದಂಡು

**ಚಿಕ್ಕಬಳ್ಳಾಪುರ:** ವೀಕೆಂಡ್ ಹಿನ್ನೆಲೆ ವಿಶ್ವವಿಖ್ಯಾತ ನಂದಿಗಿರಿಧಾಮಕ್ಕೆ ಪ್ರವಾಸಿಗರ ದಂಡೇ ಹರಿದುಬರುತ್ತಿದೆ. ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಆಗಮಿಸಿದ ಕಾರಣ ನಂದಿಬೆಟ್ಟದ ರಸ್ತೆಯಲ್ಲಿ ಟ್ರಾಫಿಕ್ ಜಾಮ್ ಸಮಸ್ಯೆಯಿಂದ ಪರದಾಡುವಂತಾಯಿತು. ನಂದಿಬೆಟ್ಟ ನೋಡಲು ಸಾವಿರಾರು ಮಂದಿ ಪ್ರವಾಸಿಗರು ಕಾರು ಹಾಗೂ ಬೈಕ್‌ಗಳಲ್ಲಿ ಆಗಮಿಸಿದ್ದು, ನಂದಿಬೆಟ್ಟದ ರಸ್ತೆಯಲ್ಲಿ ವಾಹನಗಳು ಕಿಕ್ಕಿರಿದು ತುಂಬಿವೆ. ನಂದಿಬೆಟ್ಟದ ಚೆಕ್‌ಪೋಸ್ಟ್‌ನಿಂದಲೇ ವಾಹನಗಳು ತುಂಬಿತುಳುಕಿದ ದೃಶ್ಯ ಕಂಡುಬಂತು.



### ಕಲುಷಿತ ನೀರು ಸೇವಿಸಿ 9 ಮಂದಿ ಅಸ್ವಸ್ಥ

**ಯಾದಗಿರಿ:** ಜಿಲ್ಲೆಯ ಕಾಕಲವಾರ ಗ್ರಾಮದಲ್ಲಿ ಕಲುಷಿತ ನೀರು ಸೇವಿಸಿ 9 ಮಂದಿ ಅಸ್ವಸ್ಥ ಪ್ರಕರಣಕ್ಕೆ ಸಂಬಂಧಿಸಿದಂತೆ ಕರ್ತವ್ಯಲೋಪ ಹಿನ್ನೆಲೆ ಪಿಡಿಒ ಅಮಾನತು ಮಾಡಿ ಸಿಇಒ ಗರೀಮಾ ಪನ್ವಾರ್ ಆದೇಶಿಸಿದ್ದಾರೆ. ಜಿಲ್ಲೆಯ ಗುರುಮಠಕಲ್ ತಾಲೂಕಿನ ಕಾಕಲವಾರ ಗ್ರಾಮ ಪಂಚಾಯತ್ ಪಿಡಿಒ ಮಲ್ಲರೆಡ್ಡಿಯನ್ನು ಅಮಾನತು ಮಾಡಲಾಗಿದೆ. ಕುಡಿಯಲು ಯೋಗ್ಯವಲ್ಲದ ನೀರು ಎಂದು ವರದಿ ಬಂದರೂ ನೀರು ಪೂರೈಕೆ ಮಾಡಿದ್ದು, ಕಲುಷಿತ ನೀರನ್ನು ಸೇವಿಸಿದ 9 ಮಂದಿ ಅಸ್ವಸ್ಥರಾಗಿ ಆಸ್ಪತ್ರೆಯಲ್ಲಿ ದಾಖಲಾಗಿದ್ದಾರೆ. ಗ್ರಾಮದ ಮೂರು ಬೋರ್ ವೆಲ್‌ಗಳ ನೀರು ಕುಡಿಯಲು ಯೋಗ್ಯವಲ್ಲ ಎಂದು ವರದಿ ಬಂದಿತ್ತು. ಆದರೂ ಪಿಡಿಒ ಮಲ್ಲರೆಡ್ಡಿ ಯೋಗ್ಯವಲ್ಲದ ನೀರನ್ನೇ ಗ್ರಾಮಸ್ಥರಿಗೆ ಕುಡಿಯಲು ಪೂರೈಸಿದ್ದರು. ಈ ಹಿನ್ನೆಲೆ ಕರ್ತವ್ಯಲೋಪ ಆಧಾರದ ಮೇಲೆ ಸಸ್ಪೆಂಡ್ ಮಾಡಿ ಸಿಇಒ ಆದೇಶ ನೀಡಿದ್ದಾರೆ. ಘಟನೆ ಆದ ಕೂಡಲೇ ಸಿಇಒ ಗರೀಮಾ ಪನ್ವಾರ್ ಆಸ್ಪತ್ರೆಗೆ ಭೇಟಿ ನೀಡಿ ಅಸ್ವಸ್ಥರ ಆರೋಗ್ಯ ವಿಚಾರಿಸಿದ್ದಾರೆ. ನಂತರ ಗ್ರಾಮಕ್ಕೆ ಭೇಟಿ ನೀಡಿ ಮಾಹಿತಿ ಪಡೆದಿದ್ದರು. ಪಿಡಿಒ ನಿರ್ಲಕ್ಷ್ಯವೇ ಪ್ರಕರಣಕ್ಕೆ ಕಾರಣ ಎಂಬುದನ್ನು ಅರಿತು ಅಮಾನತು ಮಾಡಿದ್ದಾರೆ.



ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of Newspapers | Tabloids | Magazines



## ಕರ್ನಾಟಕದಲ್ಲಿ ಮಕ್ಕಳನ್ನೇ ಹೆಚ್ಚು ಬಾಧಿಸುತ್ತಿದೆ

# ಡೇಂಜರ್ ಡೆಂಘೆ

**ಬೆಂಗಳೂರು:** ರಾಜಧಾನಿ ಬೆಂಗಳೂರು ಸೇರಿದಂತೆ ರಾಜ್ಯದಲ್ಲಿ 1 ರಿಂದ 18 ವರ್ಷದವರಲ್ಲಿ ಹೆಚ್ಚಾಗಿ ಡೆಂಗ್ಯೂ ಪತ್ತೆಯಾಗುತ್ತಿದ್ದು ಪೋಷಕರು ಎಚ್ಚರವಹಿಸಬೇಕು ಎಂದು ಕರ್ನಾಟಕ ಆರೋಗ್ಯ ಇಲಾಖೆ ಸೂಚನೆ ನೀಡಿದೆ. ಕಳೆದ ಒಂದು ತಿಂಗಳಿನಿಂದ ಬೆಂಗಳೂರು ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ಡೆಂಗ್ಯೂ ಹೆಚ್ಚಾಗುತ್ತಿದ್ದು, ಜನವರಿಯಿಂದ ಇಲ್ಲಿಯವರೆಗೆ ರಾಜ್ಯದಲ್ಲಿ ಒಟ್ಟು 8658 ಪ್ರಕರಣಗಳು ದಾಖಲಾಗಿವೆ. ಏಳು ಜನ ಮೃತಪಟ್ಟಿದ್ದಾರೆ. ಆದರೆ ಈಗ ಆತಂಕಕ್ಕೆ ಕಾರಣವಾಗಿರುವುದು ಡೆಂಗ್ಯೂಗೆ ಮಕ್ಕಳೇ ಹೆಚ್ಚು ಭಾದಿತರಾಗುತ್ತಿರುವುದು.

ಕಳೆದ 24 ಗಂಟೆಯಲ್ಲಿ 1 ರಿಂದ 18 ವರ್ಷ ಒಳಗಿನ 154 ಮಕ್ಕಳಲ್ಲಿ ಡೆಂಗ್ಯೂ ಕಾಣಿಸಿಕೊಂಡಿದೆ. ಒಟ್ಟು ಜನವರಿಯಿಂದ ಇಲ್ಲಿಯವರೆಗೆ 1 ರಿಂದ 18 ವರ್ಷ ವಯಸ್ಸಿನ 2395 ಮಕ್ಕಳಿಗೆ ಡೆಂಗ್ಯೂ ಬಾಧಿಸಿದೆ. ಹೀಗಾಗಿ ಪೋಷಕರು ಮಕ್ಕಳ ಬಗ್ಗೆ ಹೆಚ್ಚು ನಿಗಾ ವಹಿಸಬೇಕು, ಇಲ್ಲದಿದ್ದರೆ ಅಪಾಯ ಕಟ್ಟಿಟ್ಟ ಬುತ್ತಿ ಎಂದು ವೈದ್ಯರು ಸೂಚಿಸಿದ್ದಾರೆ.

ಕಳೆದ 24 ಗಂಟೆಯಲ್ಲಿ 1 ವರ್ಷದೊಳಗಿನ ಏಳು ಮಕ್ಕಳಲ್ಲಿ ಡೆಂಗ್ಯೂ ಕಾಣಿಸಿಕೊಂಡಿದೆ. ಒಂದು ವಾರದ ಹಿಂದೆ ನಾಲ್ಕು ಮಕ್ಕಳಲ್ಲಿ ಕಾಣಿಸಿಕೊಂಡಿತ್ತು. ಜನೆವರಿಯಿಂದ ಒಟ್ಟು 150 ಮಕ್ಕಳಿಗೆ ಡೆಂಗ್ಯೂ ಪಾಸಿಟಿವ್ ಬಂದಿಸಿದೆ.

ಕಳೆದ 24 ಗಂಟೆಯಲ್ಲಿ 1 ವರ್ಷದಿಂದ 18 ವರ್ಷದೊಳಗಿನ 154 ಮಕ್ಕಳಿಗೆ ಡೆಂಗ್ಯೂ ಬಂದಿದೆ. ಒಂದು ವಾರದ ಹಿಂದೆ 1 ವರ್ಷದಿಂದ 18 ವರ್ಷದೊಳಗಿನ 44 ಮಕ್ಕಳಿಗೆ ಡೆಂಗ್ಯೂ ಬಾಧಿಸಿತ್ತು. ಜನವರಿಯಿಂದ ಇಲ್ಲಿಯವರೆಗೆ ಒಟ್ಟು 2395 ಮಕ್ಕಳಲ್ಲಿ ಡೆಂಗ್ಯೂ ಕಾಣಿಸಿಕೊಂಡಿದೆ. ಈ ಬಗ್ಗೆ ಕೆಸಿ ಜನರಲ್ ಆಸ್ಪತ್ರೆ ವೈದ್ಯೆ ರಶ್ಮಿ



ಮಾತನಾಡಿ ಮನೆ, ಶಾಲೆ ಸುತ್ತಮುತ್ತ ಸ್ವಚ್ಛವಾಗಿಡಬೇಕು. ಸೊಳ್ಳೆ ಉತ್ಪತ್ತಿಯನ್ನು ತಡೆಯಬೇಕು. ಸೊಳ್ಳೆ ಕಚ್ಚದಂತೆ ಮನೆಯಲ್ಲಿ ಸೊಳ್ಳೆ ಪರದೆ ಹಾಕಬೇಕು. ಮಗುವಿನ ಬಳಿ ಸೊಳ್ಳೆ ಸುಳಿಯದಂತೆ ಎಚ್ಚರ ವಹಿಸಬೇಕು. ಬಿಟ್ಟು ಬಿಟ್ಟು ಬರುತ್ತಿರುವ ಮಳೆಯಿಂದ ನಗರದಲ್ಲಿ ವೈರಲ್ ಫೀವರ್ ಹೆಚ್ಚಾಗಿದೆ. ಜ್ವರ, ಶೀತ, ಪ್ರಕರಣಗಳ ಜತೆ ಡೆಂಗ್ಯೂ ಪ್ರಕರಣಗಳು ಕೂಡ ಹೆಚ್ಚಾಗಿವೆ. ಹಿಂದಿನ ವರ್ಷಕ್ಕೆ ಹೋಲಿಸಿದರೆ ಈ ವರ್ಷ ಡೆಂಗ್ಯೂ ಲಕ್ಷಣಗಳು ಬದಲಾಗಿವೆ. ಜ್ವರ ಬಿಟ್ಟು ಬಿಟ್ಟು ಬರುತ್ತಿದೆ ಎಂದು ಹೇಳಿದರು.

## ಅಕ್ರಮ ತಡೆಗೆ ಕೆಇಎ ಎಕ್ಸಾಂನಲ್ಲಿ ವೆಬ್ ಕಾಸ್ಟಿಂಗ್ ಅಳವಡಿಕೆಗೆ

# ಪ್ಲ್ಯಾನ್

**ಬೆಂಗಳೂರು:** ವಿವಿಧ ಹುದ್ದೆಗಳ ನೇಮಕಾತಿಗಾಗಿ ನಡೆಯುವ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಒಂದಲ್ಲ ಒಂದು ಅಕ್ರಮಗಳು ನಡೆದು ಜಗತ್ ಜಾಹೀರಾಗಿ ಅಧಿಕಾರಿಗಳು ತಲೆ ತಗ್ಗಿಸುವಂತಾಗುತ್ತಿತ್ತು. ಹೀಗಾಗಿ ಇಂತಹ ಪರೀಕ್ಷಾ ಅಕ್ರಮಗಳಿಗೆ ಬ್ರೇಕ್ ಹಾಕಲು ಕೆಇಎ ಮುಂದಾಗಿದ್ದು ಕೆಇಎ ನಡೆಸುವ ಪ್ರತಿ ಪರೀಕ್ಷೆಯಲ್ಲಿ ವೆಬ್ ಕಾಸ್ಟಿಂಗ್ ಹಾಗೂ ಎಐ ತಂತ್ರಜ್ಞಾನವನ್ನ ಅಳವಡಿಸಲು ಮುಂದಾಗಿದೆ.

ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಈ ವೆಬ್ ಕಾಸ್ಟಿಂಗ್ ಅನ್ನು ಅಳವಡಿಕೆ ಮಾಡಿದ್ದಾಗ ಪೋಷಕರು ಹಾಗೂ ಶಾಲಾ ಆಡಳಿತ ಮಂಡಳಿಯಿಂದ ಸಾಕಷ್ಟು ವಿರೋಧ ವ್ಯಕ್ತವಾಗಿತ್ತು. ಆದರೆ ಇದೀಗ ಕೆಇಎ ವೆಬ್‌ಕಾಸ್ಟಿಂಗ್‌ನ್ನು ಪ್ರತಿ ಪರೀಕ್ಷೆಯಲ್ಲೂ ಕೂಡ ಅಳವಡಿಸಲು ಮುಂದಾಗಿದ್ದು ನಿನ್ನೆ ಮೊದಲ ಹಂತವಾಗಿ ಬಿಎಂಟಿಸಿ (ಕಲ್ಯಾಣ ಕರ್ನಾಟಕ), ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ವಿವಿಧ ಹುದ್ದೆಗಳಿಗೆ ನಡೆಸಲಾದ ಪರೀಕ್ಷೆಯಲ್ಲಿ ಅಳವಡಿಸಲಾಗಿತ್ತು. ಇನ್ನೂ ಬೆಂಗಳೂರು, ಕಲ್ಬುರ್ಗಿ, ಧಾರವಾಡ ಮತ್ತು ಬಳ್ಳಾರಿಯ ಒಟ್ಟು 22 ಕೇಂದ್ರಗಳ ಒಟ್ಟು 377 ಕೊಠಡಿಗಳಲ್ಲಿ ಕ್ಯಾಮರಾ ಅಳವಡಿಸಲಾಗಿದ್ದು ಕ್ಯಾಮರಾ ಕಣ್ಗಾವಲಿನಲ್ಲಿ ಪರೀಕ್ಷೆ ನಡೆಸಲಾಯಿತು.

ವೆಬ್‌ಕಾಸ್ಟಿಂಗ್ ಮೂಲಕ ನೇರವಾಗಿ ಪರೀಕ್ಷಾ ಕೊಠಡಿಯಿಂದ ಲೈವ್ ವಿಷ್ಯೂಯಲ್‌ಗಳು ಕಮಾಂಡ್ ರೂಂನಲ್ಲಿ ವೀಕ್ಷಿಸುವ ಅವಕಾಶವಿದ್ದು ಇದರ ಸಹಾಯದಿಂದ ಶಿಕ್ಷಕರು ಹಾಗೂ ಅಭ್ಯರ್ಥಿಗಳ ಚಲನವಲನಗಳನ್ನ ಒಮ್ಮೆಲೇ ವೀಕ್ಷಿಸಬಹುದು. ಇನ್ನೂ ಎಐ ತಂತ್ರಜ್ಞಾನ ಹಾಗೂ ಫೇಸ್ ರೆಕಾಗ್ನೈಸೆಷನ್ ಕೂಡ ಅಳವಡಿಸಿದ್ದು ಇದರಿಂದ ಅಭ್ಯರ್ಥಿಗಳ ಮುಖ ಹಾಗೂ ಫೋಟೋವನ್ನ ಸ್ಕ್ಯಾನ್ ಮಾಡಲಾಗುತ್ತದೆ. ಇದರಿಂದ ಅಭ್ಯರ್ಥಿಗಳ ಸರಿಯಾದ ಮಾಹಿತಿ ಪಡೆದುಕೊಳ್ಳಲು ಸಹಾಯಕವಾಗುತ್ತದೆ. ಇನ್ನೂ ಈ ವೆಬ್ ಕಾಸ್ಟಿಂಗ್ ಯಾವ ರೀತಿಯಲ್ಲಿ ಕೆಲಸ ಮಾಡುತ್ತೆ ಎಂದು ವೀಕ್ಷಿಸಿ ಮಾಹಿತಿ ಪಡೆದುಕೊಳ್ಳಲು ಉನ್ನತ ಶಿಕ್ಷಣ ಸಚಿವ ಕೆಇಎಯ ಕಮಾಂಡ್ ರೂಂಗೆ ಭೇಟಿ ನೀಡಿ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

ಪುಟ 2




## ಮಿದುಳು ತಿನ್ನುವ ಅಮೀಬಾ ಸೋಂಕಿಗೆ ವ್ಯಕ್ತಿ ಬಲಿ

**ಇಸ್ಲಾಮಾಬಾದ್:** ಮಿದುಳು ತಿನ್ನುವ ಅಮೀಬಾ ಸೋಂಕಿಗೆ ಪಾಕಿಸ್ತಾನದ ವ್ಯಕ್ತಿಯೊಬ್ಬ ಬಲಿಯಾಗಿದ್ದು, ಆತಂಕ ಮೂಡಿಸಿದೆ. ಪಾಕಿಸ್ತಾನದಲ್ಲಿ ಸೋಂಕಿನಿಂದ ಮೃತಪಟ್ಟವರ ಸಂಖ್ಯೆ 3 ಕ್ಕೆ ಏರಿಕೆಯಾಗಿದೆ. ಮೃತನನ್ನು ಔರಂಗಜೇಬ್ ಎಂದು ಗುರುತಿಸಲಾಗಿದೆ. ಜು.7 ರಂದು ಕ್ವೈದಾಬಾದ್‌ನ ಫಾರ್ಮ್‌ಹೌಸ್‌ನಲ್ಲಿ ತನ್ನ ಸ್ನೇಹಿತರೊಂದಿಗೆ ಪಿಕ್ನಿಕ್ ಹೋಗಿದ್ದರು. ಈ ವೇಳೆ ಸ್ವಿಮ್ಮಿಂಗ್ ಕೂಡ ಮಾಡಿದ್ದರು. ಅದಾದ ಬಳಿಕ ಸೋಂಕಿಗೆ ತುತ್ತಾಗಿದ್ದಾರೆ. ಔರಂಗಜೇಬ್‌ಗೆ ಮೊದಲು ವಾಕರಿಕೆ ಮತ್ತು ಜ್ವರ ಕಾಣಿಸಿಕೊಂಡಿತ್ತು. ಜು.10 ರಂದು ಅವರನ್ನು ಆಸ್ಪತ್ರೆಗೆ ದಾಖಲಿಸಲಾಯಿತು. ಜುಲೈ 11 ರಂದು ವೈರಸ್ ದೃಢಪಟ್ಟಿತು.



## ಮಾಜಿ ಪ್ರಿಯಕರನೊಂದಿಗೆ ವಿವಾಹಿತ ಯುವತಿ ಆತ್ಮಹತ್ಯೆ



**ಚಿಕ್ಕಬಳ್ಳಾಪುರ:** ಕೃಷಿ ಹೊಂಡಕ್ಕೆ ಬಿದ್ದು ಮಾಜಿ ಪ್ರಿಯಕರನೊಂದಿಗೆ ವಿವಾಹಿತ ಯುವತಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಚಿಂತಾಮಣಿ ತಾಲೂಕಿನ ದೊಡ್ಡಪಲ್ಲಿ ಗ್ರಾಮದಲ್ಲಿ ನಡೆದಿದೆ. ಅನುಷಾ (19), ವೇಣು (21) ಮೃತ ದುರ್ದೈವಿಗಳು. ಈ ಜೋಡಿಗಳು 2 ವರ್ಷದಿಂದ ಪರಸ್ಪರ ಪ್ರೀತಿಸುತ್ತಿದ್ದರು. ಪ್ರೀತಿಗೆ ಮನೆಯಲ್ಲಿ ಒಪ್ಪದ ಕಾರಣ ಚೌಡರೆಡ್ಡಿ ಎಂಬ ವ್ಯಕ್ತಿ ಜೊತೆಯಲ್ಲಿ ಯುವತಿಗೆ ಮನೆಯವರು ಮದುವೆ ಮಾಡಿದ್ದರು. ಆಷಾಢಕ್ಕೆ ಎಂದು ಮನೆಗೆ ಬಂದಾಗ ಯುವತಿ ಮತ್ತೆ ಹಳೆ ಪ್ರೇಮಿಯ ಜೊತೆ ಸಂಪರ್ಕ ಬೆಳೆಸಿದ್ದಳು. ಮೊದಲೇ ಪ್ರೀತಿಗೆ ನಿರಾಕರಿಸಿದ್ದ ಕುಟುಂಬ. ಹಾಗಾಗಿ ಮತ್ತೆ ಇಬ್ಬರು ಒಟ್ಟಿಗೆ ಬಾಳಲು ಬಿಡುವುದಿಲ್ಲ ಎಂದು ಆತ್ಮಹತ್ಯೆಗೆ ಶರಣಾಗಿದ್ದಾರೆ. ಆಷಾಢಕ್ಕೆ ತವರು ಮನೆಗೆ ಬಂದು ಮಾಜಿ ಪ್ರಿಯಕರನೊಂದಿಗೆ ಯುವತಿ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ಸೊಂಟಕ್ಕೆ ವೇಲ್ ಬಿಗಿದುಕೊಂಡು ಕೃಷಿ ಹೊಂಡಕ್ಕೆ ಬಿದ್ದು ಇಬ್ಬರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಕೆಂಚಾರ್ಲಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ನಡೆದಿದ್ದು, ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಹಲವು ಜಿಲ್ಲೆಗಳಿಗೆ ಮಳೆಯ ರೆಡ್ ಅಲರ್ಟ್

**ಬೆಂಗಳೂರು:** ಕರ್ನಾಟಕದ ಕರಾವಳಿ ಹಾಗೂ ಮಲೆನಾಡಿನಲ್ಲಿ ಮಳೆಯ ಅಬ್ಬರ ಜೋರಾಗಿದೆ. ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಚಿಕ್ಕಮಗಳೂರು, ಶಿವಮೊಗ್ಗ ಜಿಲ್ಲೆಗಳಿಗೆ ರೆಡ್ ಅಲರ್ಟ್ ಘೋಷಿಸಲಾಗಿದೆ.ಕೊಡಗು, ಹಾಸನ, ತುಮಕೂರು, ವಿಜಯನಗರ, ಚಾಮರಾಜನಗರ, ಯಾದಗಿರಿ, ವಿಜಯಪುರ, ಕಲಬುರಗಿ, ಹಾವೇರಿ, ಧಾರವಾಡ, ಬೀದರ್, ಬೆಳಗಾವಿಯಲ್ಲಿ ಭಾರಿ ಮಳೆಯಾಗಲಿದೆ.

ಅಂಕೋಲಾ, ಕುಮಟಾ, ಕದ್ರಾ, ಗೇರುಸೊಪ್ಪ, ಹೊನ್ನಾವರ, ಕೋಟ, ಶಿರಾಲಿ, ಪುತ್ತೂರು, ಕೊಲ್ಲೂರು, ಕಾರವಾರ, ಮುಲ್ಕಿ, ಮಂಕಿ, ಕಮ್ಮರಡಿ, ಸುಳ್ಯ, ಸಿದ್ದಾಪುರ, ಉಪ್ಪಿನಂಗಡಿ, ಬೆಳ್ತಂಗಡಿ, ಮಾಣಿ, ಕ್ಯಾಸಲ್‌ರಾಕ್, ನಾಪೋಕ್ಲು, ಉಡುಪಿ, ಲಿಂಗನಮಕ್ಕಿ, ಮಂಗಳೂರು, ಸಿದ್ದಾಪುರ, ಮೂರ್ನಾಡುವಿನಲ್ಲಿ ಭಾರಿ ಮಳೆಯಾಗಿದೆ. ಮಾಗಡಿ, ಕಳಸ, ಜೇವರ್ಗಿ, ತ್ಯಾಗರ್ತಿ, ಜೋಯಿಡಾ, ಬಾಳೆಹೊನ್ನೂರು, ಸೋಮವಾರಪೇಟೆ, ಯಲ್ಲಾಪುರ, ಮುದ್ದೇಬಿಹಾಳ, ಲೋಂಡಾ, ಹೊಸಕೋಟೆ, ಹಾರಂಗಿ, ಹೆಸರಘಟ್ಟ, ಸೈದಾಪುರ, ಗುಬ್ಬಿ, ಕುಣಿಗಲ್, ಹುಂಚದಕಟ್ಟೆ,



ಕಿರವತ್ತಿ, ಹಳಿಯಾಳ, ದೇವರಹಿಪ್ಪರಗಿ, ಮಹಾಲಿಂಗಪುರ, ಶಾಹಪುರ, ರಾಯಲ್ಪಾಡು, ಮಧುಗಿರಿ, ಹಾಸನ, ಹೊಸದುರ್ಗ, ಹೊನ್ನಾಳಿ, ಅಜ್ಜಂಪುರ, ಚಿಕ್ಕಬಳ್ಳಾಪುರ, ಅರಕಲಗೂಡಿನಲ್ಲಿ ಮಳೆಯಾಗಿದೆ. ಬೆಂಗಳೂರಿನಲ್ಲಿ ಮೋಡಕವಿದ ವಾತಾವರಣವಿದ್ದು ಮಳೆಯಾಗುವ ಸಾಧ್ಯತೆ ಇದೆ. ಎಚ್‌ಎಎಲ್‌ನಲ್ಲಿ 30.8ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 20.4 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ನಗರದಲ್ಲಿ 31.0 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, ಕೆಐಎಎಲ್‌ನಲ್ಲಿ 32.1 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 21.3 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಜಿಕೆವಿಕೆಯಲ್ಲಿ 30.0 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 19.2 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ ದಾಖಲಾಗಿದೆ.

ಪುಟ 2

## ಬೈಕ್‌ಗೆ ಕಾರು ಡಿಕ್ಕಿ ಇಬ್ಬರ ದುರ್ಮರಣ



**ಚಿತ್ರದುರ್ಗ:** ಬೈಕ್‌ಗೆ ಕಾರು ಡಿಕ್ಕಿ ಹೊಡೆದ ಪರಿಣಾಮ ಸ್ಥಳದಲ್ಲೇ ಇಬ್ಬರು ಬೈಕ್ ಸವಾರರು ಸಾವನ್ನಪ್ಪಿರುವ ಘಟನೆ ಚಿತ್ರದುರ್ಗ ಜಿಲ್ಲೆ ಹೊಸದುರ್ಗ ತಾಲೂಕಿನ ಬೋಕಿಕೆರೆ ಗ್ರಾಮದಲ್ಲಿ ನಡೆದಿದೆ.

ಚಿಕ್ಕಮಗಳೂರು ಜಿಲ್ಲೆ ಸಿದ್ದಾಪುರ ಗ್ರಾಮದ ಪ್ರವೀಣ್ (26) ಹಾಗೂ ಹೊಸದುರ್ಗ ತಾಲೂಕಿನ ಕಡಿವಾಣಕಟ್ಟೆ ಗ್ರಾಮದ ಯೋಗೀಶ್ (27) ಮೃತ ದುರ್ದೈವಿಗಳು. ಹೊಸದುರ್ಗದಿಂದ ಸಿದ್ದಾಪುರಕ್ಕೆ ಬೈಕ್‌ನಲ್ಲಿ ತೆರಳುತ್ತಿರುವಾಗ ಅಪಾಘಾತ ಸಂಭವಿಸಿದೆ. ಶನಿವಾರ ತಡರಾತ್ರಿ, ಭೀಕರ ಅಪಘಾತ ನಡೆದಿದ್ದು, ಹೊಸದುರ್ಗ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಟ್ರಂಪ್ ಮೇಲೆ ಮಾರಣಾಂತಿಕ ದಾಳಿ

# ಪ್ರಧಾನಿ ನರೇಂದ್ರ ಮೋದಿ ಖಂಡನೆ

**ನವದೆಹಲಿ:** ಅಮೆರಿಕದ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ರ‍್ಯಾಲಿ ಮೇಲೆ ನಡೆದ ಗುಂಡಿನ ದಾಳಿಯನ್ನು ಪ್ರಧಾನಿ ನರೇಂದ್ರ ಮೋದಿ ತೀವ್ರವಾಗಿ ಖಂಡಿಸಿದ್ದಾರೆ. ತನ್ನ ಸ್ನೇಹಿತನ ಮೇಲೆ ನಡೆದಿರುವ ಹಲ್ಲೆಯಿಂದ ಬೇಸರಗೊಂಡಿದ್ದು, ಇದನ್ನು ತೀವ್ರವಾಗಿ ಖಂಡಿಸುವುದಾಗಿ ತಿಳಿಸಿದ್ದಾರೆ. ರಾಜಕೀಯ ಮತ್ತು ಪ್ರಜಾಪ್ರಭುತ್ವದಲ್ಲಿ ಹಿಂಸೆಗೆ ಅವಕಾಶವಿಲ್ಲ, ಅವರು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ನಾನು ಬಯಸುತ್ತೇನೆ ಎಂದು ತಮ್ಮ ಎಕ್ಸ್ ಪೋಸ್ಟ್‌ನಲ್ಲಿ ಬರೆದಿದ್ದಾರೆ. ಅಮೆರಿಕದ ಮಾಧ್ಯಮ ವರದಿಗಳ ಪ್ರಕಾರ, ಡೊನಾಲ್ಡ್ ಟ್ರಂಪ್ ಪೆನ್ಸಿಲ್ವೇನಿಯಾದ ಬಟ್ಲರ್‌ನಲ್ಲಿ ಚುನಾವಣಾ ರ‍್ಯಾಲಿಯನ್ನು ಉದ್ದೇಶಿಸಿ ಮಾತನಾಡುತ್ತಿದ್ದರು. ಆಗ ಏಕಾಏಕಿ ದುಷ್ಕರ್ಮಿಗಳು ದಾಳಿ ನಡೆಸಿದ್ದಾರೆ. ದುಷ್ಕರ್ಮಿಗಳು ಒಂದರ ಹಿಂದೆ ಒಂದರಂತೆ ಹಲವು ಸುತ್ತು ಗುಂಡು ಹಾರಿಸಿದ್ದಾರೆ.

ಟ್ರಂಪ್ ಬಲ ಕಿವಿಗೆ ಗಾಯವಾಗಿದೆ, ರಹಸ್ಯ ಸೇವಾ ತಂಡ ಕೂಡಲೇ ಅವರನ್ನು ಸ್ಥಳದಿಂದ ಹೊರಗೆ ಕರೆದೊಯ್ದರು. ಟ್ರಂಪ್ ಮೇಲೆ ಬುಲೆಟ್ ಹಾರಿದ



ತಕ್ಷಣ, ಪೊಲೀಸರೂ ಕಾರ್ಯಪ್ರವೃತ್ತರಾಗಿ ಪ್ರತಿದಾಳಿ ಆರಂಭಿಸಿದರು. ದಾಳಿಯಲ್ಲಿ ಶಂಕಿತ ಶೂಟರ್ ಸೇರಿದಂತೆ ಇಬ್ಬರು ಸಾವನ್ನಪ್ಪಿದ್ದಾರೆ.

ಬಟ್ಲರ್ ಕೌಂಟಿ ಡಿಸ್ಟ್ರಿಕ್ಟ್ ಅಟಾರ್ನಿ ರಿಚರ್ಡ್ ಗೋಲ್ಡಿಂಗರ್ ಅವರು ಶೂಟರ್‌ಗಳಲ್ಲಿ ಒಬ್ಬರು ಸೇರಿದಂತೆ ಇಬ್ಬರು ಸಾವನ್ನಪ್ಪಿದ್ದಾರೆ ಎಂದು ವಾಷಿಂಗ್ಟನ್ ಪೋಸ್ಟ್ ವರದಿ ಮಾಡಿದೆ. ಅಮೆರಿಕ ಅಧ್ಯಕ್ಷ ಜೋ ಬೈಡನ್ ತಮ್ಮ ಪ್ರತಿಸ್ಪರ್ಧಿ ಟ್ರಂಪ್ ಮೇಲಿನ ಮಾರಣಾಂತಿಕ ದಾಳಿಯನ್ನು ಖಂಡಿಸಿದರು. ಜಾರ್ಜ್ ಬುಷ್, ಬರಾಕ್ ಒಬಾಮಾ ಸೇರಿದಂತೆ ಇತರರು ದಾಳಿಯನ್ನು ಖಂಡಿಸಿದ್ದಾರೆ.

ನಮ್ಮ ಪ್ರಜಾಪ್ರಭುತ್ವದಲ್ಲಿ ರಾಜಕೀಯ ಹಿಂಸೆಗೆ ಜಾಗವಿಲ್ಲ ಎಂದು ಒಬಾಮಾ ಹೇಳಿದ್ದಾರೆ. ಏನಾಯಿತು ಎಂದು ನಮಗೆ ಇನ್ನೂ ನಿಖರವಾಗಿ ತಿಳಿದಿಲ್ಲ, ಟ್ರಂಪ್ ಗಂಭೀರವಾಗಿ ಗಾಯಗೊಂಡಿಲ್ಲ ಇದಕ್ಕಾಗಿ ನಾವು ನಿರಾಳರಾಗಬೇಕು ಎಂದಿದ್ದಾರೆ.

## ಡೊನಾಲ್ಡ್ ಟ್ರಂಪ್ ಮೇಲೆ ಗುಂಡಿನ ದಾಳಿ




**ನ್ಯೂಯಾರ್ಕ್:** ಪೆನ್ಸಿಲ್ವೇನಿಯಾದಲ್ಲಿ ನಡೆದ ರ‍್ಯಾಲಿಯಲ್ಲಿ ಭಾಷಣ ಮಾಡುತ್ತಿದ್ದಾಗ ಅಮೆರಿಕ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮೇಲೆ ಗುಂಡಿನ ದಾಳಿ ನಡೆದಿದೆ. ದಾಳಿಯಿಂದ ಟ್ರಂಪ್ ಸ್ವಲ್ಪದರಲ್ಲೇ ಪಾರಾಗಿದ್ದು, ಕಿವಿಗೆ ಗಾಯವಾಗಿದೆ.

ಯುಎಸ್ ಮಾಜಿ ಅಧ್ಯಕ್ಷರನ್ನು ಭದ್ರತಾ ಸಿಬ್ಬಂದಿ ರಕ್ಷಿಸಿ ವೇದಿಕೆಯಿಂದ ತಕ್ಷಣವೇ ವೇದಿಕೆಯಿಂದ ಸ್ಥಳದಿಂದ ಹೊರಗಡೆ ಕರೆದೊಯ್ದರು. ಭಯಾನಕ ಘಟನೆ ಸಂಭವಿಸಿದ ಕ್ಷಣದ ದೃಶ್ಯಗಳು ವೀಡಿಯೊದಲ್ಲಿ ಸೆರೆಯಾಗಿದೆ.

ಪುಟ 2

## ಗರ್ಭಿಣಿ ಅನುಮಾನಾಸ್ಪದ ಸಾವು!

**ಬೆಳಗಾವಿ:** ಮೈಸೂರು ಮೂಲದ ವಿವಾಹಿತೆ ಮಹಿಳೆಯೊರ್ವಳು ಅನುಮಾನಾಸ್ಪದವಾಗಿ ಮೃತಪಟ್ಟಿರುವ ಘಟನೆ ಬೆಳಗಾವಿ ಜಿಲ್ಲೆಯಲ್ಲಿ ನಡೆದಿದೆ.

ಮಂಜುಳಾ(22) ಮೃತ ದುರ್ದೈವಿ, ನಾಲ್ಕು ತಿಂಗಳ ಗರ್ಭಿಣಿಯಾಗಿರುವ ಮೃತ ಮಹಿಳೆ. ಒಂದೂವರೆ ವರ್ಷದ ಹಿಂದೆ ಇನ್‌ಸ್ಟಾಗ್ರಾಂ ಮೂಲಕ ಬೆಳಗಾವಿಯ ಮಚ್ಚೆ ಮೂಲದ ಬಾಳೇಶ ಎಂಬಾತನ ಪರಿಚಯವಾಗಿತ್ತು.ಬೆಳಗಾವಿ ಜಿಲ್ಲೆಯ ಉದ್ಯಮಭಾಗದ ಕೈಗಾರಿಕೆ ಪ್ರದೇಶದಲ್ಲಿ ಕೆಲಸ ಮಾಡ್ತಿದ್ದ ಬಾಳೇಶ. ಬಾಳೇಶ-ಮಂಜುಳಾ ಇಬ್ಬರು ಇನ್‌ಸ್ಟಾಗ್ರಾಮ ಮೂಲಕ ಪರಿಚಯವಾಗಿ ಪರಿಚಯ ಪ್ರೀತಿಗೆ ತಿರುಗಿತ್ತು, ಮದುವೆಯಾಗಲು ನಿರ್ಧರಿಸಿದ್ದರು.ಆದರೆ ಇದಕ್ಕೆ ಕುಟುಂಬಸ್ಥರು ವಿರೋಧ ವ್ಯಕ್ತಪಡಿಸಿದ್ದರು. ಮನೆಯವರ ವಿರೋಧದ ನಡುವೆಯೂ ಇಬ್ಬರು ಪರಸ್ಪರ ಪ್ರೀತಿಸಿ ಮದುವೆಯಾಗಿದ್ದರು.ಮದುವೆ ಬಳಿಕ ಬಾಳೇಶನ ಜೊತೆಗೆ ಬೆಳಗಾವಿಯಲ್ಲಿ ವಾಸವಾಗಿದ್ದ ಮೃತ ಮಹಿಳೆ.ನಾಲ್ಕು ತಿಂಗಳ ಗರ್ಭಿಣಿಯಾಗಿರುವಾಗಲೇ ಅನುಮಾನಾಸ್ಪದವಾಗಿ ಮೃತಪಟ್ಟಿದ್ದಾಳೆ.ಎರಡು ದಿನಗಳ ಹಿಂದೆಯೇ ಮನೆಯಲ್ಲಿ ನೇಣುಬಿಗಿದ ಸ್ಥಿತಿಯಲ್ಲಿ ಶವ ಪತ್ತೆಯಾಗಿದೆ. ಉಸಿರುಗಟ್ಟಿಸಿ ಕೊಲೆ ಮಾಡಲಾಗಿದೆ ಎಂದು ಆರೋಪಿಸಿರುವ ಮಹಿಳೆಯ ಪೋಷಕರು.ಗಂಡನ ಕಿರುಕುಳ ಬೇಸತ್ತು ನೇಣುಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಳಾ?ಅಥವಾ ಉಸಿರುಗಟ್ಟಿಸಿ ಕೊಂದು ಬಳಿ ನೇಣುಬಿಗಿದನಾ ಪತಿ ಸದ್ಯ ಘಟನೆ ಸಂಬಂಧ ಬೆಳಗಾವಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು. ವಿಚಾರಣೆ ಮುಂದುವರಿಸಿದ್ದಾರೆ.

## 6 ತಿಂಗಳ ಹಿಂದೆ ಮೃತಪಟ್ಟಿದ್ದ ಅಧಿಕಾರಿಗೆ ವರ್ಗಾವಣೆ; ಪೌರಾಡಳಿತ ಇಲಾಖೆ ಯಡವಟ್ಟು

**ಕಲಬುರಗಿ:** ಆರು ತಿಂಗಳ ಹಿಂದೆ ಮೃತಪಟ್ಟ ಅಧಿಕಾರಿಯನ್ನು ವರ್ಗಾವಣೆ ಮಾಡಿ ಸರ್ಕಾರ ಮತ್ತು ಪೌರಾಡಳಿತ ಇಲಾಖೆ ಯಡವಟ್ಟು ಮಾಡಿರುವ ಘಟನೆ ಕಲಬುರಗಿಯಲ್ಲಿ ನಡೆದಿದೆ. ನಗರಾಭಿವೃದ್ಧಿ ಇಲಾಖೆಯ ಕಿರಿಯ ಎಂಜಿನಿಯರ್ ಅಶೋಕ ಪುಟಪಾಕ ವರ್ಗಾವಣೆ ಮಾಡಿ ಯಡವಟ್ಟು ಮಾಡಿದೆ. ಅಶೋಕ ಪುಟಪಾಕ ಜನವರಿ 12 ರಂದು ಮೃತಪಟ್ಟಿದ್ದರು. ಜು.9 ರಂದು ಕೊಡಗಿಗೆ ವರ್ಗಾವಣೆ ಮಾಡಿ ಸರ್ಕಾರ ಆದೇಶ ಹೊರಡಿಸಿ ಲೇವಡಿಗೆ ಗುರಿಯಾಗಿದೆ. ಕಲಬುರಗಿ ಜಿಲ್ಲೆಯ ಚಿತ್ತಾಪುರ ತಾಲೂಕಿನ ದಿಗ್ಗಾಂವ್ ಗ್ರಾಮದ ನಿವಾಸಿಯಾಗಿದ್ದ ಅಶೋಕ್ ಸೇಡಂ ಪುರಸಭೆಯಲ್ಲಿ ಕಿರಿಯ ಎಂಜಿನಿಯರ್ ಆಗಿ ಕೆಲಸ ಮಾಡುತ್ತಿದ್ದರು. ಇಲಾಖೆಯ ನೌಕರ ಮೃತಪಟ್ಟ ವಿಚಾರ ಗೊತ್ತಿಲ್ಲದೆಯೇ ವರ್ಗಾವಣೆ ಮಾಡಲಾಗಿದೆಯಾ ಅಥವಾ ಸಾಯುವ ಮುನ್ನ ಅಶೋಕ್ ಪುಟಪಾಕ ವರ್ಗಾವಣೆ ಬಯಸಿದ್ದರಾ ಎಂಬ ಪ್ರಶ್ನೆ ಮೂಡಿದೆ.






## ಶಂಕಿತ ಡೆಂಗ್ಯೂಗೆ 18 ವರ್ಷದ ಯುವತಿ ಬಲಿ

**ಚಿಕ್ಕಬಳ್ಳಾಪುರ:** ಶಂಕಿತ ಡೆಂಗ್ಯೂಗೆ 18 ವರ್ಷದ ಯುವತಿ ಬಲಿಯಾಗಿರುವ ಘಟನೆ ಚಿಕ್ಕಬಳ್ಳಾಪುರ ಜಿಲ್ಲೆಯ ಗೌರಿಬಿದನೂರು ತಾಲೂಕಿನ ನಾಮಗೊಂಡ್ಲು ಗ್ರಾಮದಲ್ಲಿ ನಡೆದಿದೆ. ಯಶಸ್ವಿನಿ (18) ಮೃತ ಯುವತಿ.ಕಳೆದ ಒಂದು ವಾರದಿಂದ ತೀವ್ರತರನಾದ ಜ್ವರದಿಂದ ಬಳಲುತ್ತಿದ್ದ ಯಶಸ್ವಿನಿಯನ್ನು ಬೆಂಗಳೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು.ಚಿಕಿತ್ಸೆ ಫಲಕಾರಿಯಾಗದೆ ಯಶಸ್ವಿನಿ ಮೃತಪಟ್ಟಿದ್ದಾಳೆ. ದ್ವಿತೀಯ ಪಿಯುಸಿಯಲ್ಲಿ 95% ಅಂಕ ಗಳಿಸಿದ್ದ ಯಶಸ್ವಿನಿ ಪ್ರಥಮ ವರ್ಷದ ಪದವಿ ವ್ಯಾಸಂಗ ಮಾಡುತ್ತಿದ್ದಳು. ರಾಜ್ಯದಲ್ಲಿ ಶುಕ್ರವಾರ ಒಂದೇ ದಿನ 400ಕ್ಕೂ ಹೆಚ್ಚು ಡೆಂಗ್ಯೂ ಕೇಸ್ ಪತ್ತೆಯಾಗಿದೆ. ಶುಕ್ರವಾರ ರಾಜ್ಯದಲ್ಲಿ 437 ಡೆಂಗ್ಯೂ ಕೇಸ್ ದಾಖಲಾಗಿತ್ತು.ರಾಜ್ಯದಲ್ಲಿ ಒಟ್ಟು ಡೆಂಗ್ಯೂ ಕೇಸ್ 8,658ಕ್ಕೆ ಏರಿಕೆಯಾಗಿದೆ. ಶುಕ್ರವಾರದವರೆಗೆ ಡೆಂಗ್ಯೂಗೆ ಏಳು ಜನರು ಬಲಿಯಾಗಿದ್ದು, ಇದು ಎಂಟನೇ ಬಲಿಯಾಗಿದೆ.



### ಕೀನ್ಯಾ ಪ್ರಜೆ ಬೆಂಗಳೂರು ವಿಮಾನ ನಿಲ್ದಾಣದಲ್ಲಿ ವಶಕ್ಕೆ!

# 30 ಕೋಟಿ ರೂ. ಮೌಲ್ಯದ ಕೊಕೇನ್ ವಶ

**ಬೆಂಗಳೂರು:** 30 ಕೋಟಿ ರೂಪಾಯಿ ಮೌಲ್ಯದ ಕೊಕೇನ್ ಹೊಂದಿದ್ದ ಕೀನ್ಯಾ ಪ್ರಜೆಯನ್ನು ಬೆಂಗಳೂರಿನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಬಂಧಿಸಲಾಗಿದೆ.

ಬೆಂಗಳೂರು ವಿಭಾಗದ ಕಂದಾಯ ಗುಪ್ತಚರ ನಿರ್ದೇಶನಾಲಯದ ಮಾಹಿತಿಯ ಆಧಾರದಲ್ಲಿ ಕಾರ್ಯಾಚರಣೆ ನಡೆಸಿ ಕೀನ್ಯಾ ಪ್ರಜೆಯನ್ನು ಬಂಧಿಸಲಾಗಿದೆ.

ಅಧಿಕಾರಿಗಳ ಪ್ರಕಾರ, ಇಂಡಿಗೋ ವಿಮಾನದ ಮೂಲಕ ಶುಕ್ರವಾರ ದೋಹಾದಿಂದ ಬೆಂಗಳೂರಿಗೆ ಪ್ರಯಾಣಿಸಿದ ಕೀನ್ಯಾದ ಪ್ರಜೆಯನ್ನು ಡಿಆರ್‌ಐ ಅಧಿಕಾರಿಗಳು ಬೆಂಗಳೂರು ವಿಮಾನ ನಿಲ್ದಾಣದಲ್ಲಿ ತಡೆದಿದ್ದಾರೆ.

ಅಧಿಕಾರಿಗಳ ಪ್ರಕಾರ, ಇಂಡಿಗೋ ವಿಮಾನದ ಮೂಲಕ ಶುಕ್ರವಾರ ದೋಹಾದಿಂದ ಬೆಂಗಳೂರಿಗೆ ಪ್ರಯಾಣಿಸಿದ ಕೀನ್ಯಾದ ಪ್ರಜೆಯನ್ನು ಡಿಆರ್‌ಐ ಅಧಿಕಾರಿಗಳು ವಿಸ್ತಾರವಾದ ಕಣ್ಗಾವಲು ನಂತರ ಬೆಂಗಳೂರು ವಿಮಾನ ನಿಲ್ದಾಣದಲ್ಲಿ ತಡೆದರು. ತಪಾಸಣೆ ವೇಳೆ ಪ್ರಯಾಣಿಕಳ ಬ್ಯಾಗೇಜ್ ನಲ್ಲಿ ಬಿಳಿ ಬಣ್ಣದ ಪುಡಿ ಪದಾರ್ಥ ಪತ್ತೆಯಾಗಿದ್ದು 3 ಕೆಜಿಗಳಷ್ಟಿತ್ತು. ಇದು 30 ಕೋಟಿ ರೂಪಾಯಿ ಮೌಲ್ಯದ್ದಾಗದ್ದ ಕೊಕೇನ್ ಎಂದು ತಿಳಿದುಬಂದಿದೆ.

ಫೀಲ್ಡ್ ಟೆಸ್ಟಿಂಗ್ ಕಿಟ್‌ನ ಪ್ರಕಾರ ಪುಡಿಮಾಡಿದ ವಸ್ತುವು ಕೊಕೇನ್ ಎಂದು ಪರೀಕ್ಷೆಯಲ್ಲಿ ಸಾಬೀತಾಗಿದೆ. ಪ್ರಯಾಣಿಕಳನ್ನು ಎನ್‌ಡಿಪಿಎಸ್ (ನಾರ್ಕೋಟಿಕ್ ಡ್ರಗ್ಸ್ ಮತ್ತು ಸೈಕೋಟ್ರೋಪಿಕ್ ಸಬ್‌ಸ್ಟೆನ್ಸ್) ಕಾಯ್ದೆ, 1985 ರ ನಿಬಂಧನೆಗಳ ಅಡಿಯಲ್ಲಿ ಬಂಧಿಸಲಾಗಿದೆ.



ಹೆಚ್ಚಿನ ತನಿಖೆ ಪ್ರಗತಿಯಲ್ಲಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ಇನ್ನೊಂದು ಘಟನೆಯಲ್ಲಿ, ಜುಲೈ 5 ರಂದು ಬ್ಯಾಂಕಾಕ್‌ನಿಂದ ಬರುತ್ತಿದ್ದ ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ನಿಷಿದ್ಧ ವಸ್ತುಗಳನ್ನು ಸಾಗಿಸುತ್ತಿದ್ದ ಶಂಕಿತ ಇಬ್ಬರು ಭಾರತೀಯ ಮಹಿಳಾ ಪ್ರಯಾಣಿಕರನ್ನು ಡಿಆರ್‌ಐ ಅಧಿಕಾರಿಗಳು ತಡೆದರು.

ಇನ್ನೊಂದು ಘಟನೆಯಲ್ಲಿ, ಜುಲೈ 5 ರಂದು ಬ್ಯಾಂಕಾಕ್‌ನಿಂದ ಬರುತ್ತಿದ್ದ ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ನಿಷಿದ್ಧ ವಸ್ತುಗಳನ್ನು ಸಾಗಿಸುತ್ತಿದ್ದ ಶಂಕಿತ ಇಬ್ಬರು ಭಾರತೀಯ ಮಹಿಳಾ ಪ್ರಯಾಣಿಕರನ್ನು ಡಿಆರ್‌ಐ ಅಧಿಕಾರಿಗಳು ತಡೆದಿದ್ದರು.

3.2 ಕೆ.ಜಿಯಷ್ಟು ಹೈಡ್ರೋನಿಕ್ ಮತ್ತು ಬರುವ ಪದಾರ್ಥ ಪತ್ತೆಯಾಗಿದ್ದು 3 ಕೋಟಿ ರೂಪಾಯಿ ಮೌಲ್ಯದ್ದಾಗಿದೆ ಎಂದು ಅಂದಾಜಿಸಲಾಗಿದೆ.

## ಕಾಂಗ್ರೆಸ್ ಶಾಸಕ ಆರ್.ವಿ.ದೇಶಪಾಂಡೆಗೆ ಸೇರಿದ ಕಾರಿನ ಟೈರ್ ಕಳ್ಳತನ!

**ಬೆಂಗಳೂರು:** ಬೆಂಗಳೂರು-ತುಮಕೂರು ಮುಖ್ಯರಸ್ತೆಯ ದಾಸನಾಪುರ ಬಳಿಯಿರುವ ಮಾಜಿ ಸಚಿವ ಹಾಗೂ ಹಳಿಯಾಳ ಕಾಂಗ್ರೆಸ್ ಶಾಸಕ ಆರ್.ವಿ.ದೇಶಪಾಂಡೆ ಅವರ ಫಾರ್ಮ್‌ಹೌಸ್‌ನಲ್ಲಿ ಕಳೆದ ಶನಿವಾರ ದುಷ್ಕರ್ಮಿಗಳು ಹೊಸ ಸ್ಪೋರ್ಟ್ಸ್ ಯುಟಿಲಿಟಿ ವೆಹಿಕಲ್ (ಎಸ್‌ಯುವಿ) ನಾಲ್ಕು ವೀಲ್‌ಗಳನ್ನು ಕದ್ದಿದ್ದಾರೆ.

ಆರೋಪಿಗಳು ನಾಲ್ಕು ರಿಮ್‌ಗಳ ಕೆಳಗೆ ಇಟ್ಟಿಗೆಗಳನ್ನು ಇಟ್ಟು ಚಕ್ರಗಳನ್ನು ಕದ್ದಿದ್ದಾರೆ. 24 ಗಂಟೆ ಭದ್ರತೆಯ ನಡುವೆಯೂ ಕಳ್ಳತನ ನಡೆದಿದೆ. ಹಿರಿಯ ರಾಜಕಾರಣಿ ದೇಶಪಾಂಡೆ ಅವರ ಪುತ್ರ ಪ್ರಸಾದ್ ಆರ್ ದೇಶಪಾಂಡೆ ಕಾರ್ ಡೀಲರ್‌ಶಿಪ್ ಹೊಂದಿದ್ದು, ನಗರದ ಮೂರು ವಿವಿಧ ಸ್ಥಳಗಳಲ್ಲಿ ಶೋರೂಂಗಳನ್ನು ಹೊಂದಿದ್ದಾರೆ. ಕಂಪನಿಯ ಬಿಡದಿ ಘಟಕದಿಂದ ತರುವ ನಾಲ್ಕು ಚಕ್ರದ ವಾಹನಗಳಿಗೆ ಫಾರ್ಮ್‌ಹೌಸ್ ಅನ್ನು ಸ್ಟಾಕ್‌ಯಾಡ್‌ನಂತೆ ಬಳಸಲಾಗುತ್ತದೆ.

ಸ್ಟಾಕ್ ಯಾರ್ಡ್ ಉಸ್ತುವಾರಿ ಎ.ಎಸ್.ಹರೀಶ್ ಮಾದನಾಯಕನಹಳ್ಳಿ ಪೊಲೀಸರಿಗೆ ದೂರು ನೀಡಿದ್ದಾರೆ. ಬೆಂಗಳೂರು ಉತ್ತರ ತಾಲೂಕಿನ ಆಲೂರು ಕ್ರಿಕೆಟ್ ಸ್ಟೇಡಿಯಂ ಬಳಿ ದೇಶಪಾಂಡೆ ಅವರ ಫಾರ್ಮ್ ಹೌಸ್ ಇದೆ. ಪ್ರಸಾದ್ ಆರ್ ದೇಶಪಾಂಡೆ ಕಾರು ಆಟೋಮೊಬೈಲ್ ಡೀಲರ್ ಆಗಿದ್ದು, ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ರಸ್ತೆ ಮತ್ತು ಹೆಬ್ಬಾಳದಲ್ಲಿ ಶೋರೂಂಗಳನ್ನು ಹೊಂದಿದ್ದಾರೆ. ಫಾರ್ಮ್‌ಹೌಸ್‌ನಲ್ಲಿ ಆರು ಮಂದಿ ಸೆಕ್ಯುರಿಟಿ ಗಾರ್ಡ್‌ಗಳಿದ್ದು, ಅವರು ದಿನವಿಡೀ ಪಾಳಿಯಲ್ಲಿ ಕೆಲಸ ಮಾಡುತ್ತಾರೆ.

ದುಷ್ಕರ್ಮಿಗಳು ಮ್ಯಾಗ್ ಎಸ್ ಯು ವಿಯಿಂದ ಚಕ್ರಗಳನ್ನು ಕದ್ದಿದ್ದಾರೆ. ಭದ್ರತಾ ಮೇಲ್ವಿಚಾರಕರು ಸ್ಟಾಕ್‌ಯಾರ್ಡ್‌ನಲ್ಲಿ ಸುತ್ತಾಡಿದಾಗ ರಾತ್ರಿ 10 ರಿಂದ ಬೆಳಿಗ್ಗೆ 8 ರ ನಡುವೆ ನಡೆದ ಕಳ್ಳತನ ಬೆಳಕಿಗೆ ಬಂದಿದೆ. ಕಳವಾದ ಚಕ್ರಗಳ ಬೆಲೆ ಸುಮಾರು 1 ಲಕ್ಷ ರೂ.ಆಗಿದ್ದ ಇದುವರೆಗೂ ಯಾರನ್ನೂ ಬಂಧಿಸಿಲ್ಲ.

ಇದೇ ರೀತಿಯ ಘಟನೆ ನಡೆದಿರುವುದು ಇದು ಎರಡನೇ ಬಾರಿ. ಎರಡು ವರ್ಷಗಳ ಹಿಂದೆ ದುಷ್ಕರ್ಮಿಗಳು ಟೂ ವೀಲರ್ ವಾಹನಗಳ ಟೈರ್‌ಗಳನ್ನು ಕದ್ದೊಯ್ದಿದ್ದರು. ಒಳಗಿನವರ ಕೈವಾಡದ ಸಾಧ್ಯತೆಯನ್ನು ನಾವು ತಳ್ಳಿಹಾಕುವುದಿಲ್ಲ. ಕಾಂಪೌಂಡ್ ಗೋಡೆಯ ಎತ್ತರವು ತುಂಬಾ ಚಿಕ್ಕದಾಗಿರುವುದರಿಂದ ಹೊರಗಿನವರು ಸುಲಭವಾಗಿ ಆವರಣವನ್ನು ಪ್ರವೇಶಿಸಬಹುದು, ಎಂದು ಪೊಲೀಸರು ತಿಳಿಸಿದ್ದಾರೆ. ಮಾದನಾಯಕನಹಳ್ಳಿ ಪೊಲೀಸರು ಬಿಎನ್‌ಎಸ್ ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

### ಮುಡಾ ಹಗರಣ

# ಸಿಎಂಗೆ ಸಂಸದ ಶೆಟ್ಟರ್ ಸವಾಲ್

**ಬಾಗಲಕೋಟೆ:** ರಾಜ್ಯದಲ್ಲಿ ಮುಡಾ ಅಕ್ರಮ ವಿಚಾರವಾಗಿ ಬಹುದೊಡ್ಡ ಪ್ರಮಾಣದಲ್ಲಿ ಬಿಜೆಪಿ ಹೋರಾಟ ಮಾಡುತ್ತಿದೆ ಎಂದು ಸಂಸದ ಜಗದೀಶ್ ಶೆಟ್ಟರ್ ತಿಳಿಸಿದರು.

ಬಾಗಲಕೋಟೆಗೆ ಭೇಟಿ ನೀಡಿದ್ದ ವೇಳೆ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ವಾಲ್ಮೀಕಿ ನಿಗಮದಲ್ಲಿ ಸುಮಾರು 200 ಕೋಟಿಯಷ್ಟು ಅಪರಾತಪರಾ ಆಗಿರೋದು ಬೆಳಕಿಗೆ ಬಂದಿದೆ.ಈ ಬಗ್ಗೆ ಈಗಾಗಲೇ ಇಡಿ ಹಾಗೂ ಸಿಬಿಐ ತನಿಖೆ ನಡೆಸುತ್ತಿದೆ. ಎಸ್‌ಐಟಿಯಿಂದ ನಾಗೇಂದ್ರರನ್ನ ಅರೆಸ್ಟ್ ಮಾಡಲು ಆಗ್ತಾನೆ ಇರಲಿಲ್ಲ. ಆದರೆ ಇದೀಗ ಇಡಿ ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದೆ. ಇಷ್ಟೆಲ್ಲ ಅಪರಾತಪರಾ ನಡೆದರೂ ಸಿಎಂ ಹಾಗೂ ಇಡೀ ಸರ್ಕಾರ ಈ ಪ್ರಕರಣವನ್ನು ಮುಚ್ಚಿಹಾಕುವಂತ ಕೆಲಸ ಮಾಡಿತ್ತು.ಆದ್ರೆ ಇಡಿ ತನಿಖೆ ಆರಂಭವಾಗ್ತಿದ್ದಂತೆ ಹೊಸ ವಿಚಾರಗಳು ಹೊರಬರ್ತಿವೆ ಎಂದರು.



ವಾಲ್ಮೀಕಿ ಹಗರಣದ ಜೊತೆಗೆ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲೂ ಸಾವಿರಾರು ಕೋಟಿ ಹಗರಣ ನಡೆದಿದೆ. ಇದರಲ್ಲಿ ನೇರವಾಗಿ ಸಿಎಂ ಸಿದ್ದರಾಮಯ್ಯ ಶಾಮೀಲಾಗಿದ್ದು ಕಂಡುಬಂದಿದೆ.ಅವರು ಪತ್ನಿ ಹೆಸರಲ್ಲಿ ಮೂರು ಎಕರೆಯಷ್ಟು ಜಮೀನು ಇದೆ.ಅದನ್ನ 2009ರ ನಗರಾಭಿವೃದ್ಧಿ ರೂಲ್ಸ್ ಪ್ರಕಾರ ಲೇಔಟ್ ಮಾಡಲು ಭೂಸ್ವಾಧೀನ ಮಾಡಿದ್ರೆ ಅದಕ್ಕೆ ಯಾವುದೇ ಹಣ ಕೊಡುವಂತದ್ದೇನಿಲ್ಲ. ಅದರ ಬದಲು ಬೇರೆ ಕಡೆ ಅವರಿಗೆ ಶೇ.40-50 ಫ್ಲಾಟ್‌ಗಳನ್ನ ಕೊಡಬೇಕು ಎಂಬುವ ಪ್ಯಾಕೇಜ್ ಅದು.ಅದೇ ಆಧಾರದ ಮೇಲೆ ಸಿಎಂ ಸಿದ್ದರಾಮಯ್ಯ, ನಮಗೆ 50% ಪ್ಲಾಟ್ ಅಲೋಟ್ ಮಾಡಿದ್ದು ಸರಿಯಿದೆ ಅಂತಾ ವಾದ ಮಾಡ್ತಿದ್ದಾರೆ.ಅವ್ರ ಲ್ಯಾಂಡ್ ಅಕ್ವಿಜಷನ್ ಆಗಿಲ್ಲ, ಹಿಂದೆ ನೋಟಿಫೈ ಆಗಿತ್ತು, ಮುಂದೆ ಡಿ ನೋಟಿಫೈ ಆಯಿತು.ಇಷ್ಟೆಲ್ಲ ಆದ ಮೇಲೆ ಆ ಜಮೀನು ಅವ್ರ (ಸಿಎಂ) ಕಬ್ಜಾದಲ್ಲಿರಬೇಕಲ್ಲ. ಡೆವೆಲಪ್‌ಮೆಂಟ್ ಅಥಾರಿಟಿಯಿಂದ ಭೂಮಿ ಕಬ್ಜಾ ಯಾಕೆ ತಗೊಂಡಿಲ್ಲ ಅನ್ನೋ ಪ್ರಶ್ನೆ ಬರುತ್ತೆ.ನಿಮ್ಮ ಜಾಗದಲ್ಲಿ ಡೆವೆಲ್ಪಮೆಂಟ್ ಆಥಾರಿಟಿ ಅವ್ರು ಎನ್ಕ್ರೋಚ್ ಮಾಡಿ, ಲೇಔಟ್ ಮಾಡುವ ಪ್ರಶ್ನೆಯೇ ಬರತಿರಲಿಲ್ಲ. ನೀವು ಉದ್ದೇಶ ಪೂರ್ವಕವಾಗಿ, ಪ್ಲಾಟ್ ಡೆವಲಪ್ಮೆಂಟ್ ಮಾಡಿ, ಮುಂದೆ ಪ್ಲಾಟ್ ಕ್ಲೇಮ್ ಮಾಡಿದ್ರಾಯಿತು ಎಂದು ಅಂದುಕೊಂಡಿದ್ದು.ಇದು ಉದ್ದೇಶಪೂರ್ವಕ ಇನ್ನೋಸೆನ್ಸ್.ನಿಮ್ಮ ಲೇಔಟ್‌ನಲ್ಲಿ ಯಾರೋ ಬಂದು ಪ್ಲಾಟ್ ಹಂಚುತ್ತಾರೆ ಅಂದ್ರೆ ಮಾಲೀಕರಾಗಿ ನೀವು ಸುಮ್ಮನೆ ಕೂತಿದ್ದು ದೊಡ್ಡ ಅಪರಾಧ. ಸಿಎಂ ಉದ್ದೇಶಪೂರ್ವಕವಾಗಿ ಸೈಲೆಂಟ್ ಇದ್ದಾರೆ.ಹತ್ತು ವರ್ಷಗಳ ಹಿಂದೆ ಆದ ಲೇಔಟ್ ನಲ್ಲಿ, ಬೆಲೆಬಾಳುವ ಸೈಟ್ ಗಳನ್ನ ತಮ್ಮ ಕುಟುಂಬದ ಹೆಸ್ರಲ್ಲಿ ಮಾಡಿಕೊಳ್ತಾರೆ ಅಂದ್ರೆ, ಇದ್ರಲ್ಲಿ ದೊಡ್ಡದಾದಂತ ಭ್ರಷ್ಟಾಚಾರ ನಡೆದಿದೆ. ಅದಕ್ಕಾಗಿ ಈ ಪ್ರಕರಣದಲ್ಲಿ ಸಿಬಿಐ ತನಿಖೆ ಆಗಬೇಕು ಎಂದು ಬಿಜೆಪಿ ಆಗ್ರಹಿಸುತ್ತೆ. ಅದಕ್ಕಾಗಿ ಹೋರಾಟಗಳು ಪ್ರಾರಂಭವಾಗಿದೆ ಎಂದರು. ಹಿಂದೆ ಅರ್ಕಾವತಿ ಪ್ರಕರಣದಲ್ಲಿ ರಿಡೂ ಮಾಡಿದ್ದ ಸಿದ್ದರಾಮಯ್ಯ ವಿರುದ್ಧ ನಾವು ದೊಡ್ಡ ಪ್ರಮಾಣದ ಹೋರಾಟ ಮಾಡಿದ್ದೆವು.ಆಗಲೂ ನಾವು ಸಿಬಿಐಗೆ ಒತ್ತಾಯ ಮಾಡಿದ್ದೆವು.ನ್ಯಾಯಾಂಗ ತನಿಖೆ ಮಾಡ್ತಿವಿ ಅಂತಾ ನ್ಯಾಯಮೂರ್ತಿ ಕೆಂಪಣ್ಣ ಆಯೋಗವನ್ನು ನೇಮಕವಾಗಿ ತನಿಖೆ ಆಯ್ತು ಆದ್ರೆ, ನ್ಯಾಯಮೂರ್ತಿ ಕೆಂಪಣ್ಣ ಆಯೋಗ ವರದಿ ಏನಾಗಿದೆ ಅದರಲ್ಲಿ ಏನಿದೆ ಎಂದು ಬಹಿರಂಗಪಡಿಸಲಿ.ಅರ್ಕಾವತಿ ಡಿನೋಟಿಫಿಕೇಷನ್ ಪ್ರಕರಣದಲ್ಲಿ ನಾನು ನಿರಪರಾಧಿ ಎಂದು ಪದೇ ಪದೇ ಹೇಳುವ ಸಿದ್ದರಾಮಯ್ಯ, ಕೆಂಪಣ್ಣ ಆಯೋಗದ ವರದಿಯನ್ನ ವಿಧಾನಸಭಾ ಕಲಾಪದ ವೇಳೆ ಮಂಡನೆ ಮಾಡಿ, ನೀವು ನಿರಪರಾಧಿ ಅಂತಾ ಪ್ರೂವ್ ಆಗಿದ್ರೆ, ಅದು ಸಾರ್ವಜನಿಕರಿಗೆ ಗೊತ್ತಾಗಲಿ ಎಂದು ಸವಾಲ್, ಆ ವರದಿಯನ್ನ ಮಂಡನೆ ಮಾಡಲ್ಲ ಅಂದ್ರೆ ಕೆಂಪಣ್ಣ ಆಯೋಗದ ವರದಿ ಸಿದ್ದರಾಮಯ್ಯ ವಿರುದ್ಧ ಇದೆ ಅಂತಾ ನಾನು ಸ್ಪಷ್ಟವಾಗಿ ಹೇಳ್ತೇನೆ. ಮುಡಾ ಹಗರಣ ಸಿಬಿಐ ತನಿಖೆ ಆಗಲೇಬೇಕು, ಅದಕ್ಕಾಗಿ ಸಿಎಂ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದ ಸಂಸದರು.

## ನಿಖಿಲ್ ಅರೆಸ್ಟ್ ಮಾಡೋಕೆ ಪ್ಲ್ಯಾನ್ ಮಾಡಿದ್ರು

**ಬೆಂಗಳೂರು:** ದೇವೇಗೌಡರ ಕುಟುಂಬದಲ್ಲಿ ಉಳಿದವನು ನಿಖಿಲ್ ಅಂತಾ ಅವನನ್ನು ಅರೆಸ್ಟ್ ಮಾಡಲು ಪ್ಲ್ಯಾನ್ ಮಾಡಿದ್ದರು ಎಂದು ಸರ್ಕಾರ ಹಾಗೂ ಹಿರಿಯ ಪೊಲೀಸ್ ಅಧಿಕಾರಿ ವಿರುದ್ಧ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಆರೋಪ ಮಾಡಿದರು.

ನಗರದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಮನಗರ ಸೊಸೈಟಿ ಚುನಾವಣೆ ಮಾಡದ್ದಕ್ಕೆ ನಿಖಿಲ್ ಹೋಗಿದ್ದರು.ಆತನನ್ನು ಅರೆಸ್ಟ್ ಮಾಡೋಕೆ ರಾತ್ರಿ 12 ಗಂಟೆವರೆಗೂ ಚರ್ಚೆ ಆಗಿದೆ. ಯಾವನೋ ಮಂತ್ರಿ ಹೇಳಿದ ಅಂತಾ ನಿಖಿಲ್ ಅರೆಸ್ಟ್ ಮಾಡಿ ಎ1 ಮಾಡಬೇಕು ಎಂದು ಈ ಡಿಜಿ ಪ್ಲ್ಯಾನ್ ಮಾಡಿದ್ದರು. ಇದಾ ಡಿಜಿ ನಿಮ್ಮ ಕೆಲಸ? ದೇವೇಗೌಡರ ಕುಟುಂಬದಲ್ಲಿ ಉಳಿದವನು ನಿಖಿಲ್ ಅಂತಾ ಅವನನ್ನು ಒಳಗೆ ಹಾಕೋಕೆ ಪ್ಲ್ಯಾನ್ ಮಾಡ್ತೀರಾ ಡಿಜಿ ಅವರೇ ಎಂದು ಕಿಡಿಕಾರಿದರು.

ರಾಜ್ಯದಲ್ಲಿ ಹಲವಾರು ರೀತಿಯ ಸರ್ಕಾರದ ಒಂದಲ್ಲ ಒಂದು ಹಗರಣಗಳು ದೇಶದಾದ್ಯಂತ ಚರ್ಚೆ ಆಗ್ತಿದೆ. ನಾನು ಎರಡು ದಿನ ಆಂಧ್ರ, ತೆಲಂಗಾಣದಲ್ಲಿ ಎರಡು ಪಬ್ಲಿಕ್ ಸೆಕ್ಟರ್ ಯುನಿಟ್‌ಗಳ ಸಮಸ್ಯೆ ಪರಿಹಾರಕ್ಕೆ ಹೋದಾಗ ಈ ಹಗರಣ ಬಗ್ಗೆ ಚರ್ಚೆ ಆಗ್ತಿದೆ.ಕಾಂಗ್ರೆಸ್ ಸರ್ಕಾರ ಆಡಳಿತ ಬಂದಾಗಿನಿಂದ ಯಾವ ರೀತಿ ಪ್ರತಿಕ್ರಿಯೆ ಇದೆ ಅಂತಾ ಎರಡು ರಾಜ್ಯದಲ್ಲಿ ನೋಡಿದೆ.ಎಂಪಿಗಳು, ಶಾಸಕರು ಅಲ್ಲಿನ ಸಮಸ್ಯೆ ಪರಿಹಾರಕ್ಕೆ ಬಂದಾಗ ಕಾಂಗ್ರೆಸ್ ಸರ್ಕಾರದ ಬಗ್ಗೆ ಹೇಳಿದ್ದರು.ಬೇರೆ ರಾಜ್ಯದವರು ನಮ್ಮ ರಾಜ್ಯದ ಬಗ್ಗೆ ಹೇಳಿದಾಗ ನೋವಾಯ್ತು ಎಂದು ಸರ್ಕಾರದ ವಿರುದ್ಧ ಆಕ್ರೋಶ ಹೊರಹಾಕಿದರು.



ವಿಪಕ್ಷಗಳು ವಾಲ್ಮೀಕಿ ಹಗರಣ ಮತ್ತು ಮುಡಾ ಹಗರಣದ ಬಗ್ಗೆ ಮಾತಾಡ್ತಾ ಇರೋದು.ವಾಲ್ಮೀಕಿ ನಿಗಮದ ಹಣ ಬೇನಾಮಿ ಅಕೌಂಟ್‌ಗಳಿಗೆ ಹೋಗಿದೆ.ಯಾವ ಸಂದರ್ಭದಲ್ಲಿ ಹೋಯ್ತು ಹಣ?ಲೋಕಸಭೆ ಚುನಾವಣೆ ನೀತಿ ಸಂಹಿತೆ ಜಾರಿ ಆದ ಮಾರ್ಚ್ ಸಮಯದಲ್ಲಿ 94 ಕೋಟಿ ಹಣವನ್ನು ಯಾವ್ಯಾವುದೋ ಹೆಸರಿನಲ್ಲಿ ಅಕೌಂಟ್ ಓಪನ್ ಮಾಡಿ ಸ್ವೇಚ್ಛಾಚಾರವಾಗಿ ವರ್ಗಾವಣೆ ಮಾಡಿದ್ದಾರೆ.ಅಲ್ಲಿ ಕೆಲಸ ಮಾಡಿದ್ದ ಚಂದ್ರಶೇಖರ ಆತ್ಮಹತ್ಯೆ ಶರಣಾಗದೇ ಹೋಗಿದ್ರೆ, ಡೆತ್‌ನೋಟ್ ಇಲ್ಲದೆ ಹೋಗಿದ್ರೆ ಸಿಎಂ ಅವರೇ ಈ ಕೇಸ್ ಏನ್ ಮಾಡ್ತಿದ್ರಿ ಎಂದು ಪ್ರಶ್ನಿಸಿದರು.

## ಕೊಲೆ ಆರೋಪಿ ಮನೆ ಮೇಲೆ ಕುಟುಂಬಸ್ಥರ ದಾಳಿ, ಕೆಲಕಾಲ ಬಿಗುವಿನ ವಾತಾವರಣ ಸೃಷ್ಟಿ

**ಹೊಸಕೋಟೆ:** ಯುವಕನ ಹತ್ಯೆಗೆ ಪ್ರತೀಕಾರವಾಗಿ ಆತನ ಕುಟುಂಬಸ್ಥರು ಆರೋಪಿ ಮನೆ ಮೇಲೆ ದಾಳಿ ನಡೆಸಿದ್ದು, ಪರಿಣಾಮ ಸ್ಥಳದಲ್ಲಿ ಕೆಲಕಾಲ ಬಿಗುವಿನ ವಾತಾವರಣ ನಿರ್ಮಾಣವಾಗಿದ್ದ ಘಟನೆಯೊಂದು ನಗರದ ಹೊರವಲಯದ ಹೊಸಕೋಟೆ ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಜೂನ್ 16ರಂದು ಬೆಳಗ್ಗೆ ಹೊಸಕೋಟೆ ರಾಷ್ಟ್ರೀಯ ಹೆದ್ದಾರಿಯಲ್ಲಿ ಗಂಗಾಪುರ ಗ್ರಾಮದ ನವೀನ್ ನಾಯಕ್ ಎಂಬಾತನನ್ನು ದುಷ್ಕರ್ಮಿಗಳು ಕಾರಿನಲ್ಲಿ ಬಂದು ಬರ್ಬರವಾಗಿ ಕೊಲೆಗೈದಿದ್ದರು. ತರಕಾರಿ ತರುತ್ತಿದ್ದ ನವೀನ್ ಕಾರು ಅಡ್ಡಗಟ್ಟಿ ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿ ಪರಾರಿಯಾಗಿದ್ದರು. ನವೀನ್ ನಾಯಕ್ ಹೊಸಕೋಟೆ-ಕೋಲಾರ ಸಂಪರ್ಕ ಕಲ್ಪಿಸುವ ರಾಮಸಮುದ್ರದ ಬಳಿ ತರಕಾರಿ ಅಂಗಡಿ ಇಟ್ಟುಕೊಂಡಿದ್ದರು. ಇವರ ಅಂಗಡಿ ಪಕ್ಕದಲ್ಲಿದ್ದ ಸೊಣ್ಣಪ್ಪ ಎಂಬಾತ ನವೀನ್ ಏಳಿಗೆ ಸಹಿಸುತ್ತಿರಲಿಲ್ಲ. ಹೀಗಾಗಿ, ಕೋಲಾರ ತಾಲೂಕಿನ ಮಹೀಂದ್ರ ಎಂಬಾತನೊಂದಿಗೆ ಸೇರಿಕೊಂಡು ನವೀನ್ ಕೊಲೆಗೆ ಸುಪಾರಿ ಕೊಟ್ಟಿದ್ದಾನೆ. ನಂದಗುಡಿ ಪೊಲೀಸರ ತನಿಖೆಯಲ್ಲಿ ಈ ಕೊಲೆ ರಹಸ್ಯ ಬಯಲಾಗಿತ್ತು. ಪ್ರಕರಣಕ್ಕೆ ಸಂಬಂಧಿಸಿದಂತೆ ಈ ಇಬ್ಬರು ಬಂಧನಕ್ಕೊಳಗಾಗಿದ್ದಾರೆ. ಇದರ ಬೆನ್ನಲ್ಲೇ ಕೊಲೆ ಪ್ರಕರಣದ ಆರೋಪಿ ಸೊಣ್ಣಪ್ಪ ಅವರ ಹೊಸಕೋಟೆ ಮನೆ ಹಾಗೂ ಮಹೀಂದ್ರ ಅವರ ಕೋಲಾರದ ನಿವಾಸದ ಮೇಲೆ ಕೊಲೆಯಾದ ನವೀನ್ ನಾಯಕ್ ಕುಟುಂಬಸ್ಥರು ದಾಳಿ ನಡೆಸಿದ್ದಾರೆ. ಮನೆಯಲ್ಲಿನ ಪೀಠೋಪಕರಣಗಳು, ಟಿವಿ, ಫ್ರಿಡ್ಜ್, ಮನೆ ಮುಂದೆ ನಿಲ್ಲಿಸಿದ್ದ ಕಾರು, ಬೈಕ್, ಮನೆ ಮುಂದಿನ ಶೀಟ್‌ಗಳನ್ನೂ ನಾಶ ಮಾಡಿದ್ದಾರೆನ್ನಲಾಗಿದೆ. ಹೊಸಕೋಟೆ ಗ್ರಾಮಾಂತರ ಠಾಣೆಗೆ ದೂರು ನೀಡಲಾಗಿದೆ.

# ಬಾಲ್ಯ ವಿವಾಹದಲ್ಲಿ ಕರ್ನಾಟಕಕ್ಕೆ 2ನೇ ಸ್ಥಾನ

### ಇದು ತಲೆತಗ್ಗಿಸುವ ವಿಚಾರ ಎಂದ ಲಕ್ಷ್ಮೀ ಹೆಬ್ಬಾಳ್ಕರ್

**ದಕ್ಷಿಣ ಕನ್ನಡ:** ಬಾಲ್ಯವಿವಾಹ ಪ್ರಕರಣಗಳಲ್ಲಿ ಕರ್ನಾಟಕ ಎರಡನೇ ಸ್ಥಾನದಲ್ಲಿರುವುದು ದುರದೃಷ್ಟಕರ ಸಂಗತಿ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಪ್ರತಿಕ್ರಿಯೆ ನೀಡಿದ್ದಾರೆ.ಮಂಗಳೂರಿನಲ್ಲಿ ಮಾತನಾಡಿದ ಅವರು, 'ನಮ್ಮ ರಾಜ್ಯ ಎರಡನೇ ಸ್ಥಾನದಲ್ಲಿದೆ ಎಂಬುದು ಜವಾಬ್ದಾರಿ ಸ್ಥಾನವಾದ ಮಹಿಳಾ ಮಂತ್ರಿಯಾಗಿ ಇದೊಂದು ತಲೆ ತಗ್ಗಿಸುವ ವಿಚಾರ ಎಂದು ಬೇಸರ ವ್ಯಕ್ತಪಡಿಸಿದರು.



ಈ ಕುರಿತು ನಮ್ಮ ಇಲಾಖೆಯಿಂದ ಸಾಕಷ್ಟು ಕ್ರಮಗಳು ಆಗಿದೆ.ಇದಕ್ಕೆ ನಮ್ಮ ಒಂದು ಇಲಾಖೆಯು ಮಾತ್ರ ಲೋಪದೋ?ವೆಂದು ಹೇಳಲು ಸಾಧ್ಯವಿಲ್ಲ. ಸ್ಥಳೀಯ ಮಟ್ಟದಲ್ಲಿ ಗ್ರಾಮ ಪಂಚಾಯತ್, ಪ್ರೈಮರಿ ಶಾಲೆಯ ಎಸ್.ಡಿ.ಎಂ.ಸಿ, ಕಾನೂನು, ಆರೋಗ್ಯ ಹಾಗೂ ಪೊಲೀಸ್ ಇಲಾಖೆಯ ಸಹಕಾರ ಕೂಡ ಬೇಕಾಗುತ್ತದೆ.ಎಲ್ಲರೂ ಒಗ್ಗಟಾಗಿ ಕೆಲಸ ಮಾಡಿದಾಗ ಈ ಬಾಲ್ಯ ವಿವಾಹ ತಡೆಗಟ್ಟಲು ಸಾಧ್ಯವಿದೆ ಎಂದರು.

ಇವತ್ತು ಬಳ್ಳಾರಿ ಪ್ರಥಮ ಸ್ಥಾನವಾಗಿದೆ, ಬೆಳಗಾವಿ ಎರಡನೇ ಜಿಲ್ಲೆಯಾಗಿದೆ.ಬೆಳಗಾವಿ ಎರಡನೇ ಜಿಲ್ಲೆಯಾಗಿದೆ ಎಂದು ಹೇಳಲು ನನಗೆ ಬಹಳಷ್ಟು ನಾಚಿಕೆ ಆಗುತ್ತದೆ.ಅದು ಮೂಢನಂಬಿಕೆಯಿಂದ ಮಾಡುತ್ತಾರೋ ಅಥವಾ ಏನಾದರೂ ಕಾರಣ ಇದೆಯಾ ಎಂಬುದೇ ಗೊತ್ತಾಗುತ್ತಿಲ್ಲ. ಈ ಕುರಿತು ಗ್ರಾಮ ಮಟ್ಟದಿಂದ ಜಿಲ್ಲಾ ಮಟ್ಟದ ಕಮಿಟಿ ಇದೆ.ಅದರಲ್ಲಿ ವಕೀಲರು, ಸಂಘ ಸಂಸ್ಥೆಗಳ ಮುಖ್ಯಸ್ಥರು ಇರುತ್ತಾರೆ.ಹೀಗಾಗಿ ಕಟ್ಟು ನಿಟ್ಟಿನ ನಿರ್ದಾಕ್ಷಿಣ್ಯ ಕ್ರಮ ಆಗುತ್ತದೆ.ನಮಗೆ ವಿಚಾರ ಗೊತ್ತಾದ ತಕ್ಷಣ ಎಫ್.ಐ.ಆರ್ ಮಾಡ್ತೇವೆ. ಆದ್ರೂ ಸಹ ಬಾಲ್ಯ ವಿಹಾಹ ಆಗುತ್ತಿದೆ.ಜೊತೆಗೆ ಬಾಲ್ಯದಲ್ಲೇ ಗರ್ಭಿಣಿಯರು ಆಗುತ್ತಿದ್ದಾರೆ. ಮುಂಬರುವ ದಿನಗಳಲ್ಲಿ ಇನ್ನಷ್ಟು ಗಟ್ಟಿಯಾಗಿ ಬೇರು ಮಟ್ಟದಿಂದ ಹೋಗಲಾಡಿಸುವ ಪ್ರಯತ್ನ ಮಾಡುತ್ತೇವೆ. ಈ ಬಗ್ಗೆ ಅಧಿಕಾರಿಗಳಿಗೂ ಈಗಾಗಲೇ ನಿರ್ದೇಶನ ನೀಡಿದ್ದೇನೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

## ಡೊನಾಲ್ಡ್ ಟ್ರಂಪ್ ಮೇಲೆ ಗುಂಡಿನ ದಾಳಿ

ಟ್ರಂಪ್ ಅವರು ಬೆಂಬಲಿಗರ ದೊಡ್ಡ ಗುಂಪಿನ ನಡುವೆ ಭಾಷಣ ಮಾಡುತ್ತಿದ್ದಾಗ ಗುಂಡೇಟಿನ ಶಬ್ದ ಕೇಳಿಬಂದಿದೆ. ತಕ್ಷಣ ಅವರನ್ನು ಭದ್ರತಾ ಸಿಬ್ಬಂದಿ ಸುತ್ತುವರಿದು ರಕ್ಷಿಸಿ ವೇದಿಕೆಯಿಂದ ಹೊರಕರೆತಂದರು. ಈ ವೇಳೆ ಟ್ರಂಪ್ ಕಿವಿಯಲ್ಲಿ ರಕ್ತಸ್ರಾವವಾಗಿತ್ತು. ಶೂಟರ್‌ನನ್ನು ಸಿಬ್ಬಂದಿ ಗುಂಡಿಕ್ಕಿ ಹತ್ಯೆ ಮಾಡಿದ್ದಾರೆ. ಶೂಟರ್ ಜೊತೆಗೆ ಮತ್ತೊಬ್ಬ ಸಾವಿಗೀಡಾಗಿದ್ದಾರೆ ಎಂದು ವರದಿಯಾಗಿದೆ.

ತಮ್ಮ ರಾಜಕೀಯ ಪ್ರತಿಸ್ಪರ್ಧಿಯ ಮೇಲಿನ ದಾಳಿಯನ್ನು ಯುಎಸ್ ಅಧ್ಯಕ್ಷ ಜೋ ಬೈಡೆನ್ ಖಂಡಿಸಿದ್ದಾರೆ. ಅಮೆರಿಕದಲ್ಲಿ ಈ ರೀತಿಯ ಹಿಂಸಾಚಾರಕ್ಕೆ ಯಾವುದೇ ಜಾಗವಿಲ್ಲ. ಅದನ್ನು ಖಂಡಿಸಲು ನಾವು ಒಂದಾಗಬೇಕು. ಟ್ರಂಪ್ ಸುರಕ್ಷಿತವಾಗಿದ್ದಾರೆ. ಅವರು ಶೀಘ್ರ ಗುಣಮುಖರಾಗಲೆಂದು ಪ್ರಾರ್ಥಿಸುತ್ತೇನೆ ಎಂದು ಬೈಡೆನ್ ತಿಳಿಸಿದ್ದಾರೆ.

## ಡೇಂಜರ್ ಡೆಂಘೆ

ಆರಂಭದಲ್ಲಿ ಮಕ್ಕಳಿಗೆ ಸಣ್ಣ ಪ್ರಮಾಣದಲ್ಲಿ ಜ್ವರದ ರೂಪದಲ್ಲಿ ಕಾಣಿಸಿಕೊಂಡು ನಂತರ ತೀವ್ರ ಸ್ವರೂಪಕ್ಕೆ ತಿರುಗುತ್ತಿದೆ. ಪೋಷಕರು ನಿರ್ಲಕ್ಷ್ಯ ವಹಿಸಿದರೆ ಮಕ್ಕಳು ಡೆಂಗ್ಯೂ ವಾರಗಟ್ಟಲೇ ತೀವ್ರ ಜ್ವರ, ವಿಪರೀತ ತಲೆನೋವು, ಮೈ-ಕೈ ನೋವು, ಗಂಟುಗಳಲ್ಲಿ ನೋವು, ಒಸಡು ಹಾಗೂ ಮೂಗಿನಿಂದಲೂ ರಕ್ತಸ್ರಾವ ಆಗುವ ಸಾಧ್ಯತೆ ಇರುತ್ತದೆ. ಡೆಂಗ್ಯೂನಿಂದ ಮಕ್ಕಳಲ್ಲಿ ತೀವ್ರ ದೀರ್ಘಕಾಲಿಕ ಜ್ವರ, ಉಸಿರಾಟದ ಸಮಸ್ಯೆ, ರೋಗ ನಿರೋಧಕ ಶಕ್ತಿ ಕಡಿಮೆಯಾಗುತ್ತಿದ್ದು ಯಾವುದೇ ಕಾರಣಕ್ಕೂ ಮಕ್ಕಳ ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ಬೇಡ ಎಂದು ವೈದ್ಯರು ಎಚ್ಚರಿಸಿದ್ದಾರೆ.

ಒಟ್ಟಿನಲ್ಲಿ ಒಂದು ವರ್ಷದ ಮಕ್ಕಳಲ್ಲೂ ಡೆಂಘಿ ಕಾಣಿಸಿಕೊಳ್ಳುತ್ತಿದ್ದು, ಆತಂಕ ಹೆಚ್ಚಿಸಿದೆ. ಪೋಷಕರು ಕೂಡಲೇ ಎಚ್ಚೆತ್ತು ತಮ್ಮ ಮನೆಗಳಲ್ಲಿ ಚಿಕ್ಕ ಮಕ್ಕಳು ಇದ್ದರೆ ಕೂಡಲೇ ಮುಂಜಾಗ್ರತೆ ವಹಿಸುವುದು ಒಳ್ಳೆಯದು.

### ಮೊದಲನೇ ಪುಟದಿಂದ...

## ಮಿದುಳು ತಿನ್ನುವ ಅಮೀಬಾ ಸೋಂಕಿಗೆ ವ್ಯಕ್ತಿ ಬಲಿ

ಚಿಕಿತ್ಸೆ ಫಲಿಸದೇ ಸೋಂಕಿಗೆ ಬಲಿಯಾಗಿದ್ದಾರೆ. ಇತರೆ ಎರಡು ಸಾವು ಪ್ರಕರಣಗಳು ಈ ಹಿಂದೆ ಕೋರಂಗಿ ಮತ್ತು ಮಲಿರ್‌ನಲ್ಲಿ ವರದಿಯಾಗಿದ್ದವು.

ಮುಕ್ತ ಜೀವಂತ ಅಮೀಬಾ ಹೊಂದಿರುವ ನೀರು ಮೂಗಿನ ಮೂಲಕ ದೇಹವನ್ನು ಪ್ರವೇಶಿಸಿದಾಗ ಅದು ಜನರಿಗೆ ಸೋಂಕು ತರುತ್ತದೆ. ಈಜುಕೊಳ, ನದಿ, ಸರೋವರಗಳಲ್ಲಿ ಈಜುವಾಗ ಸೋಂಕು ಉಂಟಾಗಬಹುದು. ಅಮೀಬಾ ಮೂಗಿನ ಮೆದುಳಿಗೆ ತಲುಪುತ್ತದೆ. ಅಲ್ಲಿ ಅದು ಮೆದುಳಿನ ಅಂಗಾಂಶವನ್ನು ಹಾನಿಗೊಳಿಸುತ್ತದೆ.

ರೋಗಲಕ್ಷಣಗಳು ಪ್ರಾರಂಭವಾದ ನಂತರ ರೋಗವು ವೇಗವಾಗಿ ಉಲ್ಬಣಗೊಳ್ಳುತ್ತದೆ. ಸಾಮಾನ್ಯವಾಗಿ ಐದು ದಿನಗಳಲ್ಲಿ ಸಾವಿಗೆ ಕಾರಣವಾಗುತ್ತದೆ.

## ಹಲವು ಜಿಲ್ಲೆಗಳಿಗೆ ಮಳೆಯ ರೆಡ್ ಅಲರ್ಟ್

ಹೊನ್ನಾವರದಲ್ಲಿ 27.0 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 22.7 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಕಾರವಾರದಲ್ಲಿ 28.8 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 24.3 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಶಿರಾಲಿಯಲ್ಲಿ 28.4 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 18.4 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಪಣಂಬೂರಿನಲ್ಲಿ 29.8 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 22.0 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ ದಾಖಲಾಗಿದೆ.

ಬೀದರ್‌ನಲ್ಲಿ 30.5 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 22.4 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ವಿಜಯಪುರದಲ್ಲಿ 32.0 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 19.2 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಬಾಗಲಕೋಟೆಯಲ್ಲಿ 31.9ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ. 24.0 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಧಾರವಾಡದಲ್ಲಿ 27.6 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 20.8 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಗದಗದಲ್ಲಿ 30.3ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 21.2 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಕಲಬುರಗಿಯಲ್ಲಿ 32.7ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 24.1 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ ದಾಖಲಾಗಿದೆ.

## ಅಕ್ರಮ ತಡೆಗೆ ಕೆಇಎ ಎಕ್ಸಾಂನಲ್ಲಿ ವೆಬ್ ಕಾಸ್ಟಿಂಗ್ ಅಳವಡಿಕೆಗೆ ಪ್ಲ್ಯಾನ್

ಇದಷ್ಟೇ ಅಲ್ಲದೇ ಪರೀಕ್ಷಾ ಅಕ್ರಮ ದೊಡ್ಡ ಜಾಲವಾಗಿ ಪರಿಣಮಿಸುತ್ತಿದ್ದು ಮುಂದಿನ ದಿನಗಳಲ್ಲಿ ಕಂಪ್ಯೂಟರ್ ಬೇಸಡ್ ಟೆಸ್ಟ್ ಪರಿಚಯ ಮಾಡೋ ಬಗ್ಗೆ ಕೂಡ ಉನ್ನತ ಶಿಕ್ಷಣ ಇಲಾಖೆ ಚಿಂತನೆ ನಡೆಸುತ್ತಿದೆ. ಇದರ ಜೊತೆಗೆ ಅಭ್ಯರ್ಥಿಗಳಿಗೆ ಅರ್ಜಿ ಫಿಲ್ ಅಪ್ ಮಾಡೋದಕ್ಕೆ ಪ್ರತ್ಯೇಕ ಆಪ್ ಮೂಲಕ ತರಬೇತಿ ನೀಡುವುದರ ಬಗ್ಗೆ ಹಾಗೂ ಮಿತ್ರ ತಂತ್ರಾಂಶಕ್ಕೆ ಹೆಚ್ಚುವರಿ ಪ್ರಾಮುಖ್ಯತೆ ಕೊಡುತ್ತೇವೆ ಎಂದು ಉನ್ನತ ಶಿಕ್ಷಣ ಸಚಿವ ಎಂ.ಸಿ ಸುಧಾಕರ್ ಹೇಳಿದರು.

ಒಟ್ಟಿನಲ್ಲಿ ಪರೀಕ್ಷಾ ಅಕ್ರಮಗಳನ್ನ ತಡೆಗಟ್ಟಲು ಉನ್ನತ ಶಿಕ್ಷಣ ಇಲಾಖೆ ತಂತ್ರಜ್ಞಾನವನ್ನ ಬಳಸಿಕೊಳ್ಳುತ್ತಿದ್ದು ಈ ಹೊಸ ಪ್ಲ್ಯಾನ್‌ಗಳು ಎಷ್ಟರ ಮಟ್ಟಿಗೆ ಸಕ್ಸಸ್ ಆಗುತ್ತೆ ಅನ್ನೋದನ್ನ ಕಾದುನೋಡಬೇಕಿದೆ.

## ನಂದಿಬೆಟ್ಟಕ್ಕೆ ಪ್ರವಾಸಿಗರ ದಂಡು

ಮುಂಜಾನೆ 5 ಗಂಟೆಯಿಂದ ನಂದಿಬೆಟ್ಟದ ರಸ್ತೆ ಸಂಪೂರ್ಣ ಟ್ರಾಫಿಕ್ ಜಾಮ್ ಆಗಿದ್ದು, ನಂದಿಗಿರಿಧಾಮ ಪೊಲೀಸರು ವಾಹನ ಸಂಚಾರ ದಟ್ಟಣೆ ನಿಭಾಯಿಸಲು ಹೈರಾಣಾದರು. ರಸ್ತೆಯ ಎರಡು ಬದಿ ವಿರುದ್ಧ ದಿಕ್ಕಿನಲ್ಲೂ ವಾಹನಗಳು ನಿಂತಿದ್ದು ನಂದಿಬೆಟ್ಟದಿಂದ ವಾಪಾಸ್ ಬರುವವರು ಕೆಳಗೆ ಬರದಂತಾಯಿತು. ನಂದಿಬೆಟ್ಟಕ್ಕೆ ಬಂದ ಪ್ರವಾಸಿಗರು ಅತ್ತ ಮೇಲೂ ಹೋಗಲಾಗದೆ ಇತ್ತ ಕೆಳಗೆ ವಾಪಸ್ ಸಹ ಬರಲಾಗದೆ ಪರದಾಡಿದರು. ಬಾನಂಗಳ ತಬ್ಬಿದ ಮಂಜಿನ ಮೋಡಗಳಿಂದ ತುಂಬಿದ್ದ ವಾತಾವರಣದಲ್ಲಿ ಪ್ರವಾಸಿಗರು ಕುಣಿದು ಕುಪ್ಪಳಿಸಿದರು. ಕರಾವಳಿ ಕಡೆ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಪ್ರವಾಸಿಗರು ನಂದಿಬೆಟ್ಟಕ್ಕೆ ಲಗ್ಗೆ ಇಟ್ಟಿದ್ದಾರೆ.

### ಈ ಬಾರಿ ಅಂಬೇಡ್ಕರ್ ಥೀಮ್ ಅಡಿ ಫಲಪುಷ್ಪ ಪ್ರದರ್ಶನ..!

# ಲಾಲ್‌ಬಾಗ್‌ನಲ್ಲಿ ಸ್ವಾತಂತ್ರ್ಯೋತ್ಸವಕ್ಕೆ ಸಿದ್ಧತೆ



**ಬೆಂಗಳೂರು:** ಸ್ವಾತಂತ್ರ್ಯೋತ್ಸವದ ಅಂಗವಾಗಿ ತೋಟಗಾರಿಕೆ ಇಲಾಖೆ ಆಯೋಜಿಸುವ ಲಾಲ್ ಬಾಗ್ ಫಲಪುಷ್ಪ ಪ್ರದರ್ಶನದಲ್ಲಿ ಈ ಬಾರಿ 'ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್' ಅವರ ಜೀವನ ವಿಷಯಾಧಾರಿತ ಹೂವಿನ ಪ್ರತಿಕೃತಿ ಕಣ್ಮನ ಸೆಳೆಯಲಿದೆ.

ಸ್ವಾತಂತ್ರ್ಯೋತ್ಸವದ ಅಂಗವಾಗಿ 2024ರ ಅಗಸ್ಟ್ 8ರಿಂದ ಅಗಸ್ಟ್ 19ರವರೆಗೆ ಲಾಲ್‌ಬಾಗ್‌ನಲ್ಲಿ ಫಲಪುಷ್ಪ ಪ್ರದರ್ಶನ ನಡೆಯಲಿದೆ. ಇದಕ್ಕಾಗಿ ಈಗಾಗಲೇ ತೋಟಗಾರಿಕೆ ಇಲಾಖೆ ವಿವಿಧ ಬಗೆಯ ಅಲಂಕಾರಿಕ, ದೇಶಿ-ವಿದೇಶಿ ಹೂಗಳನ್ನು ಸಿದ್ಧತೆ ಮಾಡಿಕೊಳ್ಳುತ್ತಿದೆ.

ಲಾಲ್‌ಬಾಗ್‌ನ ಜಂಟಿ ನಿರ್ದೇಶಕ ಡಾ.ಎಂ. ಜಗದೀಶ ಮಾತನಾಡಿ, ಗಾಜಿನ ಮನೆಯಲ್ಲಿ ಅಂಬೇಡ್ಕರ್ ಅವರ ಪುತ್ಥಳಿ, ಕಲಾಕೃತಿಗಳು ಸೇರಿ ಅವರ ಜೀವನದ ಪ್ರಮುಖ ಘಟನೆಗಳ ಛಾಯಾಚಿತ್ರಗಳು, ಸಂಕ್ಷಿಪ್ತ ಮಾಹಿತಿ ಒದಗಿಸುವ ಬ್ಯಾನರ್‌ಗಳನ್ನು ಅಳವಡಿಸಲಾಗುವುದು. ಗಾಜಿನ ಮನೆಯಲ್ಲಿ ಒಂದು ಭಾಗದಲ್ಲಿ ಸಂಸತ್ ಭವನ, ಅಂಬೇಡ್ಕರ್ ಅವರು ಜನಿಸಿದ ಸ್ಥಳ ಹಾಗೂ ಸಂವಿಧಾನದ ಪ್ರತಿಕೃತಿಗಳನ್ನು ಪುಷ್ಪಗಳಲ್ಲಿ ಅಲಂಕರಿಸುವ ಕುರಿತು ತಜ್ಞರೊಂದಿಗೆ ಚರ್ಚೆ ನಡೆಯುತ್ತಿದೆ. ಈ ಬಗ್ಗೆ ಈಗಾಗಲೇ ಎರಡು ಮೂರು ಸಭೆಗಳು ನಡೆದಿವೆ.

ಈ ಬಾರಿಯ ಫಲಪುಷ್ಪ ಪ್ರದರ್ಶನದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ವಿಚಾರಧಾರೆಗಳನ್ನು ಹೂ ರಾಶಿಯ ಮೂಲಕ ಯುವ ಸಮೂಹ ಹಾಗೂ ವಿದ್ಯಾರ್ಥಿಗಳಿಗೆ ತಿಳಿಸುವ ಉದ್ದೇಶವಿದೆ. ಲಾಲ್‌ಬಾಗ್‌ನ ಎಲ್ಲ ದ್ವಾರಗಳಲ್ಲಿ ಅಂಬೇಡ್ಕರ್ ಅವರ ವಿಚಾರಧಾರೆಗಳನ್ನು ತಿಳಿಸುವ ಎಲ್‌ಇಡಿ ಪರದೆಗಳನ್ನು ಅಳವಡಿಸಲಾಗುವುದು. ಗಾಜಿನ ಮನೆಯ ಒಳಾಂಗಣದಲ್ಲಿ ಐತಿಹಾಸಿಕ ಘಟನೆಗಳನ್ನು ಸಾರುವ ಫ್ಲೆಕ್ಸ್‌ಗಳು, ಪ್ರತಿಕೃತಿಗಳನ್ನು ಅಳವಡಿಸುವ ಕುರಿತು ಚಿಂತನೆ ನಡೆಯುತ್ತಿದೆ. ಜುಲೈ ಅಂತ್ಯ ಅಥವಾ ಆಗಸ್ಟ್ 1 ನೇ ವಾರದೊಳಗೆ ಕೆಲಸ ಪ್ರಾರಂಭಿಸಲು ಕಾರ್ಮಿಕರಿಗೆ ಸೂಚಿಸಲಾಗುವುದು ಎಂದು ಹೇಳಿದರು. ಅಂಬೇಡ್ಕರ್ ಜನ್ಮಸ್ಥಳದ ಪರಿಕಲ್ಪನೆ, ಬೋಧನೆ, ಹೋರಾಟ, ಚಿಂತನೆಗಳನ್ನು ಫಲಪುಷ್ಪ ಪ್ರದರ್ಶನದ ಮೂಲಕ ಬಿಂಬಿಸಲಾಗುವುದು. ಪೊಲೀಸರ ನಿಯೋಜನೆ, ಸಿಸಿಟಿವಿ ಅಳವಡಿಗೆ, ಆಂಬ್ಯುಲೆನ್ಸ್ ವ್ಯವಸ್ಥೆ ಮತ್ತು ಪಾರ್ಕಿಂಗ್ ಸೌಲಭ್ಯ ಸೇರಿದಂತೆ ಎಲ್ಲ ಭದ್ರತಾ ವ್ಯವಸ್ಥೆಗಳನ್ನು ಎಂದಿನಂತೆ ನೋಡಿಕೊಳ್ಳಲಾಗುವುದು. ಸಮವಸ್ತ್ರದಲ್ಲಿ ಬಂದು ಗುರುತಿನ ಚೀಟಿ ಪ್ರದರ್ಶಿಸಿದರೆ ಶಾಲಾ ಮಕ್ಕಳಿಗೆ ಪ್ರದರ್ಶನ ಉಚಿತವಾಗಿರುತ್ತದೆ. ವಯಸ್ಕರಿಗೆ ಟಿಕೆಟ್ ವಿವರಗಳನ್ನು ತೋಟಗಾರಿಕಾ ಸಚಿವ ಎಸ್‌ಎಸ್ ಮಲ್ಲಿಕಾರ್ಜುನ ಶೀಘ್ರದಲ್ಲೇ ಪ್ರಕಟಿಸಲಿದ್ದಾರೆಂದು ತಿಳಿಸಿದರು.

# ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಗುರುತಿಸಿ

**ತಿಪಟೂರು:** ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಗುರುತಿಸಿ ಶಾಲೆಗೆ ದಾಖಲು ಮಾಡುವ ಪ್ರಕ್ರಿಯೆಯನ್ನು ಜುಲೈ 15ರಿಂದ 30ರವರೆಗೆ ವಿಶೇಷ ಆಂದೋಲನ ಮೂಲಕ ಕಾರ್ಯಾಚರಣೆ ಮಾಡಲಾಗುವುದು ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಸುದರ್ಶನ್ ತಿಳಿಸಿದರು.

ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದವರು ಹೈಕೋರ್ಟ್ ನಿರ್ದೇಶನದ ಪ್ರಕಾರ ಹಾಗೂ ಆರ್.ಟಿ.ಇ ಕಾಯ್ದೆ ಅನ್ವಯ ಪ್ರಕಾರ ಶಾಲೆಯಿಂದ ಹೊರಗುಳಿದ ಮಕ್ಕಳ ಸಮೀಕ್ಷೆಗಳನ್ನು ಮಾಡಬೇಕಾಗಿದ್ದು ಈ ಸಮೀಕ್ಷೆಯಲ್ಲಿ ಪಂಚಾಯತ್ ರಾಜ್ ಇಲಾಖೆ ಮತ್ತು ಶಿಕ್ಷಣ ಇಲಾಖೆ ಸಹಯೋಗದಲ್ಲಿ ಸಮೀಕ್ಷೆಯನ್ನು ಕೈಗೊಳ್ಳಲಾಗುವುದು ಎಂದರು.

ಪಂಚಾಯತ್ ರಾಜ್ಯ ಇಲಾಖೆ ಮೂಲಕ ಗ್ರಾಮಾಂತರ ಪ್ರದೇಶದಲ್ಲಿರುವ ಸಹಾಯ ಸಂಘಗಳ ಮೂಲಕ 26 ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸಮೀಕ್ಷೆಯನ್ನು ಕೈಗೊಂಡು ಅಲ್ಲಿ ಕಂಡುಬರುವ ಶಾಲಾ ಬಿಟ್ಟ ಮಕ್ಕಳ ಮಾಹಿತಿಯನ್ನು ಪಡೆದು ಮೊಬೈಲ್ ಮೂಲಕ ಹಾಗೂ ಪಂಚಾಯಿತಿಯ ಶಿಕ್ಷಣ ಕಾರ್ಯಪಡೆ ಮೂಲಕ ದಾಖಲು ಮಾಡಿಸಿಕೊಳ್ಳಲಾಗುವುದು. ಸಮೀಕ್ಷೆಯನ್ನು ಕಟ್ಟಡ ಕಾಮಗಾರಿ ನಡೆಯುತ್ತಿರುವ ಸ್ಥಳಗಳಲ್ಲಿ, ಕೃಷಿ ಕಾರ್ಮಿಕ ವಲಯಗಳಲ್ಲಿ, ಕೈಗಾರಿಕಾ ಪ್ರದೇಶ, ಕೊಳಗೇರಿ ಪ್ರದೇಶಗಳು, ಬಸ್ಸು, ರೈಲ್ವೆ, ನಿಲ್ದಾಣ, ಧಾರ್ಮಿಕ ಕೇಂದ್ರಗಳು, ಆಸ್ಪತ್ರೆ, ಹೋಟೆಲ್, ಚಿತ್ರಮಂದಿರ, ಕಲ್ಯಾಣ ಮಂದಿರಗಳಲ್ಲಿ ಇಟ್ಟಿಗೆ-ಕಾಯಿ ಫ್ಯಾಕ್ಟರಿಗಳು, ಸಣ್ಣ ಕಾರ್ಖಾನೆಗಳು, ಅನಾಥಾಶ್ರಮಗಳ ಮೂಲಕ ಮನೆ ಮನೆ ಸಮೀಕ್ಷೆಯನ್ನು ಮಾಡಲಾಗುವುದು ಎಂದು ತಿಳಿಸಿದರು.



ಕಳೆದ 2023-24ನೇ ಸಾಲಿನಲ್ಲಿ 6 ರಿಂದ 18 ವರ್ಷದೊಳಗಿನ 40 ಮಕ್ಕಳನ್ನು ಶಾಲೆಯಿಂದ ಹೊರಗುಳಿದ್ದು ಕಂಡುಬಂದ ಹಿನ್ನಲೆಯಲ್ಲಿ ಅವರನ್ನು ಶೈಕ್ಷಣಿಕ ಸಾಲಿಗೆ ತರಲಾಗಿದೆ ಅದರಂತೆ ತಾಲೂಕಿನ ತೆಂಗಿನ ಕಾಯಿ ಕಾರ್ಖಾನೆ ಹಾಗೂ ಇಟ್ಟಿಗೆ ಕಾರ್ಖಾನೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಕೂಲಿಗಾರರ ಸುಮಾರು 246 ಮಕ್ಕಳನ್ನು ಶಾಲೆಗಳಿಗೆ ವಿವಿಧ ತಂಡಗಳ ಮೂಲಕ ಸಮೀಕ್ಷೆ ಕೈಗೊಂಡು ಶಾಲೆಗಳಿಗೆ ಮರು ದಾಖಲಾತಿಯನ್ನು ಮಾಡಲಾಗಿದೆ ಎಂದು ತಿಳಿಸಿದರು. ಈ ಸಮೀಕ್ಷಾ ಕಾರ್ಯದಲ್ಲಿ ಮಕ್ಕಳಿಗೆ ಸಂಬಂಧ ಪಟ್ಟಂತೆ ಯಾವುದೇ ಮಾಹಿತಿಗಳಿದ್ದರೆ ಸಹಾಯವಾಣಿಯಾಗಿ ಮಂಜುನಾಥ್ 8660555124 ಮಹೇಂದ್ರ 7975236988 ದಕ್ಷಿಣ ಮೂರ್ತಿ 8073057313 ಸಂಪರ್ಕಿಸಬಹುದು ಹಾಗೂ ಸಾರ್ವಜನಿಕರು ಈ ಅಂದೋಲನದಲ್ಲಿ ಸಹಕರಿಸಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಯ್ಯ ಹಾಗೂ ಪ್ರಭಾರ ಕ್ಷೇತ್ರ ಸಮನ್ವಯಧಿಕಾರಿ ಉಮೇಶ್ ಗೌಡ ಹಾಜರಿದ್ದರು.

# ಸಿಎಂ ವಿರುದ್ಧ ಭಾರಿ ಆಕ್ರೋಶ

**ಚಾಮರಾಜನಗರ:** ಮುಖ್ಯಮಂತ್ರಿ ಸಿದ್ದರಾಮಯ್ಯ ರವರು ಚಾಮರಾಜನಗರಕ್ಕೆ ಆಗಮಿಸಿದ್ದ ವೇಳೆ ರೈತ ಸಂಘ ಸೇರಿದಂತೆ ಇತರೆ ಸಂಘ ಸಂಸ್ಥೆಗಳು ನೀಡಿದ್ದ ಮನವಿ ಪತ್ರಗಳನ್ನು ಅಲ್ಲಿಯೇ ಬೀಸಾಡಿ ತೆರಳಿದ್ದು ಸಿಎಂ ವಿರುದ್ಧ ಸಾರ್ವಜನಿಕ ವಲಯದಲ್ಲಿ ಭಾರಿ ಆಕ್ರೋಶ ವ್ಯಕ್ತವಾಗಿದೆ. ಜು.10 ರಂದು ನಗರದ ಡಾ.ಬಿ.ಆರ್.ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಲೋಕಸಭಾ ಕ್ಷೇತ್ರದ ಮತದಾರರಿಗೆ ಕೃತಜ್ಞತಾ ಸಭೆ ಆಯೋಜಿಸಲಾಗಿತ್ತು. ಸಭೆಗೆ ಸಿಎಂ ಸೇರಿದಂತೆ ಸಚಿವರು, ಶಾಸಕರು, ಸಂಸದರು ಭಾಗವಹಿಸಿದ್ದರು. ಈ ವೇಳೆ ಹಲವು ಸಂಘ ಸಂಸ್ಥೆಗಳು ತಮ್ಮ ಹಕ್ಕೊತ್ತಾಯಗಳನ್ನು ಒಳಗೊಂಡ ಮನವಿ ಪತ್ರಗಳನ್ನು ಸಿಎಂಗೆ ಸಲ್ಲಿಸಲು ಆಗಮಿಸಿದ್ದರು.

ಕಾರ್ಯಕ್ರಮ ಮುಗಿದ ಬಳಿಕ ಸಿಎಂ ಸಿದ್ದರಾಮಯ್ಯ ಅವರಿಗೆ ತಮ್ಮ ಹಕ್ಕೊತ್ತಾಯಗಳನ್ನು ಒಳಗೊಂಡ ಮನವಿ ಪತ್ರಗಳನ್ನು ಈ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಸಲ್ಲಿಸಿ ತೆರಳಿದ್ದರು. ಆದರೆ, - ಸ್ವೀಕರಿಸಿದ್ದ ಮನವಿ ಪತ್ರಗಳನ್ನು ವೇದಿಕೆ ಬಳಿಯೇ ಎಸೆಯಲಾಗಿದೆ. ವೇದಿಕೆ ಬಳಿ ಎಸೆದಿರುವ ಮನವಿ ಪತ್ರಗಳು ಯಾರ ಗಮನಕ್ಕೂ ಬಂದಿಲ್ಲ. ಕಾರ್ಯಕ್ರಮಕ್ಕೆ ಅಳವಡಿಸಲಾಗಿದ್ದ ಶಾಮಿಯಾನವನ್ನು ಇನ್ನೂ ತೆರವುಗೊಳಿಸಿಲ್ಲ. ಈ ವೇಳೆ ಸಾರ್ವಜನಿಕರು ವೇದಿಕೆ ಬಳಿ ತೆರಳಿ ನೋಡಿದಾಗ ಮನವಿ ಪತ್ರಗಳು



ಬೀಸಾಡಿರುವುದು ಗಮನಕ್ಕೆ ಬಂದಿದೆ. ಮನವಿ ಪತ್ರಗಳನ್ನು ಬೀಸಾಡಿರುವುದನ್ನು ವಿಡಿಯೋ ಮಾಡಿ ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಡಲಾಗಿದ್ದು ಸಿಎಂ ವಿರುದ್ಧ ಆಕ್ರೋಶ ವ್ಯಕ್ತವಾಗಿದೆ. ಕಾಟಾಚಾರಕ್ಕೆ ಮನವಿ ಪತ್ರಗಳನ್ನು ಸಿಎಂ ಸ್ವೀಕರಿಸಿ ಹೋಗಿದ್ದಾರೆ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ತಮ್ಮ ಸಮಸ್ಯೆಗಳನ್ನು ಬಗೆಹರಿಸುತ್ತಾರೆ ಎಂಬ ಉದ್ದೇಶದಿಂದ ನೀಡುವ ಮನವಿ ಪತ್ರಗಳನ್ನು ನೀಡಿದರೆ ಅದನ್ನು ಅಲ್ಲಿಯೇ ಎಸೆದು ಹೋದರೆ ಹೇಗೆ ಇವರು ಜನರ ಸಮಸ್ಯೆಗಳನ್ನು ಬಗೆಹರಿಸುತ್ತಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

## ಅರ್ಜಿ ಆಹ್ವಾನ

**ಮಂಡ್ಯ:** ಬೆಂಗಳೂರು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಮತ್ತು ಮಂಡ್ಯ ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ ಡಾ. ಬಿ.ಆರ್. ಅಂಬೇಡ್ಕರ್ ಮತ್ತು ಶ್ರೀಮತಿ ಇಂದಿರಾ ಗಾಂಧಿ ವಸತಿ ಶಾಲೆಗಳಲ್ಲಿ 2024-25 ನೇ ಸಾಲಿಗೆ ವಿಶೇಷ ವರ್ಗದ 6 ನೇ ತರಗತಿಯ ಅಂಗ್ಲ ಮಾಧ್ಯಮಕ್ಕೆ ವಿಶೇಷ ವರ್ಗದ ವಿದ್ಯಾರ್ಥಿಗಳು ನೇರ ಪ್ರವೇಶಾತಿ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ವಿಶೇಷ ವರ್ಗದ ವಿದ್ಯಾರ್ಥಿಗಳು ಅರ್ಜಿಯನ್ನು ವಸತಿ ಶಾಲೆಗಳಲ್ಲಿ ಜುಲೈ 11 ರಿಂದ ಸಲ್ಲಿಸಬಹುದು. ವಿಶೇಷ ವರ್ಗದ ವಿದ್ಯಾರ್ಥಿಗಳಾದ ಸಫಾಯಿ ಕರ್ಮಚಾರಿ/ಗುರುತಿಸಿರುವ ಮ್ಯಾನ್ಯುಯಲ್ ಸ್ಕ್ಯಾವೆಂಜರ್/ಚಿಂದಿ ಆಯುವವರು/ಸ್ಮಶಾನ ಕಾರ್ಮಿಕರ ಮಕ್ಕಳು ಬಾಲ ಕಾರ್ಮಿಕರು/ ಜೀತ ವಿಮುಕ್ತ ಕಾರ್ಮಿಕರ ಮಕ್ಕಳು, ಗುರುತಿಸಿರುವ ಮಾಜಿ ದೇವದಾಸಿಯರ ಮಕ್ಕಳು, 25% ಕ್ಕಿಂತ ಹೆಚ್ಚಿನ ಅಂಗವಿಕಲತೆ ಹೊಂದಿರುವ ಮಕ್ಕಳು, ಹೆಚ್.ಐ.ವಿ. ಗೆ ತುತ್ತಾಗಿರುವ ಪೋಷಕರ ಮಕ್ಕಳು, ಒಬ್ಬ ಪೋಷಕರನ್ನು ಹೊಂದಿರುವ ಅಥವಾ ಅನಾಥ ಮಕ್ಕಳು, ಗುರುತಿಸಿರುವ ಅಲೆಮಾರಿ/ ಅರೆ ಅಲೆಮಾರಿ/ ಸೂಕ್ಷ್ಮ, ಅತೀ ಸೂಕ್ಷ್ಮ ಸಮುದಾಯದ/ ಸೈನಿಕರು ಮತ್ತು ಮಾಜಿ ಸೈನಿಕರು/ ಸರ್ಕಾರಿ ಯೋಜನೆಗಳಿಂದ ಸ್ಥಳಾಂತರಗೊಂಡ ಮಕ್ಕಳು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಆಶ್ರಮ ವಸತಿ ಶಾಲೆಗಳಲ್ಲಿ 5 ನೇ ತರಗತಿಯಲ್ಲಿ ಉತ್ತೀರ್ಣರಾದ ಮಕ್ಕಳು ಅರ್ಜಿ ಸಲ್ಲಿಸಬಹುದು ಎಂದು ಮಂಡ್ಯ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಿಬ್ಬಂದಿ ಮಾಹಿತಿ ಸಲ್ಲಿಸಿ

**ಮಂಡ್ಯ:** ಮಂಡ್ಯ ಜಿಲ್ಲೆಯ ಸರ್ಕಾರಿ ಮತ್ತು ಖಾಸಗಿ ಸೂಚಿತ, ಅಸೂಚಿತ ಸ್ಥಾಪನೆ/ಸಂಸ್ಥೆಗಳು ತಮ್ಮಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಮಾಹಿತಿಯನ್ನು ಸ್ಥಳೀಯ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರಕ್ಕೆ ಪ್ರತಿ ತ್ರೈಮಾಸಿಕಾಂತ್ಯಕ್ಕೆ ಸ್ಥಳೀಯ ಉದ್ಯೋಗ ವಿನಿಮಯ ಕೇಂದ್ರಕ್ಕೆ ವರದಿ ಸಲ್ಲಿಸುವುದು. ಹೆಚ್ಚಿನ ಮಾಹಿತಿಗಾಗಿ ಮಂಡ್ಯ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಉದ್ಯೋಗಾಧಿಕಾರಿಯ ದೂ.ಸಂ: 08232-220126 2 9113875775 1 ಅನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರೇಷ್ಮೆ ಬೆಳೆಗಾರರಿಗೆ ಸಹಾಯಧನ ಸೌಲಭ್ಯಕ್ಕಾಗಿ ನೊಂದಣಿ

**ಮಂಡ್ಯ:** ಮಂಡ್ಯ ಜಿಲ್ಲೆಯ ಎಲ್ಲಾ ರೇಷ್ಮೆ ಬೆಳೆಗಾರರು ರೇಷ್ಮೆ ಇಲಾಖೆಯಡಿಯಲ್ಲಿ ದೊರೆಯುವ ಸಹಾಯಧನ ಹಾಗೂ ಸೌಲಭ್ಯವನ್ನು ಪಡೆಯಲು ಮತ್ತು ಮಾರುಕಟ್ಟೆಯಲ್ಲಿ ಗೂಡಿನ ವಹಿವಾಟು ಮಾಡಲು ಆನ್ಲೈನ್ನಲ್ಲಿ ರೇಷ್ಮೆ ಬೆಳೆಗಾರರ ಮಾಹಿತಿಯನ್ನು ಪಡೆದು ಇಟಿಜ ಣಠ ಇಟಿಜ ತಂತ್ರಾಂಶದಲ್ಲಿ ನಮೂದಿಸಬೇಕು. ಜುಲೈ 20 ರೊಳಗೆ ಜಿಲ್ಲೆಯ ರೇಷ್ಮೆ ಬೆಳೆಗಾರರು ಪಹಣಿ ಪ್ರತಿ, ಆಧಾರ್ ಕಾರ್ಡ್ ಪ್ರತಿ, ರೇಷ್ಮೆ ಪಾಸ್ ಬುಕ್ ಪ್ರತಿ, ಬ್ಯಾಂಕ್ ಪಾಸ್ ಬುಕ್ ಪ್ರತಿ, ರೇಷನ್ ಕಾರ್ಡ್ ಪ್ರತಿ, ವೋಟರ್ ಕಾರ್ಡ್ ಪ್ರತಿ, ಮೊಬೈಲ್ ನಂಬರ್, 02 ಭಾವಚಿತ್ರಗಳೊಂದಿಗೆ ನೊಂದಣಿ ಮಾಡಿಸಿಕೊಳ್ಳಬೇಕು ಇಲ್ಲವಾದಲ್ಲಿ ರೇಷ್ಮೆ ಇಲಾಖೆಯಿಂದ ಯಾವುದೇ ಸಹಾಯಧನ ಹಾಗೂ ಸೌಲಭ್ಯವನ್ನು ಪಡೆಯಲು ಸಾಧ್ಯವಿರುವುದಿಲ್ಲವೆಂದು ಎಂದು ಜಿಲ್ಲಾ ಪಂಚಾಯತ್ ರೇಷ್ಮೆ ಉಪನಿರ್ದೇಶಕರು ತಿಳಿಸಿದ್ದಾರೆ.

## ಚಿಕ್ಕಮಗಳೂರು ದೈಹಿಕ ಶಿಕ್ಷಣ ಡಿಡಿಪಿಐ ಆಗಿ ಪಾಲಾಕ್ಷಮೂರ್ತಿ

**ಚಿಕ್ಕಮಗಳೂರು:** ಬೇಲೂರಿನಲ್ಲಿ ದೈಹಿಕ ಶಿಕ್ಷಣ ಪರಿವೀಕ್ಷಕರಾಗಿದ್ದ ಪಾಲಾಕ್ಷಮೂರ್ತಿ ಅವರು ದೈಹಿಕ ಶಿಕ್ಷಣ ಉಪ ನಿರ್ದೇಶಕರಾಗಿ ಪದೋನ್ನತಿಯೊಂದಿಗೆ ಚಿಕ್ಕಮಗಳೂರಿಗೆ ವರ್ಗವಾಗಿದ್ದು ಚಿಕ್ಕಮಗಳೂರಿನ ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕರ ಬಳಿ ಡ್ಯೂಟಿ ರಿಪೋರ್ಟ್ ಮಾಡಿಕೊಂಡರು. ಡಿಡಿಪಿಐ ಪುಟ್ಟರಾಜು, ಡಯಟ್ ಪ್ರಿನ್ಸಿಪಾಲ್ ಮಂಗಳಗೌರಮ್ಮ, ಜಿಲ್ಲಾ ದೈಹಿಕ ಸಂಘದ ಅಧ್ಯಕ್ಷ ಜ್ಞಾನಮೂರ್ತಿ ಹಾಗೂ ಬೇಲೂರಿನ ದೈ.ಶಿ.ಸಂಘದವರು ಇದ್ದರು. ಪಾಲಾಕ್ಷಮೂರ್ತಿ ಅವರು 32 ವರ್ಷಗಳ ಕಾಲ ಸೇವೆ ಸಲ್ಲಿಸಿದ್ದು ಬೇಲೂರಿನಲ್ಲಿ ದೈ.ಶಿ.ಪರಿವೀಕ್ಷಕರಾಗಿ ಸೇವೆ ಸಲ್ಲಿಸುವ ಅವಧಿಯಲ್ಲಿ ಜನಮೆಚ್ಚಿದ ಶಿಕ್ಷಕ, ಜಿಲ್ಲಾ ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ, ವಿವಿಧ ವಿಭಾಗದಲ್ಲಿ 22 ವಿದ್ಯಾರ್ಥಿಗಳು ರಾಷ್ಟ್ರೀಯ ಕ್ರೀಡೆಗಳಲ್ಲಿ ಪಾಲ್ಗೊಂಡಿದ್ದು, ಒಲಂಪಿಕ್ ಕ್ರೀಡೆಯಲ್ಲಿ ಓರ್ವ ವಿದ್ಯಾರ್ಥಿ ಪ್ರಥಮ ಸ್ಥಾನ ಪಡೆದಿದ್ದು ಇವರ ಹೆಗ್ಗಳಿಕೆಯಾಗಿದೆ.



## ವಿಶೇಷ 'ಸ್ವಾತಿ' ಪೂಜೆ

**ಮೈಸೂರು:** ನಗರದ ಕಾಳಿದಾಸ ರಸ್ತೆಯಲ್ಲಿರುವ ಶ್ರೀ ಯದುಗಿರಿ ಯತಿರಾಜ ಮಠ, ಮೈಸೂರು ಶಾಖೆಯ ಶ್ರೀಲಕ್ಷ್ಮೀನರಸಿಂಹ ಸ್ವಾಮಿ ದೇವಸ್ಥಾನದಲ್ಲಿ ಜು.15ರಂದು ಸೋಮವಾರ 'ಸ್ವಾತಿ' ನಕ್ಷತ್ರದ ಪ್ರಯುಕ್ತ ವಿಶೇಷ ಪೂಜೆ ಆಯೋಜಿಸಲಾಗಿದೆ. ಅಂದು ಬೆಳಿಗ್ಗೆ 8ಕ್ಕೆ ಸಂಕಲ್ಪ, 9ಕ್ಕೆ ಅಭಿಷೇಕ, 10.30ಕ್ಕೆ ಅಲಂಕಾರ, 11.30ಕ್ಕೆ ಮಹಾಮಂಗಳಾರತಿ, ಮಧ್ಯಾಹ್ನ 12.30ಕ್ಕೆ ಶಾತ್ತುಮೊರೈ, 1 ಗಂಟೆಗೆ ತೀರ್ಥ ಪ್ರಸಾದ ವಿನಿಯೋಗವನ್ನು ಏರ್ಪಡಿಸಲಾಗಿದೆ. ಸಂಜೆ 7.30ಕ್ಕೆ ಪ್ರಾಕಾರೋತ್ಸವ ಹಮ್ಮಿಕೊಳ್ಳಲಾಗಿದೆ ಎಂದು ದೇವಸ್ಥಾನದ ಮುಖ್ಯಸ್ಥ ವಿದ್ವಾನ್ ಕೆ.ಆರ್. ಯೋಗಾನರಸಿಂಹನ್ (ಮುರುಳಿ ಅಯ್ಯಂಗಾರ್) ತಿಳಿಸಿದ್ದಾರೆ.

# ವಿದ್ಯುತ್ ತಂತಿಗಳ ಮೇಲೆ ಹತ್ತಿ ಅಳಿಲುಗಳು ಮರಣ ಹೊಂದುತ್ತಿವೆ

**ಚಿತ್ರದುರ್ಗ:** ನಗರದಲ್ಲಿರುವ ಹಲವಾರು ಹಣ್ಣು ನೀಡುವ ಮರಗಳು, ಮರಗಳ ಕೊಂಬೆಗಳು, ವಿದ್ಯುತ್ ತಂತಿಯ ಮೇಲೆ ಆವರಿಸಿಕೊಂಡಾಗ, ಮರದಲ್ಲಿ ವಾಸ ಮಾಡಿರುವ ಅಳಿಲುಗಳು, ಗೊತ್ತಿಲ್ಲದೆ ತಂತಿಯ ಮೇಲೆ ನಡೆದಾಡಿಕೊಂಡು ಬಂದು, ವಿದ್ಯುತ್ ಸ್ಪರ್ಶದಿಂದ ಸಾವಿಗೀಡಾಗುತ್ತಿರುವುದು ಚಿಂತಾ ಜನಕವಾಗಿದೆ. ಹಾಗಾಗಿ ಯಾವುದಾದರೂ ಹಣ್ಣಿನ ಮರದಿಂದ ಕೊಂಬೆಗಳು ವಿದ್ಯುತ್ ತಂತಿಗೆ ಅಂಟಿಕೊಂಡಿದ್ದರೆ, ತಕ್ಷಣ ಅವರು ಅವುಗಳನ್ನ ಕತ್ತರಿಸಿ, ದಿನನಿತ್ಯ ಸಾವಿಗಿಡಾಗುತ್ತಿರುವ ಮೂಕ ಪ್ರಾಣಿ ಅಳಿಲನ್ನು ರಕ್ಷಿಸಬೇಕು ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ, ಎಚ್.ಕೆ. ಎಸ್. ಸ್ವಾಮಿಯವರು ವಿದ್ಯುತ್ ಇಲಾಖೆ ಬೆಸ್ಕಾಂನವರನ್ನ ವಿನಂತಿಸಿಕೊಂಡಿದ್ದಾರೆ.

ಬಹಳಷ್ಟು ನಗರದ ಸುತ್ತಮುತ್ತ ಇರುವ ಗೋನಿ ಮರಗಳ ಹಣ್ಣುಗಳನ್ನು ತಿನ್ನಲು, ಅಳಿಲುಗಳು ಹೆಚ್ಚು ಈ ಮರದಲ್ಲಿ ವಾಸ ಮಾಡುತ್ತವೆ. ಈ ಮರದ ಕೊಂಬೆಗಳು ಸುತ್ತಮುತ್ತಲಿರುವ ವಿದ್ಯುತ್ ತಂತಿಗಳಿಗೆ ಹೊಂದಿಕೊಂಡಂತೆ ಬೆಳೆದಿದ್ದಾಗ, ಹತ್ತಾರು ಅಳಿಲುಗಳು ಅ ತಂತಿಯ ಮೇಲೆ ಬಂದು, ಶಾರ್ಟ್ ಸರ್ಕ್ಯೂಟ್‌ನಿಂದ ಸುಟ್ಟು ಕೆಳಗೆ ಬೀಳುತ್ತವೆ. ಹಾಗೆ ಆ ವಿದ್ಯುತ್ ಸಂಪರ್ಕವೂ ಸಹ ಕಡಿದು ಹೋಗುತ್ತದೆ. ಹಾಗಾಗಿ ವಿದ್ಯುತ್ ಇಲಾಕೆಯವರು ಚಿತ್ರದುರ್ಗ ನಗರದಲ್ಲಿ ಯಾವುದಾದರೂ ಮರದ ಕೊಂಬೆಗಳು, ತಂತಿಗಳಿಗೆ ಹೊಂದಿಕೊಂಡಂತೆ ಬೆಳೆದಿದ್ದರೆ, ತಕ್ಷಣ ಅವುಗಳನ್ನ ಕತ್ತರಿಸಿ, ಈ ಮೂಕ ಪ್ರಾಣಿಗಳನ್ನ ರಕ್ಷಿಸಬೇಕಾಗಿದೆ. ಕೆಳಗೋಟೆಯಲ್ಲಿರುವ ಒಂದು ಬಾಳೆ ಮರದ ಸುತ್ತಮುತ್ತ ದಿನಕ್ಕೆ, 4 ರಿಂದ 5 ಅಳಿಲುಗಳು ತಿಂಗಳಿಗೆ ನೂರಾರು ಅಳಿಲುಗಳು ಪ್ರಾಣ ಕಳೆದುಕೊಳ್ಳುತ್ತಿದ್ದವು ಎಂದು ಅಲ್ಲಿಯ ನಾಗರಿಕರು ದೂರಿದ್ದಾರೆ. ಹಾಗೆ ಕೆಇಬಿ ಅವರು ಅ ಮರದ ಕೊಂಬೆಗಳನ್ನ ಕತ್ತರಿಸಿ ಆ ಅಳಿಲುಗಳನ್ನು ರಕ್ಷಣೆ ಮಾಡಿದ್ದಾರೆ. ಅದೇ ರೀತಿ ನಗರದ ಎಲ್ಲಾ ಭಾಗದಲ್ಲಿರುವ ಹಣ್ಣಿನ ಮರಗಳ ಸುತ್ತಮುತ್ತ, ವಿದ್ಯುತ್ ತಂತಿಗಳೇನಾದರೂ ಸಂಪರ್ಕ ಹೊಂದಿದ್ದರೆ, ಸಾರ್ವಜನಿಕರು ಸಹ ಅವುಗಳನ್ನ ಕೆಇಬಿ ಇಲಾಖೆಗೆ ಗಮನಕ್ಕೆ ತಂದು, ಅವುಗಳನ್ನು ಕತ್ತರಿಸಿ ಸಣ್ಣ ಸಣ್ಣ ಜೀವಿಗಳನ್ನು ರಕ್ಷಿಸಬೇಕಾಗಿದೆ ಎಂದರು.

ಬಹಳಷ್ಟು ಸಾರಿ ಮಂಗಣ್ಣಗಳು ಸಹ ವಿದ್ಯುತ್ ತಂತಿಯ ಮೇಲೆ ಬಂದು ಪ್ರಾಣ ಕಳೆದುಕೊಳ್ಳುವ ಸಂಖ್ಯೆ ಸಹ ಹೆಚ್ಚಾಗಿದೆ. ವಿದ್ಯುತ್ ಸಂಪರ್ಕ ಬಂದಮೇಲೆ, ಬಹಳಷ್ಟು ಪಕ್ಷಿಗಳು, ಕಾಗೆಗಳು, ಅಳಿಲುಗಳು, ಪ್ರಾಣ ಕಳೆದುಕೊಂಡು,



ಪರಿಸರದಲ್ಲಿ ಮಾನವನ ಚಟುವಟಿಕೆಗಳು ಎಷ್ಟು ಅಘಾತಕಾರಿ ಎಂಬುದನ್ನು ನಮಗೆ ಪರೋಕ್ಷವಾಗಿ ತಿಳಿಸಿ ಕೊಡುತ್ತಿವೆ. ಹಾಗಾಗಿ ನಾವು ಆದಷ್ಟು ಮರದ ಪಕ್ಕ ಇರುವ ತಂತಿಗಳಿಗೆ, ಪ್ಲಾಸ್ಟಿಕ್ ಪೈಪ್ಗಳನ್ನ ಹಾಕಿ, ತಂತಿಗಳನ್ನ ಮರದ ಕೊಂಬೆಗಳಿಗೆ, ಸಂಪರ್ಕ ಬರದಂತೆ ತಪ್ಪಿಸಬಹುದು ಹಾಗೂ ವಿದ್ಯುತ್ ಅವಗಡಗಳನ್ನು ಸಹ ಕಡಿಮೆಗೊಳಿಸಬಹುದು. ಇದೊಂದಿಷ್ಟು ಸ್ವಲ್ಪ ವೆಚ್ಚಮಯವಾದರೂ ಸಹ, ಪ್ರಾಣಿ ಪಕ್ಷಿಗಳ ರಕ್ಷಣೆಗಾಗಿ ನಾವು ಇಷ್ಟಾದರೂ ಪ್ರಯತ್ನ ಪಡಬೇಕು ಎಂದಿದ್ದಾರೆ.

ಬಹಳಷ್ಟು ಸಾರಿ ವಿದ್ಯುತ್ ತಂತಿಗಳು ಕೆಳಮಟ್ಟದಲ್ಲೇ ಜೋತಾಡುತ್ತಿದ್ದು, ಒಂದನೇ ಮಾಹಡಿಯಿಂದ ಬಟ್ಟೆ ಒಣ ಹಾಕುವವರೆಗೂ ಸಹ ಕೈಗೆ ತಲುಪುವಂತಿರುತ್ತದೆ, ಬಹಳಷ್ಟು ಹಾಸ್ಟೆಲ್‌ಗಳ ಸುತ್ತಮುತ್ತ ವಿದ್ಯುತ್ ತಂತಿಗಳು ಕೆಳಮಟ್ಟದಲ್ಲಿ ಜೋತಾಡುತ್ತಿದ್ದಾಗ, ವಿದ್ಯಾರ್ಥಿಗಳು ಅಂತಹ ತಂತಿಗಳನ್ನ ಮುಟ್ಟಿ ಸಾವನಪ್ಪಿರುವ ಉದಾಹರಣೆಗಳು ಸಹ ಸಾಕಷ್ಟು ದೊರೆಯುತ್ತವೆ. ಆದ್ದರಿಂದ ವಿದ್ಯುತ್ ಬಗ್ಗೆ ಎಚ್ಚರಿಕೆಯಿಂದ ಇದ್ದು, ಜೀವನವನ್ನು ನಡೆಸುವುದನ್ನು ಮಕ್ಕಳಿಗೆ, ವಿದ್ಯಾರ್ಥಿಗಳಿಗೂ ಸಹ ತಿಳಿಸಿ ಕೊಡಬೇಕಾಗಿದೆ. ಪ್ರಾಣಿಗಳ ರಕ್ಷಣೆಗಾಗಿ ನಾವಂತೂ ಕನಿಷ್ಟ ಪಕ್ಷ ಮರದಿಂದ ವಿದ್ಯುತ್ ತಂತಿಗೆ ಸಂಪರ್ಕವನ್ನಾದರು ತಪ್ಪಿಸಬೇಕಾಗಿದೆ ಎಂದಿದ್ದಾರೆ.

### ಪಿಟಿಸಿಎಲ್ ಕಾಯ್ದೆ ಕಾನೂನು ಹೋರಾಟಕ್ಕೆ ಸಿಕ್ಕ ಜಯ

# ಪರಿಶಿಷ್ಟರಿಗೆ ಜಮೀನು ಮರು ಸ್ವಾಧೀನ



**ದೇವನಹಳ್ಳಿ :** ತಾಲೂಕಿನ ಕುಂದಾಣ ಹೋಬಳಿ ಜಾಲಿಗೆ ಗ್ರಾ.ಪಂ. ವ್ಯಾಪ್ತಿಯ ಸಿಂಗರಹಳ್ಳಿ ಗ್ರಾಮದ ಸರ್ವೆ ನಂ.58/ಪಿ.1ರಲ್ಲಿ 4ಎಕರೆ ಜಮೀನಿಗೆ ಸಂಬಂಧಿಸಿದಂತೆ, ಈ ಹಿಂದೆ ಸರಕಾರದಿಂದ ಪರಿಶಿಷ್ಠ ಜಾತಿಯ ತಳವಾರ ಮುನಿಯಪ್ಪ ಎಂಬುವವರಿಗೆ ಭೂಮಂಜೂರಿಯಾಗಿರುತ್ತದೆ, ಇದರಲ್ಲಿ ಚಿನ್ನಮ್ಮ ಎಂಬುವವರಿಗೆ 1962-63ರಲ್ಲಿ 2ಎಕರೆ ಜಮೀನನ್ನು ಮಾರಾಟ ಮಾಡಿರುತ್ತಾರೆ, ಇನ್ನು 2ಎಕರೆ ಉಳಿದಿರುತ್ತದೆ, ಇದನ್ನು ಮುನಿಆವಲಪ್ಪ, ಕಾಳಪ್ಪ, ದೊಡ್ಡ ಆವಲಪ್ಪನವರು ಫವತಿ ಖಾತೆ ಮಾಡಿಕೊಂಡಿರುತ್ತಾರೆ, 1995ರಲ್ಲಿ ಜನಾರ್ಧನ್ ಕ್ರಯ ಮಾಡಿರುತ್ತಾರೆ, ಅವರು ಸರ್ಕಾರದಿಂದ ಯಾವುದೇ ಮಾರಾಟದ ಅನುಮತಿ ಪಡೆದಿರುವುದಿಲ್ಲ, ಇದರ ವಿಚಾರವಾಗಿ 2011ರಲ್ಲಿ ದಾಖಲಾತಿ ತೆಗೆದುಕೊಂಡು ಉಪವಿಭಾಗಾಧಿಕಾರಿಗಳ ಕೋರ್ಟ್‌ಗೆ ಅರ್ಜಿ ಸಲ್ಲಿಸಿರುತ್ತೇವೆ, 2016ರಲ್ಲಿ ಉಪವಿಭಾಗಾಧಿಕಾರಿಗಳು ಭೂ-ಮಂಜೂರಿದಾರ, ಅರ್ಜಿದಾರರಾದ ಎಸ್.ಎಂ. ಆನಂದಕುಮಾರ್ ಆದ ನನ್ನ ಪರವಾಗಿ ಆದೇಶ ಮಾಡಿರುತ್ತಾರೆ, ನಂತರ ನಾವು ಖಾತೆ ಮಾಡಲು ಅರ್ಜಿ ಸಲ್ಲಿಸಿರುತ್ತೇವೆ

ನಮ್ಮ ತಂದೆಯವರಿಗೆ ಹಾಗೂ ಸಂಭಂದಪಟ್ಟವರಿಗೆ ಖಾತೆ ಆಗುತ್ತದೆ, 2017ರಲ್ಲಿ ನಾವು ಜಮೀನಿನ ಸುಪರ್ಧಿಗೆ ಬರುತ್ತೇವೆ, ನಾವು ಜಮೀನಿನ ಸುಪರ್ಧಿಗೆ ಬಂದ ನಂತರ ಜನಾರ್ಧನ್ ಜಿಲ್ಲಾಧಿಕಾರಿಗಳ ಕೋರ್ಟ್‌ಗೆ ಅಪೀಲ್ ಹೋಗುತ್ತಾರೆ, 2020ರಲ್ಲಿ ಡಿ.ಸಿ.ಕೋರ್ಟ್‌ನಿಂದಲೂ ಅರ್ಜಿದಾರರಾದ ನಮಗೆ ಜಯ ದೊರೆತಿರುತ್ತದೆ, ನಾವು ಮತ್ತೆ ಜಮೀನಿನ ಸುಪರ್ಧಿಗೆ ಬಂದಿದ್ದರೂ ತಾಲೂಕಿನ ಅಧಿಕಾರಿಗಳು ಸ್ಪಂದಿಸದೇ ಇದ್ದಾಗ ನಾವು ಹೈಕೋರ್ಟ್ ಮೊರೆ ಹೋಗಿ ದಾವೆ ಹೂಡುತ್ತೇವೆ, ಹೈಕೋರ್ಟ್‌ನಲ್ಲಿ ನಮ್ಮ ಪರವಾಗಿ ಆದೇಶವಾಗಿರುತ್ತದೆ, ಅದರಂತೆ ತಾಲೂಕು ತಹಸೀಲ್ದಾರ್ ರವರಿಗೆ ನಿರ್ದೇಶನ ಬಂದಿರುತ್ತದೆ ಜಮೀನಿನ ಜಾಗವನ್ನು 4ತಿಂಗಳ ಒಳಗಾಗಿ ಮಂಜೂರಿದಾರರಿಗೆ ಬಿಡಿಸಿಕೊಡಬೇಕು ಎನ್ನುವ ಆದೇಶದ ಹಿನ್ನೆಲೆ ಮಂಜೂರಿಯಾಗಿದ್ದ 4ಎಕರೆ ಜಮೀನನ್ನು ಪಿಟಿಸಿಎಲ್ ಕಾಯ್ದೆಯಂತೆ, ಸರ್ವೆ ಕಾರ್ಯ ನಡೆಸಿ ಕಂದಾಯ ಇಲಾಖೆ ಸಿಬ್ಬಂದಿ ಹಾಗೂ ಭೂಮಾಪನ ಇಲಾಖೆ ಜಂಟಿಯಾಗಿ ಸರ್ವೆ ಮಾಡಿ ಜಮೀನಿನ ಗಡಿ ಗುರ್ತಿಸಿ ಸ್ವಾದಿನಾನುಭವಕ್ಕೆ ಕೊಟ್ಟಿದ್ದಾರೆ ಎಂದು ಅರ್ಜಿದಾರ ಸಿಗರಹಳ್ಳಿ ಗ್ರಾಮದ ಎಸ್.ಎಂ. ಆನಂದಕುಮಾರ್ ತಿಳಿಸಿದರು.

ಇದೇ ಸಮಯದಲ್ಲಿ ಸರ್ವೆ ಕಾರ್ಯ ನೆರವೇರಿಸಿದ ತಾಲೂಕು ಭೂಮಾಪಕರಾದ ಎಂ.ಶಿವಣ್ಣ ಮಾತನಾಡಿ ಪರಿಶಿಷ್ಠ ಜಾತಿಯ ಎಸ್.ಎಂ. ಆನಂದಕುಮಾರ್‌ರವರಿಗೆ 4 ತಿಂಗಳೊಳಗಾಗಿ ಬಿಡಿಸಿ ಕೊಡಲು ಹೈಕೋರ್ಟ್‌ನಿಂದ ತಹಸೀಲ್ದಾರ್ ರವರಿಗೆ ನಿರ್ದೇಶನ ನೀಡಿದ ಹಿನ್ನೆಲೆಯಲ್ಲಿ ಕಂದಾಯ ಇಲಾಖೆಯ ಅಧಿಕಾರಿಗಳ ಸಮ್ಮುಖದಲ್ಲಿ ಸರ್ವೆ ಮಾಡಿ ಜಮೀನಿನ ಗಡಿ ಗುರ್ತಿಸಿ ಅವರ ಸ್ವಾದೀನಕ್ಕೆ ಕೊಟ್ಟಿರುತ್ತೇವೆ ಎಂದು ತಿಳಿಸಿದರು. ಉಪ ತಹಸೀಲ್ದಾರ್, ಚೈತ್ರ, ರಾಜಸ್ವ ನಿರೀಕ್ಷಕರಾದ ಹನುಮಂತರಾಯಪ್ಪ, ಗ್ರಾಮ ಆಡಳಿತಾಧಿಕಾರಿ ರಮ್ಯ, ದೊಡ್ಡಪ್ಪನಹಳ್ಳಿ ಮುನಿರಾಜು, ಕುಂದಾಣ ಮುನಿರಾಜು ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

## ಸರಣಿ ಅಪಘಾತ: ನಾಲ್ಕು ವಾಹನಗಳಿಗೆ ಹಾನಿ





**ಬೇಲೂರು** ಸರಣಿ ಅಪಘಾತವೊಂದರಲ್ಲಿ 4 ವಾಹನಗಳಿಗೆ ಹಾನಿಯಾಗಿರುವ ಘಟನೆ ತಾಲ್ಲೂಕಿನ ಬಲ್ಲೇನಹಳ್ಳಿ ಗ್ರಾಮದ ಶಾಲೆಯ ಬಳಿ ಇಂದು ನಡೆದಿದ್ದು ಗೊಬ್ಬರ ತುಂಬಿದ ಲಾರಿಯು ಮಗುಚಿ ಬಿದ್ದು ಆಕ್ಸಲ್ ತುಂಡಾಗಿ ಎರಡೂ ಚಕ್ರ ಹೊರಕ್ಕೆ ಬಂದಿವೆ.

ಮಧ್ಯಾಹ್ನ 2 ಗಂಟೆ ಸಮಯದಲ್ಲಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಬರುತ್ತಿದ್ದ ಹಾಲಿನ ಲಾರಿಯೊಂದರ ಚಾಲಕನ ನಿಯಂತ್ರಣ ತಪ್ಪಿ ಗೊಬ್ಬರ ತುಂಬಿದ ಲಾರಿಯ ಪಕ್ಕಕ್ಕೆ ವಾಹನ ತಂದಿದ್ದಾನೆ. ಲಾರಿಗೆ ಡಿಕ್ಕಿ ಹೊಡೆಯುವ ಹೆದರಿಕೆಯಿಂದ ವಾಹನವನ್ನು ಮತ್ತೊಂದು ಪಕ್ಕಕ್ಕೆ ತಿರುಗಿಸುವ ವೇಳೆ ಕಾರೊಂದಕ್ಕೆ ಡಿಕ್ಕಿಯಾಗಿದೆ. ಇದೆ ವೇಳೆ ಲಾರಿಯ ಚಾಲಕ ಅಪಘಾತ ತಪ್ಪಿಸುವ ಉದ್ದೇಶದಿಂದ ಬ್ರೇಕ್ ಹಾಕಿದ ಪರಿಣಾಮ ಉರುಳಿಬಿದ್ದಿದೆ. ಉರುಳಿ ಬೀಳುವಾಗ ಟಾಟಾಏಸ್ ವಾಹನದ ಮೇಲೆ ಬಿದ್ದ ಪರಿಣಾಮ ಟಾಟಾಏಸ್ ವಾಹನಕ್ಕೂ ಹಾನಿಯಾಗಿದೆ. ಅದೃಷ್ಟವಶಾತ್ ಯಾರಿಗೂ ಪೆಟ್ಟಾಗಿಲ್ಲ. ಸ್ಥಳಕ್ಕೆ ಪೊಲೀಸರು ಆಗಮಿಸಿ ಪ್ರಕರಣ ದಾಖಲಿಸಿದ್ದಾರೆ.

# ದೋಬಿಘಾಟ್ ಆಗಿ ಪರಿವರ್ತನೆಯಾಗುತ್ತಿರುವ ಚಾಮರಾಜನಗರ ಜೋಡಿರಸ್ತೆ ಜಿಲ್ಲಾಸ್ಪತ್ರೆಯ ಮುಂಭಾಗ

**ಚಾಮರಾಜನಗರ:** ಚಾಮರಾಜನಗರ ನಗರಸಭೆಯು ನಗರ ಪ್ರದೇಶವನ್ನು ಸುಂದರವಾದ ನಗರವೆಂದು ಬಂಣಿಸುತ್ತಿದೆ. ದೆಹಲಿಯಿಂದ ಸ್ವಚ್ಚತ ನಗರವೆಂದು ಪ್ರಮಾಣ ಪತ್ರವನ್ನು ಪಡೆದಿದೆ ಆದರೆ ಜಿಲ್ಲೆಯ ಪ್ರಮುಖ ರಸ್ತೆಗಳಲ್ಲಿ ಸ್ವಚ್ಚತೆಯ ಬಗ್ಗೆ ಕೇಳುವವರು ಯಾರು ಇಲ್ಲ ನಗರಸಭಾ ಸದಸ್ಯರು ಇದ್ದಾರೋ, ಇಲ್ಲವೋ ಸಾರ್ವಜನಿಕರಿಗೆ ಗೊಂದಲವಾಗಿದೆ. ಶಾಸಕರ ಮಾತು, ಪೌರಾಯುಕ್ತರ ಮಾತುಗಳಿಗೆ ಕ್ಯಾರೆ ಮಾಡದ ನಗರಸಭೆ ನೌಕರರು. ಇವರುಗಳು ಜಿಲ್ಲಾ ಕೇಂದ್ರದಲ್ಲಿ ಇರುವವರೆಗೂ ಜಿಲ್ಲೆಯು ಶುದ್ದವಾಗಲು ಸಾಧ್ಯವೇ.

ಒಂದೋ, ಅಥವಾ ಎರಡೋ ಬಡಾವಣೆಗಳಲ್ಲಿ ನಿಷ್ಠೆಯಿಂದ ನಗರಸಭಾ ಸದಸ್ಯರು ಸಾರ್ವಜನಿಕರ ಕುಂದು ಕೊರತೆಗಳಿಗೆ ಕೈ ಜೋಡಿಸುತ್ತಿದ್ದಾರೆ. ಇನ್ನು ಕೆಲವು ಸದಸ್ಯರುಗಳು ಸಭೆಗಳಿಗೆ, ಹಾಗೂ



ಇ-ಸ್ವತ್ತು ಮಾಡಿಸಿಕೊಡುವ ಕೆಲಸಗಳಿಗೆ ಮುಂದಾಗಿದ್ದಾರೆ. ಇವರಿಗೆ ಸಾರ್ವಜನಿಕರ ಸೇವೆಗಳಿಗಿಂತ ಇವರ ಸ್ವಂತ ಸೇವೆಗಳೆ ಹೆಚ್ಚಾಗಿದೆ. ಜಿಲ್ಲಾ ಕೇಂದ್ರದಲ್ಲಿ ಮಾನ್ಯ ರಾಜ್ಯಪಾಲರಾಗಿ ಸೇವೆಸಲ್ಲಿದ್ದ ದಿವಂಗತ ಬಿ.ರಾಚಯ್ಯ ಅವರ ಹೆಸರು ಜೋಡಿರಸ್ತೆಗೆ ನಾಮಕರಣ ಮಾಡಲಾಗಿದೆ. ಸ್ವಚ್ಚತೆಯಿಂದ ನೋಡಿಕೊಳ್ಳುವುದು ನಗರಸಭೆಯ ಕರ್ತವ್ಯವಾಗಿದೆ. ಜಿಲ್ಲಾಸ್ಪತ್ರೆಯ ಮುಂದೆ ಎಳನೀರಿನ ಬುಂಡೆಗಳು, ಹಾಗೂ ಇನ್ನಿತರೆ ವಸ್ತುಗಳು ಬಿಸಾಡಿ ಹೋಗುತ್ತಾರೆ. ಅದಲ್ಲದೇ ರಸ್ತೆಯ ಬದಿಯ ಕಬ್ಬಿಣದ ಕಂಬಿಗಳಿಗೆ ದೋಬಿಘಾಟ್ ನಲ್ಲಿ ಬಟ್ಟೆಗಳನ್ನು ಒಣಗಿಸಲು ಹಾಕುವ ಮಾದರಿಯಲ್ಲಿ ಹಾಕುತ್ತಾರೆ ಇದು ನಗರಸಭೆಯ ಅಧಿಕಾರಿಗಳಿಗೆ ಕಣ್ಣಿಗೆ ಬಿದ್ದಿಲ್ಲವೇ.

## ಶ್ರೀಚಾಮುಂಡೇಶ್ವರಿ ಪತ್ತಿನ ಸೌಹಾರ್ದ ಸಹಕಾರಿ ಸಂಘ ನಿಯಮಿತ ಶಾಖೆ ಪ್ರಾರಂಭೋತ್ಸವ

**ತಿಪಟೂರು:** ನಗರದ ಹರಳೀಕಟ್ಟೆಯ ಎಸ್‌ಆರ್‌ವಿ ಕಾಂಪೌಂಡ್ ನಲ್ಲಿ ಶ್ರೀ ಚಾಮುಂಡೇಶ್ವರಿ ಪತ್ತಿನ ಸಹಕಾರಿ ನಿಯಮಿತದ ಶಾಖೆ 1ರ ಪೂಜಾಕಾರ್ಯಕ್ರಮಕ್ಕೆ ಆಗಮಿಸಿದ ಕೆರಗೋಡಿ-ರಂಗಾಪುರ ಮಠದ ಶ್ರೀ ಗುರುಪರದೇಶಿಕೇಂದ್ರ ಸ್ವಾಮೀಜಿಯವರಿಗೆ ಪಾದಪೂಜೆ ನೆರವೇರಿಸಲಾಯಿತು. ಈ ಸಂದರ್ಭದಲ್ಲಿ ಶ್ರೀಗಳುಅಧಿಕೃತವಾಗಿಕಂಪ್ಯೂಟರ್‌ಗೆ ಸಾಫ್ಟ್‌ವೇರ್‌ನ್ನು ಅಳವಡಿಸುವುದರ ಮೂಲಕಚಾಲನೆಗೊಳಿಸಿದರು, ಈ ಸಂದರ್ಭದಲ್ಲಿ ಮಾತನಾಡಿದ ಶ್ರೀಗಳು, ಚಾಮುಂಡೇಶ್ವರಿ ಸಹಕಾರಿಯು 2006 ರಿಂದಲೂ ಬ್ಯಾಂಕಿಂಗ್ ವ್ಯವಸ್ಥೆಯನ್ನು ಶಿಸ್ತುಬದ್ಧವಾಗಿ ನಡೆಸಿಕೊಂಡು ಬರುತ್ತಿದೆ. ಇದಕ್ಕೆಉದಾಹರಣೆಯಾಗಿ ಈ ಶಾಖಾ ಕಛೇರಿಯಉದ್ಘಾಟನೆ. ಬ್ಯಾಂಕಿಂಗ್‌ಕ್ಷೇತ್ರದಜೊತೆಗೆ ಈ ಸಹಕಾರಿಯು ಅನೇಕ ಸಾಮಾಜಿಕ ಕೆಲಸಗಳನ್ನು ಮಾಡಿಕೊಂಡು ಸಾಮಾಜದಅಭಿವೃದ್ಧಿಗೂತನ್ನದೇಕೊಡುಗೆಯನ್ನು ನೀಡುತ್ತಿದೆ.ಸಹಕಾರಿ ಈ ಬಾಗದಗ್ರಾಹಕರಿಗಾಗಿ ಹೊಸ ಶಾಖೆಯನ್ನುತೆರೆದಿದೆಎಂದರೆಗ್ರಾಹಕ ಸ್ನೇಹಿ ವಾತಾವರಣವನ್ನು ಸೃಷ್ಟಿಸಿದೆ ಎಂದರ್ಥಎಂದರು.

ಸಂಘದಅಧ್ಯಕ್ಷರಾದವಿಶಾಲ ಸೋಮಶೇಖರ್, ಚೌಡೇಶ್ವರಿ ಸಹಕಾರಿಯಎಸ್.ಸೋಮಶೇಖರ್, ಸಹಕಾರಿಯ ಮುಖ್ಯಕಾರ್ಯನಿರ್ವಹಣಾಧಿಕಾರಿಆರ್.ಕಲ್ಲೇಶ್, ನಗರಸಭೆ ಸದಸ್ಯರು, ನಿರ್ದೇಶಕರಾದ ಮಹೇಶ್, ಸೋಮಶೇಖರ್, ಗಿರೀಶ್, ಚೌಡೇಶ್ವರಿ ಸಹಕಾರಿಯ ಮೃತ್ಯುಂಜಯ ಸೇರಿದಂತೆ ವಿವಿದ ಸಹಕಾರಿಯ ಅಧ್ಯಕ್ಷರುಗಳು ನಿದೇಶಕರು, ಸದಸ್ಯರು, ಸಹಾಯಕಕುಮಾರಸ್ವಾಮಿ, ಸಿಬ್ಬಂದಿವರ್ಗ ಹಾಜರಿದ್ದರು.

# ವಿದ್ಯಾರ್ಥಿಗಳು ಮೊಬೈಲ್ ದಾಸರಾಗದೆ ವಿದ್ಯಾಭ್ಯಾಸ ಕಡೆ ಹೆಚ್ಚು ಗಮನ ಹರಿಸಿ

**ತುಮಕೂರು :** ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿಗಳು ವಿದ್ಯಾಭ್ಯಾಸ ಕಡೆ ಹೆಚ್ಚು ಗಮನ ಕೊಟ್ಟರೆ ಅದು ಬದುಕನ್ನು ಬದಲಿಸುತ್ತದೆ, ಇಂದಿನ ವಿದ್ಯಾರ್ಥಿಗಳು ಮೊಬೈಲ್ ದಾಸರಾಗಿ ವಿದ್ಯಾಭ್ಯಾಸದ ಕಡೆ ಗಮನ ನೀಡುತ್ತಿಲ್ಲ. ಪುಸ್ತಕಗಳನ್ನು ಓದುತ್ತಿಲ್ಲ, ಪುಸ್ತಕಗಳನ್ನು ಓದುವುದರಿಂದ ಸಮಾಜದಲ್ಲಿ ತಲೆಯೆತ್ತಿ ನಡೆಯಬಹುದು. ವಿದ್ಯಾರ್ಥಿಗಳು ಓದಿನ ಜೊತೆಗೆ ಸೃಜನಾತ್ಮಕ ಕಲೆ, ಸಂಸ್ಕೃತಿ ಹಾಗೂ ಕ್ರೀಡೆಯಂತಹ ಚಟುವಟಿಕೆಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳಬೇಕು. ಮಹಿಳೆಯರು ಶಿಕ್ಷಣದಲ್ಲಿ ತೋರಿಸುತ್ತಿರುವ ಅಸಕ್ತಿ ಬಗ್ಗೆ ಮತ್ತು ಅನನ್ಯ ಕಾಲೇಜು ಶಿಕ್ಷಣದ ಜೊತೆಗೆ ಇತರೆ ಕೌಶಲ್ಯಗಳ ಬಗ್ಗೆ ನೀಡುತ್ತಿರುವ ತರಬೇತಿ ಬಗ್ಗೆ ಮೆಚ್ಚುಗೆಯನ್ನು ಬೇಲೂರಿನ ಜಿ.ಪಿ.ಟಿ. ಉಪನ್ಯಾಸಕರಾದ ನಾಗಶ್ರೀ ತ್ಯಾಗರಾಜ್.ಎನ್ ರವರು ಅನನ್ಯ ಅಭುದಯ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ನಗರದ ವರಾನ ಗ್ಲೋಬಲ್ ಟ್ರಸ್ಟ್‌ನ ಸಂಯುಕ್ತಾಶ್ರಯದಲ್ಲಿ ಅನನ್ಯ ಸಮೂಹ ಸಂಸ್ಥೆಯ ಅನನ್ಯ ಇನ್ಸ್ಟಿಟ್ಯೂಟ್ ಅಫ್ ಕಾಮರ್ಸ್ ಅಂಡ್ ಮ್ಯಾನೇಜ್ಮೆಂಟ್‌ನ ವತಿಯಿಂದ ''ಅನನ್ಯ ಅಭ್ಯುದಯ ಸಂಭ್ರಮ'' 2024 ಜುಲೈ 12 ರಂದು ಶುಕ್ರವಾರ ಬೆಳಿಗ್ಗೆ 10 ಗಂಟೆಗೆ ಗುಬ್ಬಿ ವೀರಣ್ಣ ರಂಗಮಂದಿರದಲ್ಲಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ತುಮಕೂರು ವಿಶ್ವವಿದ್ಯಾಲಯ ಕುಲಸಚಿವರಾದ ನಹಿದಾ ಜಮ್ ಜಮ್‌ರವರು ಮಾತನಾಡುತ್ತಾ ತಮ್ಮ ಭಾಷಣದಲ್ಲಿ ಇತ್ತೀಚಿಗೆ ವಿಶ್ವವಿದ್ಯಾನಿಲಯಗಳಲ್ಲಿ ಹೊಸ ಹೊಸ ಕೋಸ್‌ಗಳ ಆಯ್ಕೆ ಇದ್ದರೂ ಸಹ ನಿರುದ್ಯೋಗ ಹೆಚ್ಚಾಗುತ್ತಿದೆ.




ಇದಕ್ಕೆ ಕಾರಣ ವಿದ್ಯಾರ್ಥಿಗಳು ಹೊಸ ಹೊಸ ಕೌಶಲ್ಯಗಳನ್ನು ಬಳಸಿಕೊಳ್ಳದೆ ಇರುವುದು ಮುಖ್ಯ ಕಾರಣವಾಗಿದೆ ಎಂದು ತಿಳಿಸಿದರು. ಹಾಗೂ ತಂದೆ-ತಾಯಿಯ ನಿಸ್ವಾರ್ಥ ಪ್ರೀತಿಯನ್ನು ಗೌರವಿಸಿ ನಿಮ್ಮ ಏಳಿಗ್ಗೆಯನ್ನು ಕಂಡು ಸಂತೋಷ ಪಡುವವರಿಬ್ಬರೆ. ನಿಮ್ಮ ಸಾಧನೆಯ ಮೂಲಕ ಜಗತ್ತಿಗೆ ಅವರನ್ನು ಪರಿಚಯಿಸಿ ಎಂದು ಅರ್ಥಪೂರ್ಣವಾಗಿ ವಿವರಿಸಿದರು.

ತುಮಕೂರು ವಿಶ್ವವಿದ್ಯಾಲಯದ ವಾಣಿಜ್ಯ ವಿಭಾಗದಲ್ಲಿ ಅನನ್ಯ ಕಾಲೇಜಿನ ವಿದ್ಯಾರ್ಥಿಗಳಾದ ಎರಡನೇ ರ್‍ಯಾಂಕ್ ಪಡೆದ ವಿದ್ಯಾರ್ಥಿಗಳಾದ ಕು.ಲೇಖನಾ, ನಾಲ್ಕನೇ ರ್‍ಯಾಂಕ್ ಪಡೆದ ಸಹಾನ.ಜಿ ಇವರನ್ನು ಕುಲಸಚಿವರು ಸನ್ಮಾನಿಸಿದರು. ಕಾಲೇಜಿನ ವಾರ್ಷಿಕ ಕ್ರೀಡಾ ಕೂಟದಲ್ಲಿ ವಿಜೇತರಾದ ಕ್ರೀಡಾಪಟುಗಳಿಗೆ ಪ್ರಶಸ್ತಿ ನೀಡಿ ಗೌರವಿಸಲಾಗಿತ್ತು. ಕಾರ್ಯಕ್ರಮದಲ್ಲಿ ಮೊದಲ ಹಂತದಲ್ಲಿಯೇ ಸಿ.ಎ. ಪರೀಕ್ಷೆಯಲ್ಲಿ ಉತ್ತೀರ್ಣರಾದ ಪ್ರವೀಣ್ ಎಸ್ ಶಿರಗುಪ್ಪರವರನ್ನು ಸನ್ಮಾನಿಸ ಲಾಯಿತ್ತು. ಕಾರ್ಯಕ್ರಮದ ವಿಶೇಷ ಆಹ್ವಾನಿತರಾದ ಬೇಲೂರಿನ ಜಿ.ಪಿ.ಟಿ. ಉಪನ್ಯಾಸಕರಾದ ನಾಗಶ್ರೀ ತ್ಯಾಗರಾಜ್.ಎನ್, ತುಮಕೂರು ವಿಶ್ವವಿದ್ಯಾಲಯ ಕುಲಸಚಿವರಾದ ನಹಿದಾ ಜಮ್ ಜಮ್, ಪ್ರಜಾಪ್ರಗತಿ ದಿನಪತ್ರಿಕೆ ಸಂಪಾದಕರಾದ ಎಸ್.ನಾಗಣ್ಣ ಮತ್ತು ಗ್ರಾಮ ಪಂಚಾಯತಿ ಅಧ್ಯಕ್ಷರಾದ ಸತೀಶ್ ಕಾಡಶೆಟ್ಟಿಹಳ್ಳಿ ರವರನ್ನು ಸನ್ಮಾನಿಸಲಾಯಿತ್ತು.

ಇದೇ ಸಂದರ್ಭದಲ್ಲಿ ಪ್ರತಿಯೊಂದು ವಿಷಯಗಳಲ್ಲಿಯೂ ನೂರಕ್ಕೆ ನೂರು ಅಂಕ ಪಡೆದ ಪದವಿ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿದ್ದ ಅನನ್ಯ ಸಂಸ್ಥೆಯ ಅಧ್ಯಕ್ಷರಾದ ಚಾರ್ಟರ್ಡ್ ಅಕೌಂಟೆಂಟ್ ಎಸ್.ವಿಶ್ವನಾಥ್‌ರವರು ಮಾತನಾಡುತ್ತಾ 2012ರಲ್ಲಿ ಪ್ರಾರಂಭವಾದಾಗಿನಿಂದ ಇಂದಿನವರೆಗೆ ನಡೆದು ಬರಲು ಕಾರಣಕರ್ತರಾದ ಎಲ್ಲಾ ಬೋಧಕ ಬೋಧಕೇತರ ಸಿಬ್ಬಂದಿಗಳು, ಹಿತೈಶಿಗಳಿಗೆ ಕೃತಜ್ಞತೆಯನ್ನು ಸಲ್ಲಿಸಿದರು. ನಮ್ಮ ಸಂಸ್ಥೆಯು ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಉನ್ನತ ಶಿಕ್ಷಣ ನೀಡುವುದಾಗಿ ಹೇಳಿದರು. ಕಾರ್ಯಕ್ರಮದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ, ನಾಟಕ, ನೃತ್ಯ, ಕಾಲೇಜ್‌ಡೇ ಕಾರ್ಯಕ್ರಮಕ್ಕೆ ಮೆರಗು ತಂದಿತ್ತು.

ಅನನ್ಯ ಸಂಸ್ಥೆಯ ಟ್ರಸ್ಟಿಯಾದ ಡಾ.ಹೆಚ್.ಹರೀಶ್ ರವರು ಪ್ರಾಸ್ತಾವಿಕ ನುಡಿಗಳನ್ನಾಡಿದ ಅವರು ಅನನ್ಯ ಸಂಸ್ಥೆ ಬೆಳೆದು ಬಂದ ರೀತಿ ಇದರ ಕಾರ್ಯ ವೈಖರಿ ಮತ್ತು ಕಾರ್ಯ ಯೋಜನೆಗಳ ಬಗ್ಗೆ ವಿವರಿಸಿದರು. ಕಾರ್ಯಕ್ರಮದಲ್ಲಿ ವಂದನಾರ್ಪಣೆಯನ್ನು ಪ್ರಾಂಶುಪಾಲರಾದ ಡಾ.ಎಂ.ವಿಶ್ವಾಸ್ ರವರು ವಂದಿಸಿದರು.

ಕಾರ್ಯಕ್ರಮದಲ್ಲಿ ವರಾನ ಗ್ಲೋಬಲ್‌ನ ಟ್ರಸ್ಟ್‌ನ ಉಪಾಧ್ಯಕ್ಷರಾದ ಬಿ.ಆರ್.ಉಮೇಶ್, ಕಾರ್ಯದರ್ಶಿಗಳಾದ ಪ್ರೊ.ಟಿ.ಎನ್. ಚೆನ್ನಬಸವಪ್ರಸಾದ್, ಟ್ರಸ್ಟಿಗಳಾದ ಹೆಚ್.ಎನ್.ಚಂದ್ರಶೇಖರ್, ಟಿ.ಎನ್.ಶ್ರೀಕಂಠಸ್ವಾಮಿ, ಎನ್.ವಿ.ಬಾಲಾಜಿ, ವಿ.ರಜತ್, ಅನನ್ಯ ಪಿ.ಯು. ಕಾಲೇಜಿನ ಪ್ರಾಂಶುಪಾಲರಾದ ಡಾ.ಆರ್.ಆರ್.ರಘು, ಪಿ.ಯು. ಸೈನ್ಸ್ ವಿಭಾಗದ ಮುಖ್ಯಸ್ಥರಾದ ರಂಗನಾಥಪ್ಪ ಹಾಗೂ ಬೋಧಕ ಬೋಧಕೇತರ ಸಿಬ್ಬಂದಿ ವರ್ಗದವರು, ಪೋಷಕರು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಸರ್ವಮಂಗಳ ಮತ್ತು ಅನಂತಲಕ್ಷ್ಮಿ.ಆರ್ ರವರು ನಡೆಸಿಕೊಟ್ಟರು.

## ಶ್ರೇಷ್ಠ ಕೃಷಿಕ ಪ್ರಶಸ್ತಿಗೆ ಅರ್ಜಿ

**ಚಿಕ್ಕಬಳ್ಳಾಪುರ:** ಕೃಷಿ ಇಲಾಖೆಯಆತ್ಮ ಯೋಜನೆಯಡಿ ಜಿಲ್ಲಾ ಮಟ್ಟದ ಮತ್ತು ತಾಲ್ಲೂಕು ಮಟ್ಟದ ಆತ್ಮ ಶ್ರೇಷ್ಠ ಕೃಷಿಕ ಪ್ರಶಸ್ತಿಗಳನ್ನು ಕೃಷಿ ಹಾಗೂ ಕೃಷಿ ಸಂಬಂಧಿಸಿದ ಕ್ಷೇತ್ರಗಳಲ್ಲಿ,ಚಟುವಟಿಕೆಗಳಲ್ಲಿ ನಿರಂತರವಾಗಿ ತೊಡಗಿಸಿಕೊಂಡಿರುವ ರೈತರಿಗೆ,ರೈತ ಮಹಿಳೆಯರಿಗೆ ವಿತರಿಸಲಾಗುವುದು.

**ಸಾಧನೆ ಏನೀರಬೇಕು?:** ಪ್ರಶಸ್ತಿಗಾಗಿ ರೈತರು ಭಾಗವಹಿಸಬಹುದಾದ ಕೃಷಿ ಹಾಗೂ ಕೃಷಿ ಸಂಬಂಧಿತ ಚಟುವಟಿಕೆಗಳಾದ ಕೃಷಿಯಲ್ಲಿ ಸಮಗ್ರ ಬೆಳೆ ಪದ್ದತಿ, ಸಮಗ್ರ ನೀರು ನಿರ್ವಹಣೆ, ಸಾವಯವ ಕೃಷಿ, ವೈಜ್ಞಾನಿಕ ಯಂತ್ರೋಪಕರಣಗಳ ಬಳಕೆ, ತೋಟಗಾರಿಕೆ ಬೆಳೆಗಳ ಅಳವಡಿಕೆ, ಕೋಳಿ ಸಾಕಾಣಿಕೆ, ಹಂದಿ ಸಾಕಾಣಿಕೆ, ಮೀನುಗಾರಿಕೆ, ರೇಷ್ಮೆ



ಕೃಷಿ, ಕೃಷಿ ಸಂಸ್ಕರಣೆ, ಅರಣ್ಯ ಕೃಷಿ, ಆಡು, ಕುರಿ, ಮೊಲ ಸಾಕಾಣಿಕೆ, ಹಸಿರು ಮನೆಯಲ್ಲಿ ತರಕಾರಿ ಮತ್ತು ಹೂ ಬೇಸಾಯ ಇತ್ಯಾದಿ ಚಟುವಟಿಕೆಗಳ ಕ್ಷೇತ್ರಗಳಲ್ಲಿ ವಿಶೇಷ ಸಾಧನೆಗಳಿಸಿರುವ ರೈತರು,ರೈತ ಮಹಿಳೆಯರು ಜಿಲ್ಲಾ ಮಟ್ಟ ಮತ್ತು ತಾಲ್ಲೂಕು ಮಟ್ಟದ ಆತ್ಮ ಶ್ರೇಷ್ಠ ಕೃಷಿಕ ಪ್ರಶಸ್ತಿಗಳಿಗೆ ಅರ್ಜಿಗಳನ್ನು ಸಲ್ಲಿಸಬಹುದು. ಅರ್ಹ ಆಸಕ್ತ ರೈತರು, ರೈತ ಮಹಿಳೆಯರು ಅರ್ಜಿಗಳನ್ನು ಜಂಟಿ ಕೃಷಿ ನಿರ್ದೇಶಕರು ಹಾಗೂ ಯೋಜನಾ ನಿರ್ದೇಶಕರು (ಆತ್ಮ) ಚಿಕ್ಕಬಳ್ಳಾಪುರ ಇವರ ಕಚೇರಿಯಲ್ಲಿ ಅಥವಾ ಆಯಾ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಅಥವಾ ಆಯಾ ಹೋಬಳಿಯ ರೈತ ಸಂಪರ್ಕ ಕೇಂದ್ರಗಳಲ್ಲಿ ಪಡೆಯಬಹುದು. ಭರ್ತಿ ಮಾಡಿದ ಅರ್ಜಿಗಳನ್ನು ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಜುಲೈ-31 ರೊಳಗಾಗಿ ಸಲ್ಲಿಸಬಹುದೆಂದು ಜಂಟಿ ಕೃಷಿ ನಿರ್ದೇಶಕರಾದ ಜಾವೀದಾ ನಸೀಮಾ ಖಾನಂ ತಿಳಿಸಿದ್ದಾರೆ.

## ವಿವಿಧ ಯೋಜನೆಗಳ ಸಾಲ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಕರ್ನಾಟಕ ಆರ್ಯವೈಶ್ಯ ಸಮುದಾಯ ಅಭಿವೃದ್ಧಿ ನಿಗಮದಿಂದ 2024-25ನೇ ಸಾಲಿನಲ್ಲಿ ಸ್ವಯಂ-ಉದ್ಯೋಗ ನೇರ ಸಾಲ ಯೋಜನೆ, ಆಹಾರ ವಾಹಿನಿ ಯೋಜನೆ, ವಾಸವಿ ಜಲಶಕ್ತಿ ಯೋಜನೆ ಮತ್ತು ಅರಿವು ಶೈಕ್ಷಣಿಕ ಸಾಲ ಯೋಜನೆಗಳಡಿ ಸಾಲ-ಸೌಲಭ್ಯವನ್ನು ಪಡೆಯಲು ಅರ್ಹ ಅಭ್ಯರ್ಥಿಗಳಿಂದ ಕಡ್ಡಾಯವಾಗಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಆಗಸ್ಟ್ 31 ಕೊನೆಯ ದಿನಾಂಕವಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರ ಕಚೇರಿಗೆ ಅಥವಾ ದೂ. ಸಂ: 08156-277039 ಮತ್ತು ನಿಗಮದ ಸಹಾಯವಾಣಿ: 94484 51111 ಗೆ ಸಂಪರ್ಕಿಸಬಹುದೆಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ಹುದೆಗಳಿಗೆ ಅರ್ಜಿ

**ಚಿಕ್ಕಬಳ್ಳಾಪುರ:** ಜಿಲ್ಲೆಯ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರವನ್ನು ಪ್ರಾರಂಭಿಸಿದ್ದು, ಈ ಕೇಂದ್ರದಲ್ಲಿ ಕಾರ್ಯನಿರ್ವಹಿಸಲು ಸಿಬ್ಬಂದಿಗಳ ಅವಶ್ಯಕತೆ ಇರುವುದರಿಂದ ಯೋಜನ ಸಂಯೋಜಕರು-1 ಹುದ್ದೆಗೆ ಸ್ನಾತಕೋತ್ತರ ಪದವಿ, ಕೌನ್ಸಿಲರ್/ಸಮಾಜ ಸೇವಕರು-3 ಹುದ್ದೆಗಳಿಗೆ ಎಂ.ಎಸ್.ಡಬ್ಲ್ಯೂ ಮತ್ತು ಕಚೇರಿ ಸೇವಕರು/ಸ್ವಚ್ಛತಾಗಾರರು-1 ಹುದ್ದೆಗೆ ಎಸ್.ಎಸ್‌ಎಲ್.ಸಿ ವಿದ್ಯಾರ್ಹತೆಯೊಂದಿಗೆ ಅನುಭವ ಹೊಂದಿರುವ ಆಸಕ್ತಿವುಳ್ಳವರಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ನಮೂನೆಗಳನ್ನು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕಲ್ಯಾಣಾಧಿಕಾರಿಗಳ ಕಚೇರಿಯಲ್ಲಿ (08156-277114, 200122) ಪಡೆದು ಭರ್ತಿ ಮಾಡಿದ ಅರ್ಜಿಯೊಂದಿಗೆ ಅಗತ್ಯ ದಾಖಲೆಗಳನ್ನು ಜುಲೈ 31 ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ವಿಷ್ಣು ವಿದ್ಯಾ ಸಂಸ್ಥೆ ಮುಖ್ಯಸ್ಥರ ದೂ.ಸಂ: 9663202292, 9986152173 ಗೆ ಸಂಪರ್ಕಿಸಬಹುದೆಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಎನ್.ಎಂ. ಜಗದೀಶ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉಚಿತ ಉಪಕರಣಗಳ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಜಿಲ್ಲೆಯ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖಾ ವತಿಯಿಂದ ವೃತ್ತಿಪರ ಕುಶಲಕರ್ಮಿಗಳಿಗೆ ಉಚಿತವಾಗಿ ವಿದ್ಯುತ್ ಚಾಲಿತ ಹೊಲಿಗೆ ಯಂತ್ರ ಹಾಗೂ ಸುಧಾರಿತ ಉಪಕರಣಗಳಾದ ಒಡಗಿ, ಗಾರೆ, ದೋಬಿ, ಕಲ್ಲು ಕೆಲಸ, ಕುಲುಮೆ, ಕ್ಷೌರಿಕ ಕೆಲಸ ಮಾಡುವ ಗ್ರಾಮೀಣ ಕುಶಲಕರ್ಮಿಗಳಿಗೆ ನೀಡಲು ಫಲಾನುಭವಿಗಳ ಆಯ್ಕೆಗೆ ಅರ್ಜಿ ಆಹ್ವಾನಿಸಲಾಗಿದೆ. ಎಲ್ಲಾ ದಾಖಲಾತಿಗಳನ್ನು ಜುಲೈ 31 ರೊಳಗೆ ಅಪ್ ಲೋಡ್ ಮಾಡಲು ಕೋರಿದೆ. ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರ ಕಚೇರಿ, ಜಿಲ್ಲಾ ಪಂಚಾಯತ್, ಕೈಗಾರಿಕಾ ವಿಭಾಗ, ಬಿ.ಬಿ. ರಸ್ತೆ, ಚಿಕ್ಕಬಳ್ಳಾಪುರ ಅಥವಾ ಆಯಾ ತಾಲ್ಲೂಕಿನ ಕೈಗಾರಿಕಾ ವಿಸ್ತರಣಾಧಿಕಾರಿಗಳ ಕಚೇರಿಯನ್ನು ಸಂಪರ್ಕಿಸಬಹುದೆಂದು ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರ್ನಾಟಕ ಜಾನಪದ ಅಕಾಡೆಮಿಗೆ ಸಹ ಸದಸ್ಯರ ನೇಮಕ

**ಚಿಕ್ಕಬಳ್ಳಾಪುರ:** ಜೂನ್ 24 ರಂದು ನಡೆದ ಕರ್ನಾಟಕ ಜಾನಪದ ಅಕಾಡೆಮಿಯ ಪ್ರಥಮ ಸರ್ವ ಸದಸ್ಯರ ಸಭೆಯಲ್ಲಿ ಬೀದರ್ ಜಿಲ್ಲೆಯ ವಿಜಯ ಕುಮಾರ ಸೋನಾರೆ, ಮಂಡ್ಯ ಜಿಲ್ಲೆಯ ಸಿ.ಎನ್. ಮಂಜೇಶ್ ಚನ್ನಾಪುರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹುಲಿಕುಂಟೆ ಮೂರ್ತಿ ಅವರನ್ನು ಅಕಾಡೆಮಿಯ ಸಹ ಸದಸ್ಯರನ್ನಾಗಿ ಆಯ್ಕೆ ಮಾಡಲಾಗಿದೆ ಎಂದು ಕರ್ನಾಟಕ ಜಾನಪದ ಅಕಾಡೆಮಿಯ ಅಧ್ಯಕ್ಷರಾದ ಗೊಲ್ಲಹಳ್ಳಿ ಶಿವಪ್ರಸಾದ್ ತಿಳಿಸಿದ್ದಾರೆ.

# ಬಿಜೆಪಿಯಿಂದ ದ್ವೇಷ ರಾಜಕಾರಣ: ಕಾಂಗ್ರೆಸ್‌ನಿಂದ ಬೃಹತ್ ಪ್ರತಿಭಟನೆ

**ಮೈಸೂರು:** ಬಿಜೆಪಿ ದ್ವೇಷದ ರಾಜಕಾರಣ ಮಾಡುತ್ತಿದೆ ಎಂದು ಆರೋಪಿಸಿ ನಗರ ಮತ್ತು ಗ್ರಾಮಾಂತರ ಕಾಂಗ್ರೆಸ್ ಸಮಿತಿ ವತಿಯಿಂದ ಶುಕ್ರವಾರ ಬೃಹತ್ ಪ್ರತಿಭಟನಾ ಧರಣಿ ನಡೆಯಿತು.



ಜೆಎಲ್‌ಬಿ ರಸ್ತೆಯ ಮುಡಾ ಪಕ್ಕದಲ್ಲಿಯೇ ಇರುವ ದಿ ಇನ್ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್ ಸಭಾಂಗಣದ ಮುಂಭಾಗದಲ್ಲಿ ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್ ನೇತೃತ್ವದಲ್ಲಿ ಧರಣಿ ನಡೆಸಿದರು. ಬಿಜೆಪಿ ಹೋರಾಟ ಭ್ರಷ್ಟಾಚಾರದ ಕಡೆ, ಕಾಂಗ್ರೆಸ್ ಜನಪರ ಆಡಳಿತದ ವಿರೋಧಿ ಬಿಜೆಪಿ ಭಿತ್ತಿಪತ್ರಗಳನ್ನು ಹಿಡಿದ ಕಾರ್ಯಕರ್ತರು ಆಕ್ರೋಶ ವ್ಯಕ್ತಪಡಿಸಿದರು. ಬಿಜೆಪಿ ನಾಯಕರ ವಿರುದ್ಧ ಧಿಕ್ಕಾರ ಕೂಗಿದರು.

ಮುತ್ತಿಗೆ ನಿರ್ಣಯ: ಧರಣಿಯಲ್ಲಿ ಸಿದ್ದರಾಮಯ್ಯ ವಿರುದ್ಧ ಭ್ರಷ್ಟಾಚಾರದ ಆರೋಪ ಮಾಡುತ್ತಿರುವ ಬಿಜೆಪಿ ನಾಯಕರಿಗೆ ಮುತ್ತಿಗೆ ಹಾಕುವ ನಿರ್ಣಯವನ್ನು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್ ಮಂಡಿಸಿದರು. ಬಳಿಕ ಕಾಂಗ್ರೆಸ್ ಮುಖಂಡರ ನೇತೃತ್ವದಲ್ಲಿ ಸಾವಿರಾರು ಕಾರ್ಯಕರ್ತರು ಮುಡಾ ಮುಂಭಾಗದ ಮೂಲಕ ಬಿಜೆಪಿ ವತಿಯಿಂದ ನಡೆಯುತ್ತಿರುವ ಪ್ರತಿಭಟನಾ ಸ್ಥಳದತ್ತ ತೆರಳಲು ಮುನ್ನುಗ್ಗಿದರು.

ಮುಡಾ ಆವರಣದಲ್ಲಿ ಬ್ಯಾರಿಗೇಡ್ ತಡೆಗೋಡೆ ನಿರ್ಮಿಸಿದ ಪೊಲೀಸರು ಕಾರ್ಯಕರ್ತರನ್ನು ತಡೆದರು. ಈ ವೇಳೆ ಪೊಲೀಸರೊಂದಿಗೆ ತೀವ್ರ ವಾಗ್ವಾದ ನಡೆಯಿತು. ತಳ್ಳಾಟ ನೂಕಾಟ ನಡೆಯಿತು. ಕಾರ್ಯಕರ್ತರು ವಿವಿಧ ಘೋಷಣೆಗಳನ್ನು ಕೂಗಿದರು. ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ಪ್ರತಿಭಟನಾ ಸ್ಥಳಕ್ಕೆ ಆಗಮಿಸಿ ಮುಖಂಡರೊಂದಿಗೆ ಮಾತುಕತೆ ನಡೆಸಿದರು. ಬಳಿಕವೂ ಪ್ರತಿಭಟನೆ ಮುಂದುವರಿಯಿತು. ತುಂತುರು ಮಳೆಯಲ್ಲಿಯೂ ಮಹಿಳಾ ಕಾರ್ಯಕರ್ತೆಯರು ಘೋಷಣೆ ಕೂಗಿದರು.

ಪೊಲೀಸರ ಅವಕಾಶ ದೊರೆಯದ ಹಿನ್ನೆಲೆಯಲ್ಲಿ ಹಳೆ ಜಿಲ್ಲಾಧಿಕಾರಿ ಕಚೇರಿಗೆ ಹೋಗಲು ಯತ್ನಿಸಿದರು. ಮಹಾರಾಜ ಕಾಲೇಜು ಕ್ಯಾಂಟಿನ್ ಮುಂಭಾಗದಲ್ಲಿ ಪೊಲೀಸ್ ಸಿಬ್ಬಂದಿ ತಡೆದರು. ಮತ್ತೆ ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ಕಾರ್ಯಕರ್ತರು ಬಿಜೆಪಿ ನಾಯಕರ ಭೇಟಿಗೆ ಅವಕಾಶ ನೀಡುವಂತೆ ಪೊಲೀಸರನ್ನು ಒತ್ತಾಯಿಸಿದರು.

ಇದಕ್ಕೂ ಮುನ್ನ ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಸುಳ್ಳು ಆರೋಪ ಮಾಡಿ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರಂತೆ ಜೈಲಿಗೆ ಕಳುಹಿಸುವ ಸಂಚು ಮಾಡಿರುವರೇ ಸಿದ್ದರಾಮಯ್ಯ ಅವರನ್ನು ಜೈಲಿಗೆ ಕಳುಹಿಸುವ ತಾಕತ್ತು ಇದೀಯೇ ಎಂದು ಪ್ರಶ್ನಿಸಿದರು.

ಸಿದ್ದರಾಮಯ್ಯ ಅವರು ಎರಡನೇ ಬಾರಿ ಮುಖ್ಯಮಂತ್ರಿಯಾದದ್ದನ್ನು ಸಹಿಸದ ಬಿಜೆಪಿ ನಾಯಕರು ಆರೋಪ ಮಾಡುತ್ತಿದ್ದಾರೆ. ದಲಿತರ ಹಿತಾಸಕ್ತಿ ಕಾಪಾಡುವ, ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಬದ್ಧರಾಗಿರುವ, ಮುಸ್ಲಿಂ, ರೈತ ಹಿತ ಕಾಯುವ ಸಿದ್ದರಾಮಯ್ಯ ಅವರನ್ನು ಏನು ಮಾಡಲಾಗದು ಎಂದು ಹೇಳಿದರು.

ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್ ಮಾತನಾಡಿ, ಕಾಂಗ್ರೆಸ್ ಧರಣಿ ಬಿಜೆಪಿಯವರಿಗೆ ಎಚ್ಚರಿಕೆಯ ಗಂಟೆ. ಪ್ರತಿಭಟನೆ ಮಾಡಲು ಬಿಜೆಪಿ ನಾಯಕರಿಗೆ ನೈತಿಕತೆ ಇಲ್ಲ. ಇಡೀ ಪಕ್ಷ ಸಿದ್ದರಾಮಯ್ಯ ಅವರ ಜತೆಗಿದೆ ಎಂದು ತಿಳಿಸಿದರು. ವಿಧಾನ ಪರಿಷತ್ ಸದಸ್ಯ ಡಾ.ತಿಮ್ಮಯ್ಯ ಮಾತನಾಡಿ, ಸುಳ್ಳು ಮತ್ತು ಸತ್ಯದ ನಡುವೆ ಹೋರಾಟ ನಡೆಯುತ್ತಿದೆ. ದಕ್ಷ ಪ್ರಾಮಾಣಿಕ ಮುಖ್ಯಮಂತ್ರಿಯಾದ ಸಿದ್ದರಾಮಯ್ಯ ಅವರ ವಿರುದ್ಧ ಸುಳ್ಳು ಆರೋಪ ಮಾಡಿದರೆ ನಾವು ಸಹಿಸುವುದಿಲ್ಲ ಎಂದರು.

ಮುಡಾ ಮಾಜಿ ಅಧ್ಯಕ್ಷ ಎಚ್.ವಿ.ರಾಜೀವ್ ಮಾತನಾಡಿ, ನಾವೆಲ್ಲರೂ ನ್ಯಾಯದ ಪರವಾದ ಹೋರಾಟದಲ್ಲಿ ಭಾಗಿಯಾಗಿದ್ದೇವೆ. ಬಿಜೆಪಿಯವರು ಸತ್ಯಾಂಶವಿಲ್ಲದ ಹುಸಿ ಹೋರಾಟ ಮಾಡುತ್ತಿದ್ದಾರೆ. ಸುಳ್ಳನ್ನು ಸಾವಿರ ಬಾರಿ ಹೇಳಿ ನಿಜ ಮಾಡಲು ಹೊರಟಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

### ಸಿಎಂ ರಾಜೀನಾಮೆ ನೀಡುವವರೆಗೆ ಹೋರಾಟದ ಎಚ್ಚರಿಕೆ

# ಕಾನೂನುಬಾಹಿರವಾಗಿ ಸಿದ್ದರಾಮಯ್ಯ ಕುಟುಂಬ ನಿವೇಶನ ಪಡೆದಿದೆ: ಅಶೋಕ್

**ಮೈಸೂರು:** ಮುಡಾ ನಿವೇಶನ ಹಂಚಿಕೆಯಲ್ಲಿ ನಡೆದಿರುವ ಸಾವಿರಾರು ಕೋಟಿ ಅವ್ಯವಹಾರದ ತನಿಖೆಯನ್ನು ಸಿಬಿಐಗೆ ವಹಿಸಿ, ಸಿದ್ದರಾಮಯ್ಯ ಅವರು ರಾಜೀನಾಮೆ ನೀಡುವವರೆಗೆ ನಮ್ಮ ಹೋರಾಟ ನಿಲ್ಲುವುದಿಲ್ಲ ಎಂದು ವಿಪಕ್ಷ ನಾಯಕ ಆರ್. ಅಶೋಕ್ ತಿಳಿಸಿದರು.



ಮಹಾರಾಜ ಕಾಲೇಜು ಮೈದಾನದ ಬಳಿ ಆಯೋಜಿಸಿದ್ದ ಪ್ರತಿಭಟನಾ ಮೆರವಣಿಗೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಮುಡಾದಲ್ಲಿ ಬ್ರಹ್ಮಾಂಡ ಭ್ರಷ್ಟಾಚಾರವಾಗಿದೆ. ಹಗರಣದಲ್ಲಿ ಸಿದ್ದರಾಮಯ್ಯ ಅವರ ನೇರ ಪಾತ್ರವಿದೆ. ನಿವೇಶನಗಳನ್ನು ಕಾನೂನಾತ್ಮಕವಾಗಿ ಪಡೆದುಕೊಂಡಿದ್ದೇವೆ ಎಂದು ಹೇಳಿ ಜನರ ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ. ಕಾನೂನುಬಾಹಿರವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕುಟುಂಬ ನಿವೇಶನ ಪಡೆದಿರುವುದರಿಂದ ರಾಜೀನಾಮೆ ಕೊಡುವ ತನಕ ಹೋರಾಟ ಮುಂದುವರಿಯಲಿದೆ. ವಾಲ್ಮೀಕಿ ನಿಗಮ, ಮುಡಾ ಹಗರಣವನ್ನು ಸದನದಲ್ಲಿ ಪ್ರಸ್ತಾಪಿಸುತ್ತೇವೆ ಎಂದರು.

ಮುಡಾ ಸ್ವಾಧೀನಪಡಿಸಿಕೊಂಡ ಜಮೀನಿನ ಬದಲಿಗೆ ಪಕ್ಕದಲ್ಲೇ ನಿವೇಶನ ಕೊಡಬೇಕು. ಅಥವಾ ಹೊಸದಾಗಿ ರಚನೆಯಾಗುವ ಬಡಾವಣೆಯಲ್ಲಿ ಕೊಡಬೇಕು. ಆದರೆ, ಈ ಸ್ವಾಧೀನಕ್ಕೂ ಮುನ್ನ ರಚನೆಯಾಗಿರುವ ಬಡಾವಣೆಯಲ್ಲಿ ನೀಡಿರುವುದರಿಂದ ಅಧಿಕಾರ ದುರುಪಯೋಗವಾಗಿದೆ. ಭೂ ಸ್ವಾಧೀನ ಪ್ರಕ್ರಿಯೆ ಸೇರಿದಂತೆ ಪ್ರತಿಯೊಂದು ವ್ಯವಹಾರವೂ ಬೋಗಸ್ ಆಗಿದೆ ಎಂದು ದೂರಿದರು.

ನಾನು ಹಿಂದುಳಿದ ನಾಯಕನಾಗಿರುವುದರಿಂದ ಬಿಜೆಪಿಯವರು ಸಹಿಸುತ್ತಿಲ್ಲ ಎಂಬ ಸಿದ್ದರಾಮಯ್ಯ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಸಿದ್ದರಾಮಯ್ಯ ಅವರು ಈಗ ಜಾತಿ ಅಸ್ತ್ರ ಬಳಸಿ ರಕ್ಷಿಸಿಕೊಳ್ಳಲು ಮುಂದಾಗಿದ್ದಾರೆ. ಕಾಂಗ್ರೆಸ್ ನಲ್ಲಿರುವ ಬಿ.ಕೆ.ಹರಿಪ್ರಸಾದ್ ಅವರೇ ನಾನೊಬ್ಬ ಅತಿ ಹಿಂದುಳಿದ ವರ್ಗಗಳ ನಾಯಕನೆಂದು ಹೇಳಿದ್ದಾರೆ. ಅಲ್ಲದೆ ಬಿಜೆಪಿಯವರು ಬಿಟ್ಟರೂ ನಾನು ಪ್ರಕರಣವನ್ನು ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯುತ್ತೇನೆ ಎಂದು ಹೇಳಿದ್ದಾರೆ. ಹೀಗಾಗಿ ಅವರನ್ನು ತುಳಿಯುವ ಪ್ರಶ್ನೆಯೇ ಬರುವುದಿಲ್ಲ ಎಂದರು.

ಸಂವಿಧಾನದಲ್ಲಿ ಪ್ರತಿಪಕ್ಷಗಳಿಗೆ ಪ್ರತಿಭಟನೆ ಮಾಡುವ ಹಕ್ಕಿದೆ. ಆದರೆ, ಕಾಂಗ್ರೆಸ್ ಸರ್ಕಾರ ಹತ್ತಿಕ್ಕುವ ಕೆಲಸ ಮಾಡುತ್ತಿದೆ. ಇದರಿಂದಾಗಿ ರಾಜ್ಯದಲ್ಲಿ ತುರ್ತು ಪರಿಸ್ಥಿತಿಯ ವಾತಾವರಣ ನಿರ್ಮಾಣವಾಗಿದೆ. ಸಂವಿಧಾನದ ಪುಸ್ತಕ ಹಿಡಿದು ರಾಹುಲ್‌ಗಾಂಧಿ ಪ್ರಮಾಣ ವಚನ ಸ್ವೀಕರಿಸಿದರೆ, ಮತ್ತೊಂದು ಕಡೆ ಕರ್ನಾಟಕದಲ್ಲಿ ಚಳವಳಿ ಹತ್ತಿಕ್ಕುವ ಕೆಲಸ ಮಾಡಿ ಇಬ್ಬಂದಿ ನೀತಿ ಅನುಸರಿಸುತ್ತಿದೆ. ನಮ್ಮ ಅವಧಿ, ಜೆಡಿಎಸ್ ಕಾಂಗ್ರೆಸ್ ಸರ್ಕಾರದಲ್ಲಿ ಯಾರೇ ತಪ್ಪು ಮಾಡಿದ್ದರೂ ಬಂಧಿಸಲಿ ಎಂದರು.

> **ಲೋಕಸಭಾ ಚುನಾವಣೆ ಬಳಿಕ ಕಾಂಗ್ರೆಸ್ ಪಕ್ಷಕ್ಕೆ ನಡುಕ ಶುರುವಾಗಿದೆ. ಸಿದ್ದರಾಮಯ್ಯ ಸರ್ಕಾರದ ವಿರುದ್ಧ ಜನವಿರೋಧದ ಅಲೆ ಶುರುವಾಗಿದೆ. ಕಾನೂನು ಸುವ್ಯವಸ್ಥೆ ಕಾಪಾಡಲು ವಿಫಲವಾಗಿದೆ.**
> । ಮಂಜುಳಾ ಬಿಜೆಪಿ ಮಹಿಳಾ ಮೋರ್ಚಾ ರಾಜ್ಯಾಧ್ಯಕ್ಷೆ

ರಾಜ್ಯದ ಖಜಾನೆ ಖಾಲಿ: ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಮಾತನಾಡಿ, ಮೈಸೂರು ಸಿಎಂ ತವರು ಎಂದು ಪ್ರತಿಷ್ಠೆಯಾಗದೆ ಅಭಿವೃದ್ಧಿ ವಿಚಾರದಲ್ಲಿ ಪ್ರತಿಷ್ಠೆಯಾಗಬೇಕು. ರಾಜ್ಯದಲ್ಲಿ ಖಜಾನೆ ಖಾಲಿಯಾಗಿ ಅಭಿವೃದ್ಧಿ ಕಾರ್ಯಕ್ಕೆ ಹಣವಿಲ್ಲದಂತಾಗಿದೆ. ರಾಜ್ಯದಲ್ಲಿ ರಸ್ತೆಗಳ ಹಳ್ಳ, ಗುಂಡಿ ಮುಚ್ಚಲು ಹಣವಿಲ್ಲ. ಡೆಂಗ್ಯೂ ನಿಯಂತ್ರಿಸಲು ಯಾವುದೇ ಕ್ರಮಕೈಗೊಂಡಿಲ್ಲ. ಗ್ಯಾರಂಟಿ ಯೋಜನೆಗಳಿಗೆ ಹಣ ಇಲ್ಲದೆ ಸಾಲವನ್ನು ದುಪ್ಪಟ್ಟು ಮಾಡುವ ಸನ್ನಿವೇಶ ನಿರ್ಮಾಣವಾಗಿದೆ. ಇದರಿಂದಾಗಿ ಅಭಿವೃದ್ಧಿ ಕೆಲಸ ಕಾರ್ಯಗಳು ಕುಂಠಿತವಾಗಿವೆ ಎಂದ ಅವರು, ಸಿದ್ದರಾಮಯ್ಯ ತಕ್ಷಣವೇ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಮಾಜಿ ಸಂಸದ ಸಿ.ಎಚ್.ವಿಜಯಶಂಕರ್, ಮಾಜಿ ಶಾಸಕರಾದ ಎನ್.ಬಾಲರಾಜ್, ನಿರಂಜನಕುಮಾರ್, ಹರ್ಷವರ್ಧನ್, ರಾಜ್ಯ ಬಿಜೆಪಿ ಹಿಂದುಳಿದ ವರ್ಗಗಳ ಮೋರ್ಚಾ ಅಧ್ಯಕ್ಷ ಆರ್.ರಘು ಕೌಟಿಲ್ಯ, ಬಿಜೆಪಿ ಗ್ರಾಮಾಂತರ ಅಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ಮುಖಂಡರಾದ ಎಂ.ಜಿ.ಮಹೇಶ್, ಮಂಗಳಾ ಸೋಮಶೇಖರ್ ಸೇರಿದಂತೆ ಹಲವರು ಭಾಗವಹಿಸಿದ್ದರು.

> **ಮುಡಾ ಹಗರಣ ರಾಜ್ಯದ ಗಮನ ಸೆಳೆದಿದೆ. ನನಗೆ ಬಂದಿದ್ದ ಅನಾಮಧೇಯ ಪತ್ರ ಗಮನಿಸಿ ವಿಚಾರಣೆ ಮಾಡಿದಾಗ 65 ನಿವೇಶನಗಳನ್ನು ಒಬ್ಬರಿಗೆ ಬರೆದು ಕೊಡಲಾಗಿದೆ. ಪರಿಹಾರ ಕೊಟ್ಟಿಲ್ಲವೆಂದು ಹೇಳಿ ನಿವೇಶನ ಕೊಟ್ಟಿರುವುದು ದೊಡ್ಡ ಹಗರಣವಾಗಿದೆ. ರಾಜ್ಯದ ಮುಖ್ಯ ಕಾರ್ಯದರ್ಶಿ, ರಾಜ್ಯಪಾಲರು, ಮುಖ್ಯ ನ್ಯಾಯಮೂರ್ತಿ ಅವರಿಗೆ ದೂರು ನೀಡಲಾಗಿದೆ. ಪ್ರತಿಭಟನೆ ಸಾರ್ವಜನಿಕರ ಹಕ್ಕಾದರೂ ಸರ್ಕಾರ ನಿರ್ಬಂಧ ಹೇರಿದ್ದು, ಸರ್ವಾಧಿಕಾರಿಯ ಮತ್ತೊಂದು ಮುಖವಾಡ ಪ್ರದರ್ಶಿಸುತ್ತಿದೆ.**
> । ಟಿ.ಎಸ್.ಶ್ರೀವತ್ಸ ಶಾಸಕ

> **ರಾಜ್ಯದ ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ ಅವರು ಕಳ್ಳಕಾರರ ಪರ ಇದ್ದಾರೆ. ಚೇಲಾ, ಪುಡಾರಿಗಳಿಗೆ ನಿವೇಶನ ಹಂಚಿಕೆ ಮಾಡಲಾಗಿದೆ. ಮುಡಾದಲ್ಲಿ ಸಾವಿರಾರು ಕೋಟಿ ಅವ್ಯವಹಾರವಾಗಿದ್ದರೂ, ಸೂಕ್ತ ತನಿಖೆ ನಡೆಸದೆ ಸುಮ್ಮನಿದ್ದಾರೆ. ಸಿದ್ದರಾಮಯ್ಯ ಅವರಿಗೆ ನೈತಿಕತೆ ಇದ್ದರೆ ಪ್ರಕರಣವನ್ನು ಸಿಬಿಐಗೆ ವಹಿಸಲಿ.**
> । ಎಲ್.ನಾಗೇಂದ್ರ, ಬಿಜೆಪಿ ನಗರಾಧ್ಯಕ್ಷ

> **ದಲಿತರ ಜಮೀನನ್ನು ಕಸಿದುಕೊಂಡಿರುವ ಸಿದ್ದರಾಮಯ್ಯ ಸಂವಿಧಾನ, ಪ್ರಜಾಪ್ರಭುತ್ವ ವಿರೋಧಿ. ನಮ್ಮ ಹೋರಾಟ ಹತ್ತಿಕ್ಕಿ, ಮುಖಂಡರು, ಕಾರ್ಯಕರ್ತರನ್ನು ಬಂಧಿಸಿರುವುದು ಕಾನೂನುಬಾಹಿರ. ದಲಿತರ ಬಗ್ಗೆ ಮಾತನಾಡುವ ನೈತಿಕತೆ ಇಲ್ಲ. ಮುಡಾ ಲೂಟಿ ಮಾಡಿದ ಮೇಲೆ ಈಗ ಸ್ವಚ್ಛ ಮಾಡುವ ಮಾತನ್ನಾಡಿರುವುದು ನಾಚಿಕೆಗೇಡಿನ ಸಂಗತಿ.**
> । ಎನ್.ಮಹೇಶ್ ಮಾಜಿ ಸಚಿವ

## ಕ್ವಾರಿಯಲ್ಲಿ ಕಾರ್ಮಿಕನ ಮೃತದೇಹ ಪತ್ತೆ

**ಚಾಮರಾಜನಗರ:** ಜಿಲ್ಲೆಯ ಗುಂಡ್ಲುಪೇಟೆ ತಾಲ್ಲೂಕಿನ ತೆರಕಣಾಂಬಿ ಸಮೀಪದ ಕರಿಕಲ್ಲು ಕ್ವಾರಿಯಲ್ಲಿ ಕಾರ್ಮಿಕನ ಮೃತದೇಹ ಪತ್ತೆಯಾಗಿದೆ.

ಚಾಮರಾಜನಗರ ತಾಲ್ಲೂಕಿನ ಕುರುಬರಹುಂಡಿ ಗ್ರಾಮದ ರಘು (36) ಮೃತ ವ್ಯಕ್ತಿ.

ಮೃತ ವ್ಯಕ್ತಿ ನಂದಿನಿ ಸ್ಟೋನ್ ಇಂನೆಕ್ಸ್ ಎಂಬ ಹೆಸರಿನ ಯತೀಂದ್ರಕುಮಾರ್ ಜೋಷಿ ಮಾಲೀಕತ್ವದ ಕರಿಕಲ್ಲು ಕ್ವಾರಿಯಲ್ಲಿ ಡ್ರಿಲ್ಲಿಂಗ್ ಕೆಲಸ ಮಾಡಿಕೊಂಡಿದ್ದರು.

ಘಟನಾ ಸ್ಥಳಕ್ಕೆ ಸರ್ಕಲ್ ಇನ್‌ಸ್ಪೆಕ್ಟರ್ ವನರಾಜು, ಪಿಎಸ್‌ಐ ಈಶ್ವರ್, ಬೆರಳಚ್ಚು ಮತ್ತು ವಿಧಿ ವಿಜ್ಞಾನ ತಜ್ಞರು ಭೇಟಿನೀ ಡಿ ಪರಿಶೀಲಿಸಿದ್ದಾರೆ.

ಕಲ್ಲುಬಂಡೆ ಮೇಲೆ ಬಿದ್ದಿದ್ದ ಮೃತ ದೇಹವನ್ನು ಹಿಟಾಚಿಯಿಂದ ಕೆಳಗಿಳಿಸಿ ಚಾಮರಾಜನಗರ ಜಿಲ್ಲಾ ಆಸ್ಪತ್ರೆಗೆ ರವಾನಿಸಲಾಗಿದೆ. ತೆರಕಣಾಂಬಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

**ಆತ್ಮಹತ್ಯೆ ಶಂಕೆ:** ಮದುವೆಯಾಗದೆ ಮನನೊಂದಿದ್ದ ಪುತ್ರ ಮನಸ್ಸಿಗೆ ಬೇಸರ ಮಾಡಿಕೊಂಡು ಬುಧವಾರ ಕರೆ ಮಾಡಿ ಅಳಲು ತೋಡಿಕೊಂಡಿದ್ದ. ಬಳಿಕ ಮೊಬೈಲ್ ಸ್ವಿಚ್ ಆಫ್ ಆಗಿತ್ತು. ಗ್ರಾಮಸ್ಥರೊಬ್ಬರು ಫೋನ್ ಮಾಡಿ ಮಗ ಕರಿಕಲ್ಲು ಕ್ವಾರಿಯಲ್ಲಿ ಮೃತಪಟ್ಟಿರುವ ವಿಚಾರ ತಿಳಿಸಿದರು. ಅವಿವಾಹಿತನಾಗಿದ ಕಾರಣಜೀವನದಲ್ಲಿ ಜುಗುಪ್ಸೆಗೊಂಡು ಆತ್ಮಹತ್ಯೆ ಮಾಡಿಕೊಂಡಿರಬಹುದು ಎಂದು ತಾಯಿ ಲಕ್ಷ್ಮಮ್ಮ ದೂರಿನಲ್ಲಿ ತಿಳಿಸಿದ್ದಾರೆ.

## ಬಟ್ಟೆ ಒಗೆಯುವ ವಿಚಾರದ ಗಲಾಟೆ: 3 ವರ್ಷ ಶಿಕ್ಷೆ

**ತಿಪಟೂರು:** ಬಟ್ಟೆ ಒಗೆಯುವ ವಿಚಾರಕ್ಕೆ ಗಲಾಟೆ ಮಾಡಿಕೊಂಡಿರುವ ಆರೋಪಿಗಳಾದ ಚಿಕ್ಕನಾಯಕನಹಳ್ಳಿ ಶೆಟ್ಟಿಕೆರೆ ಹೋಬಳಿಯ ಅಜ್ಜೇನಹಳ್ಳಿ ಗ್ರಾಮದ ಭಾಗ್ಯಮ್ಮ, ಅಶೋಕ, ಲಿಂಗರಾಜು, ಜಗದೀಶ್, ದ್ರಾಕ್ಷಾಯಿಣಿ, ಶಾರದಮ್ಮ, ಶಿವಣ್ಣ, ಕುಮಾರ್ ಮತ್ತು ಸಿದ್ದೇಶ್ ಇವರಿಗೆ ತಿಪಟೂರಿನ ಐದನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ಶ್ರೀಮತಿ ಪುಷ್ಪಾವತಿ ಆರೋಪ ಸಾಬೀತಾದ ಕಾರಣ ಭಾರತ ದಂಡ ಸಮಿತಿ ಪ್ರಕಾರ 143, 147, 148, 451, 427, 324ರ ಅಪರಾಧಗಳಿಗಾಗಿ 326 ಕ್ಕೆ 3 ವರ್ಗಳ ಶಿಕ್ಷೆ ಮತ್ತು ಎರಡು ಲಕ್ಷದ ಐವತ್ತು ಸಾವಿರ ರೂಪಾಯಿಗಳನ್ನು ದಂಡ ವಿಧಿಸಿದ್ದು ದೂರುದಾರರಾದ ನಾಗರಾಜ್ ಮತ್ತು ಪತ್ನಿ ಗಂಗಮ್ಮನವರಿಗೆ 2,30,000-00 ರೂಪಾಯಿಗಳನ್ನು ನೀಡುವಂತೆ ಉಳಿದ 20,000-00 ರೂಪಾಯಿಗಳನ್ನು ಸರ್ಕಾರಕ್ಕೆ ಪಾವತಿ ಮಾಡುವಂತೆ ಶಿಕ್ಷೆ ಮತ್ತು ದಂಡ ವಿಧಿಸಿ ತೀರ್ಪು ನೀಡುತ್ತಾರೆ. ಈ ಪ್ರಕರಣದಲ್ಲಿ ಸರ್ಕಾರದ ಪರವಾಗಿ ಮಹದೇವಪ್ಪ ಈರಪ್ಪ ಗಡದ್ ಹಾಗೂ ಬಿಕೆ ನಾಗರತ್ನಮ್ಮ ಸರ್ಕಾರಿ ಅಭಿಯೋಜಕರಾಗಿ ಪ್ರಕರಣವನ್ನು ವಾದ ಮಂಡನೆ ಮಾಡಿರುತ್ತಾರೆ.

## ಅಪರ್ಣಾ ನಿಧನಕ್ಕೆ ಭಾವಪೂರ್ಣ ಶ್ರದ್ಧಾಂಜಲಿ

**ಚಾಮರಾಜನಗರ:** ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ಕಿರುತರೆ ನಟಿ ಹಾಗೂ ಶ್ರೇಷ್ಠ ನಿರೂಪಕಿ ಶ್ರೀಮತಿ ಅಪರ್ಣಾ ರವರ ನಿಧನಕ್ಕೆ ಭಾವಪೂರ್ಣ ಶ್ರದ್ಧಾಂಜಲಿಯನ್ನು ಅರ್ಪಿಸಲಾಯಿತು.

ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರು ಹಾಗೂ ಸಂಸ್ಕೃತಿ ಚಿಂತಕರಾದ ಸುರೇಶ್ ಎನ್ ಋಗ್ವೇದಿ ಮಾತನಾಡಿ ಸಿನಿಮಾ ಹಾಗೂ ದೂರದರ್ಶನದ ಕಲಾವಿದೆಯಾಗಿ ,ಕನ್ನಡ ನಾಡಿನ ಶ್ರೇಷ್ಠ ನಿರೂಪಕಿಯಾಗಿ, ಕನ್ನಡ ಭಾಷೆ ,ಸಂಸ್ಕೃತಿ, ಪರಂಪರೆಯನ್ನು ಹಾಗೂ ಕನ್ನಡದ ಅಭಿಮಾನವನ್ನು ತಮ್ಮ ವಾಗ್ಚರ್ರಿಯ ಮೂಲಕ ವಿಶ್ವ ಪ್ರಸಿದ್ಧಗೊಳಿಸಿ ಕನ್ನಡಿಗರ ಮನೆಮಾತಾಗಿದ್ದ ಅಪರ್ಣ ರವರ ನಿಧನ ನಿರೂಪಣಾ ಕ್ಷೇತ್ರಕ್ಕೆ ಅಪಾರ ನಷ್ಟ ಉಂಟಾಗಿದೆ. ನಿರೂಪಣೆಯ ಮೂಲಕ ಕನ್ನಡಿಗರ ಹೃದಯ ಗೆದ್ದ ಅಪರ್ಣಾ ರವರು ಜನರ ಮನಸ್ಸಿನಲ್ಲಿ ಸದಾ ಕಾಲ ಶಾಶ್ವತ ಸ್ಥಾನ ಪಡೆದಿದ್ದಾರೆ . ಧಾರ್ಮಿಕ ಸ್ಥಳಗಳ ಹಾಗು ಪವಿತ್ರ ಸ್ಥಳಗಳ ವಿವರಣೆ ಅವರ ವಿಶೇಷವಾಗಿತ್ತು ಎಂದು ತಿಳಿಸಿದರು.

ನಿವೃತ್ತ ಶಿಕ್ಷಕಿ ಸರಸ್ವತಿ ಮಾತನಾಡಿ ಅಪರ್ಣಾರವರು ಕಾರ್ಯಕ್ರಮದ ನಿರೂಪಣೆಯ ಮೂಲಕ ವೀಕ್ಷಕರ ಸಂಖ್ಯೆಯನ್ನು ಹೆಚ್ಚಿಸಿದವರು. ಅವರಲ್ಲಿದ್ದ ಕನ್ನಡ ಭಾಷೆಯ ಪ್ರೌಢಿಮೆ ಹಾಗೂ ಭಾಷೆಯ ಸ್ಥಾನ ನೂರಾರು ಜನರಿಗೆ ಸ್ಫೂರ್ತಿಯನ್ನು ತುಂಬಿತ್ತು ಎಂದರು.



ಕನ್ನಡ ಸಾಹಿತ್ಯ ಪರಿಷತ್ತಿನ ನಿರ್ದೇಶಕರಾದ ಶಿವಲಿಂಗ ಮೂರ್ತಿ ಮಾತನಾಡಿ ಅಪರ್ಣಾ ರವರು ಕನ್ನಡದ ಬಹು ದೊಡ್ಡ ಪ್ರತಿಭೆ. ಕನ್ನಡ ನಾಡಿನ ಸಾವಿರಾರು ಕಾರ್ಯಕ್ರಮಗಳ ರೂವಾರಿಯಾಗಿದ್ದವರು ಎಂದರು.

ರವಿಚಂದ್ರ ಪ್ರಸಾದ್, ಬಿಕೆ ಆರಾಧ್ಯ, ಚಂದ್ರು, ಉಪಸ್ಥಿತರಿದ್ದರು.

## ಮೌಲ್ಯಮಾಪನ ತಪಾಸಣಾ ಶಿಬಿರ

**ಕೋಲಾರ:** ಅಲಿಂಕೋ ಸಂಸ್ಥೆಯ ವತಿಯಿಂದ ಜಿಲ್ಲೆಯಲ್ಲಿ ಮೌಲ್ಯಮಾಪನ ಶಿಬಿರಗಳನ್ನು ಆಯೋಜಿಸಲು ಜುಲೈ 15 ರಂದು ಮಾಲೂರು ತಾಲ್ಲೂಕು ಆಸ್ಪತ್ರೆಯ ದೂ. ಸಂ. 8904317589, ಜುಲೈ 16 ರಂದು ಬಂಗಾರಪೇಟೆ ತಾಲ್ಲೂಕು ಆಸ್ಪತ್ರೆಯ ದೂ. ಸಂ. 87119246638, ಜುಲೈ 18 ರಂದು ಮುಳಬಾಗಿಲು ತಾಲ್ಲೂಕು ಆಸ್ಪತ್ರೆಯ ದೂ. ಸಂ. 8095024543, ಜುಲೈ 19 ರಂದು ಕೆ.ಜಿ.ಎಫ್ ತಾಲ್ಲೂಕು ಆಸ್ಪತ್ರೆಯ ದೂ. ಸಂ. 8711924638, ಜುಲೈ 20 ರಂದು ಕೋಲಾರ ತಾಲ್ಲೂಕು ಆಸ್ಪತ್ರೆಯ ದೂ.ಸಂ. 9986579688 ಹಾಗೂ ಜುಲೈ 22 ರಂದು ಶ್ರೀನಿವಾಸಪುರ ತಾಲ್ಲೂಕು ಆಸ್ಪತ್ರೆಯ ದೂ.ಸಂ. 7829126938. ಈ ಸ್ಥಳಗಳಲ್ಲಿ ನಿಗದಿಪಡಿಸಿದ ದಿನಾಂಕಗಳಂದು ತೀರ್ಮಾನಿಸಲಾಗಿರುತ್ತದೆ.

ಕೋಲಾರ ಜಿಲ್ಲಾ ವ್ಯಾಪ್ತಿಯಲ್ಲಿರುವ ವಿಕಲಚೇತನರು ತರಬೇಕಾದ ದಾಖಲಾತಿಗಳು ಯುಡಿಐಡಿ ಕಾರ್ಡ್ 40%, ಆದಾರ್ ಕಾರ್ಡ್, ಆದಾಯ ಪ್ರಮಾಣ ಪತ್ರ ಅಥವಾ ಬಿಪಿಎಲ್ ಕಾರ್ಡ್, ಪಾಸ್ ಪೋರ್ಟ್ ಸೈಜ್ ಕಲರ್ ಪೋಟೋ ಹಾಗೂ 60 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರ ದಾಖಲಾತಿಗಳು ಆದಾರ್ ಕಾರ್ಡ್ ಅಥವಾ ಹಿರಿಯ ನಾಗರಿಕರ ಗುರಿತಿನ ಚೀಟಿ, ಆದಾಯ ಪ್ರಮಾಣ ಪತ್ರ ಅಥವಾ ಬಿಪಿಎಲ್ ಕಾರ್ಡ್, ಪಾಸ್ ಪೋರ್ಟ್ ಸೈಜ್ ಕಲರ್ ಪೋಟೋ ಈ ದಾಖಲಾತಿಗಳನ್ನು ಯೋಜನೆಗಳ ಸೌಲಭ್ಯ ಪಡೆಯಬಹುದು. ಮಾಹಿತಿಗಾಗಿ ದೂ.ಸಂ. 08152-200010 ಯನ್ನು ಸಂಪರ್ಕಿಸಬಹುದೆಂದು ಜಿಲ್ಲಾ ಕಛೇರಿಯ ವಿಕಲಚೇತನರು ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಿಎಲ್‌ಡಿ ಬ್ಯಾಂಕ್: ಹೆಚ್.ಸಿ. ಶಿವಲಿಂಗೇಗೌಡ 2ನೇ ಬಾರಿಗೆ ಅಧ್ಯಕ್ಷರಾಗಿ ಅವಿರೋಧ ಆಯ್ಕೆ

**ಮಂಡ್ಯ:** ತಾಲ್ಲೂಕು ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ಗೆ ಹೆಚ್.ಸಿ. ಶಿವಲಿಂಗೇಗೌಡ 2 ನೇ ಭಾರಿಗೆ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದರು. ಹಿಂದಿನ ಅಧ್ಯಕ್ಷರಾದ ಸುನಂದಮ್ಮ ಸಿದ್ದರಾಮು ಅವರ ರಾಜೀನಾಮೆಯಿಂದ ತೆರವಾದ ಸ್ಥಾನಕ್ಕೆ ಶುಕ್ರವಾರ ಚುನಾವಣೆ ನಡೆಯಿತು. ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಹೆಚ್.ಸಿ.ಶಿವಲಿಂಗೇಗೌಡ ಹೊರತುಪಡಿಸಿ ಬೇರೆ ಯಾರು ನಾಮಪತ್ರ ಸಲ್ಲಿಸದ ಕಾರಣ ಚುನಾವಣೆ ಅಧಿಕಾರಿಯಾದ ಸಹಕಾರ ಇಲಾಖೆಯ ಮಾರಾಟ ಅಧಿಕಾರಿ ಸುಧಾಕರ್ ಅವರು ಶಿವಲಿಂಗೇಗೌಡ ಅವರ ಅವಿರೋಧ ಆಯ್ಕೆಯನ್ನು ಘೋಷಿಸಿದರು. 2 ನೇ ಭಾರಿಗೆ ಪಿಎಲ್ ಡಿ ಬ್ಯಾಂಕಿಗೆ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಹೆಚ್.ಸಿ.ಶಿವಲಿಂಗೇಗೌಡ ಅವರು ಮಾತನಾಡಿ ಪಿಎಲ್ ಡಿ ಬ್ಯಾಂಕಿನ ಉಳಿದ ಅವಧಿಗೆ ಬ್ಯಾಂಕಿನ ಆಡಳಿತ ಮಂಡಳಿಯ ಎಲ್ಲಾ 16 ಮಂದಿ ನಿರ್ದೇಶಕರು ಜೊತೆಗೂಡಿ ನನ್ನನ್ನು ಅಧ್ಯಕ್ಷರಾಗಿ ಆಯ್ಕೆ ಮಾಡಿದ್ದಾರೆ. ಅಧ್ಯಕ್ಷರಾಗಿ ಆಯ್ಕೆಯಾಗಲು ಪ್ರತ್ಯಕ್ಷವಾಗಿ ಹಾಗೂ ಪರೋಕ್ಷವಾಗಿ ಸಹಕರಿಸಿದ ಎಲ್ಲರಿಗೂ ಅಭಿನಂದನೆ ಸಲ್ಲಿಸುತ್ತೇನೆ ಎಂದರು. ಬ್ಯಾಂಕಿನ ಅಭಿವೃದ್ಧಿಗೆ ಎಲ್ಲಾ ನಿರ್ದೇಶಕರ ಜೊತೆಗೂಡಿ ಮಂಡ್ಯದ ಸ್ಥಳಿಯ ಶಾಸಕರಾದ ಪಿ. ರವಿಕುಮಾರ್ ಅವರ ಜೊತೆ ಚರ್ಚೆ ಮಾಡಿ ಬ್ಯಾಂಕಿನಲ್ಲಿ 'ರೈತರ ಭವನ' ಕಟ್ಟಡ



ನಿರ್ಮಾಣ ಮಾಡಲು ಬದ್ದನಾಗಿದ್ದೇನೆ ಎಂದು ಹೇಳಿದರು.

ಪಿಎಲ್‌ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಬೇಲೂರು ಸೋಮಶೇಖರ್ ಮಾತನಾಡಿ ಪಿಎಲ್‌ಡಿ ಬ್ಯಾಂಕ್ ನ ಉಳಿದ ಅವಧಿಗೆ ನಡೆದ ಚುನಾವಣೆಯಲ್ಲಿ ಹೆಚ್ .ಸಿ. ಶಿವಲಿಂಗೇಗೌಡ ಅವರನ್ನು ಎಲ್ಲಾ ನಿರ್ದೇಶಕರ ಸಹಕಾರದಿಂದ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆ ಮಾಡಲಾಗಿದ್ದು,ಎಲ್ಲಾ ನಿರ್ದೇಶಕರು ಒಗ್ಗಟ್ಟಿನಿಂದ ಸಹಕರಿಸಿದ್ದಾರೆ ಎಂದು ಹೇಳಿದರು. ಶಿವಲಿಂಗೇಗೌಡ ಅವರು ಈಗಾಗಲೇ ಒಂದು ಬಾರಿ ಬ್ಯಾಂಕಿನ ಅಧ್ಯಕ್ಷರಾಗಿ ಕೆಲಸ ಮಾಡಿದ್ದು ಮುಂದಿನ ದಿನಗಳಲ್ಲೂ ಅವರಿಂದ ಬ್ಯಾಂಕಿನ ಅಭಿವೃದ್ಧಿಗೆ ನಿರೀಕ್ಷೆ ಇಟ್ಟುಕೊಳ್ಳ ಲಾಗಿದೆ ಎಂದು ಹೇಳಿದರು. ಬ್ಯಾಂಕಿನ ಅಭಿವೃದ್ಧಿಗೆ ಸ್ಥಳೀಯ ಶಾಸಕರ ಮನವೊಲಿಸಿ ಅನುದಾನ ತಂದು ಇನ್ನಷ್ಟು ಕಟ್ಟಡ ಕಾಮಗಾರಿ ಮಾಡಲಿ ಎಂದು ಆಶಿಸಿದರು. ಈ ಸಂದರ್ಭದಲ್ಲಿ ಬ್ಯಾಂಕಿನ ಉಪಾಧ್ಯಕ್ಷ ಎಂ.ಪ್ರಕಾಶ, ನಿರ್ದೇಶಕರಾದ ಸಿ.ಎ.ಅರವಿಂದ್,ಟಿ.ಬಿ. ಶಿವಲಿಂಗೇಗೌಡ, ಬಿ.ಎಲ್. ಬೋರೇಗೌಡ,ಸುನಂದಮ್ಮ ಸಿದ್ದರಾಮು, ಮರೀಗೌಡ, ಎಂ.ಯೋಗೇಶ್, ಬಿ.ಕೆ.ರಾಮೇಗೌಡ, ಚಿಕ್ಕಬೆಟ್ಟಯ್ಯ, ಸವಿತ ಶಂಕರ್, ಸರಸ್ವತಿ ಶೇಖರ್, ನಂಜುಂಡ, ಕೃಷ್ಣೇಗೌಡ ಎಂ.ಸಿ.,ಶೇಖರ್.ಎ., ಬ್ಯಾಂಕಿನ ವ್ಯವಸ್ಥಾಪಕರಾದ ಡಿ.ನಾಗವೇಣಿ ಮತ್ತಿತರರು ನೂತನ ಅಧ್ಯಕ್ಷರನ್ನು ಅಭಿನಂದಿಸಿದರು.

# ಬೆಂಗ್ಳೂರಿನಲ್ಲಿ ತಾಯಿ-ಮಗ ಸಾವು; ಪತಿಯ ಅಗಲಿಕೆ ನೋವಿನಿಂದ ಪತ್ನಿ ಆತ್ಮಹತ್ಯೆ!

**ಬೆಂಗಳೂರು:** ಸುಂದರ ಸುಖ ಸಂಸಾರಕ್ಕೆ ಅದ್ಯಾರ ಕಣ್ಣು ಬಿತ್ತೊ ಏನೊ, ಕೈ ತುಂಬ ದುಡಿಯುತ್ತಿದ್ದ ಕುಟುಂಬ. ಚೆಂದದ ಮಕ್ಕಳು, ಎಲ್ಲವೂ ಚೆನ್ನಾಗಿಯೇ ಇತ್ತು ಎನ್ನುವಾಗ.. ಮನೆಯ ಯಜಮಾನನ ಹಠಾತ್ ಸಾವು, ಹೆಂಡ್ತಿ ಮಗನನ್ನ ಖಿನ್ನತೆಗೆ ತಳ್ಳಿ ಸಾವಿನ ಲೋಕಕ್ಕೆ ಕೊಂಡಿಯ್ದಿದೆ.

ಗಂಡ-ಹೆಂಡತಿ, ಇಬ್ಬರು ಮಕ್ಕಳು, ಚಿಕ್ಕದಾದ ಚೊಕ್ಕ ಸಂಸಾರ. ಕೋಲಾರ ಮೂಲದ ರಮ್ಯಾ ಹಾಗೂ ಆಂಧ್ರ ಪ್ರದೇಶದ ಪುಲಿವರ್ತಿ ಗ್ರಾಮದ ಶ್ರೀಧರ್, ವಿವಾಹವಾಗಿ ಹಲವು ವರ್ಷಗಳಿಂದ ಬೆಂಗಳೂರಿನ ಯಲಹಂಕದಲ್ಲಿ ವಾಸವಾಗಿದ್ರು. ಇವರಿಗೆ ಇಬ್ಬರು ಮುದ್ದಾದ ಮಕ್ಕಳಿದ್ದರು, ಒಳ್ಳೆಯ ವಿದ್ಯಾಭ್ಯಾಸ ಸಹ ಮಾಡುತ್ತಿದ್ದರು. ಪತಿ ಶ್ರೀಧರ್ ಸಾಫ್ಟ್‌ವೇರ್ ಇಂಜಿನಿಯರ್ ಆಗಿ ಕೈತುಂಬ ಸಂಬಳ ಬರ್ತಾ ಇತ್ತು. ಎಲ್ಲವು ಚೆನ್ನಾಗಿಯೇ ಇತ್ತು ಎನ್ನುವಾಗ ವಿಧಿ ಅನ್ನೋದು ಇವರ ಕುಟುಂಬಕ್ಕೆ ಬಹುದೊಡ್ಡ ಆಘಾತವನ್ನೇ ತಂದೊಡ್ಡಿದೆ.

ಕಳೆದ ಮೂರು ತಿಂಗಳ ಹಿಂದೆ ಕ್ಯಾನ್ಸರ್ ನಿಂದ ಬಳಲುತ್ತಿದ್ದ ಶ್ರೀಧರ್, ಖಾಸಗಿ ಆಸ್ಪತ್ರೆಯಲ್ಲಿ ಮೃತಪಟ್ಟಿದ್ದರು. ಗಂಡನ ಅಕಾಲಿಕ ಮರಣದಿಂದ ಪತ್ನಿ ರಮ್ಯಾಗೆ ಜೀವನ ನಿರ್ವಹಣೆ ಮಾಡೋದು ಸಂಕಷ್ಟದ ಹಂತ ತಲುಪಿತ್ತು. ಕುಟುಂಬಕ್ಕೆ ವರಮಾನವಿಲ್ಲದೇ ಮಕ್ಕಳ ವಿದ್ಯಾಭ್ಯಾಸಕ್ಕೂ ಕೊಡಲಿಪೆಟ್ಟು ಬಿದ್ದಿತ್ತು. ಮಗಳ ಕೋರ್ಸನ್ನು ಕೂಡ ಬದಲಾವಣೆ ಮಾಡಿದ್ದರು. ಆದ್ರೆ ಪತಿಯಿಲ್ಲದೇ ರಮ್ಯಾ ಕೊರಗ್ತಾ ಇದ್ರೆ ವಿದ್ಯಾಭ್ಯಾಸ ಹಾಗು ಮನೆಯ ಸಂಕಷ್ಟ ಕಂಡ ಮಗ ಭಾರ್ಗವ್ ಕೂಡ ಬಹಳಷ್ಟು ನೊಂದಿದ್ದ.

ಹೀಗೆ ನೊಂದುಕೊಂಡೆ ಜೀವನ ಮಾಡ್ತಾ ಇದ್ದ ಕುಟುಂಬ ಕೊನೆಗೆ ಕಟು ನಿರ್ಧಾರಕ್ಕೆ ಬಂದುಬಿಟ್ಟಿತ್ತು. ತಾವು ವಾಸಮಾಡಿಕೊಂಡಿದ್ದ ಯಲಹಂಕ ಗ್ಯಾಲರಿಯ ಅಪಾರ್ಟ್ ಮೆಂಟ್ ನಲ್ಲಿ ಮಗ ಭಾರ್ಗವ್ ಜೊತೆ ತಾಯಿ ರಮ್ಯಾ ಆತ್ಮಹತ್ಯೆ ಶರಣಾಗಿದ್ರು. ಇನ್ನು ಡೆತ್‌ನೋಟ್ ಬರೆದಿಟ್ಟು ಆತ್ಮಹತ್ಯೆ ಮಾಡಿಕೊಂಡಿದ್ದು, ನಿನ್ನೆ ದಿನ ಮಗಳು ಪಿಜಿಯಿಂದ ಮನೆಗೆ ಬಂದು ನೋಡಿದಾಗ ಘಟನೆ ಬೆಳಕಿಗೆ ಬಂದಿದೆ.

ಬೆಂಗಳೂರಿನ ಯಲಹಂಕದ ಆರ್ ಎನ್‌ಜೆಡ್ ಅಪಾರ್ಟ್‌ಮೆಂಟ್‌ನಲ್ಲಿ ಘಟನೆ ನಡೆದಿದೆ. ಮಗ ಭಾರ್ಗವ್ ಪುಲಿವರ್ತಿ (13), ತಾಯಿ ರಮ್ಯಾ ಜಿ. (40) ಆತ್ಮಹತ್ಯೆ ಮಾಡಿಕೊಂಡ ದುರ್ದೈವಿಗಳು. ಮೊದಲಿಗೆ 13 ವರ್ಷದ ಮಗ ಆತ್ಮಹತ್ಯೆಗೆ ಶರಣಾಗಿದ್ದಾನೆ. ಮಗನ ಸಾವಿನ ಸುದ್ದಿ ಕೇಳಿ ತಾಯಿಯೂ ಆತ್ಮಹತ್ಯೆಗೆ ಶರಣಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಆತ್ಮಹತ್ಯೆ ಮಾಡಿಕೊಂಡ ನಾಲ್ಕು ದಿನಗಳ ಬಳಿಕ ಪ್ರಕರಣ ಬೆಳಕಿಗೆ ಬಂದಿದೆ. ಸದ್ಯ ಯಲಹಂಕ ಪೊಲೀಸರು ಸ್ಥಳಕ್ಕೆ ಭೇಟಿ ಕೊಟ್ಟು ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

**ಡಿಸಿಪಿ ಹೇಳಿದ್ದೇನು?:** ಪ್ರಕರಣದ ಕುರಿತು ಪ್ರತಿಕ್ರಿಯೆ ನೀಡಿರುವ ಈಶಾನ್ಯ ವಿಭಾಗ ಡಿಸಿಪಿ ವಿ.ಜೆ ಸಜೀತ್, ಯಲಹಂಕದ ಆರ್ ಎನ್‌ಜೆಡ್ ಅಪಾರ್ಟ್ಮೆಂಟ್‌ನಲ್ಲಿ ತಾಯಿ, ಮಗ ಆತ್ಮಹತ್ಯೆ ಮಾಡಿಕೊಂಡಿದ್ದು, ಮೃತದೇಹಗಳು ಪತ್ತೆಯಾಗಿವೆ. ನಿನ್ನೆ ಮೃತದೇಹ ಸಿಕ್ಕ ಬಳಿಕ ಯಲಹಂಕ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಮಾಡಿದ್ದಾರೆ. ರಮ್ಯಾ ಅವರ ಪತಿ ಶ್ರೀಧರ್ ಪುಲಿವರ್ತ 3 ತಿಂಗಳ ಹಿಂದೆ ಅನಾರೋಗ್ಯದಿಂದ ಸಾವನ್ನಪ್ಪಿದ್ದಾರೆ. ಪತಿ ಸಾವಿನಿಂದ ಖಿನ್ನತೆಗೆ ಒಳಗಾಗಿದ್ದ ರಮ್ಯಾ ತಾವೂ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

# ಸಂಜೆ ಟಿಪ್ಸ್




## ಮಹೀಂದ್ರಾ ಸಂಪೂರ್ಣ ಶ್ರೇಣಿಯ ಟ್ರಕ್ ಗಳಿಗೆ ಮೈಲೇಜ್ ಗ್ಯಾರಂಟಿ ಬಿಡುಗಡೆ

ಮಹೀಂದ್ರಾ ಗ್ರೂಪ್ ನ ಭಾಗವಾಗಿರುವ ಮಹೀಂದ್ರಾ ಟ್ರಕ್ ಮತ್ತು ಬಸ್ ವಿಭಾಗ, ತಮ್ಮ ಸಂಪೂರ್ಣ ಬಿಎಸ್ 6 ಒಬಿಡಿ (BS6 OBD) IIಶ್ರೇಣಿಯ ಬಿಎಲ್ಎ ಝಡ್ ಒ ಎಕ್ಸ್, ಫ್ಯೂರಿಯೋ, ಅಪ್ಟಿಮೊ ಮತ್ತು ಜಾಯೋ ಶ್ರೇಣಿಗಳಿಗೆ ಹೆಚ್ ಸಿ ವಿ, ಐಸಿವಿ, ಮತ್ತು ಎಲ್ ಸಿ ವಿಟ್ರಕ್‌ಗಳು ಅಡ್ಡಿಪಡಿಸುವ ಗ್ರಾಹಕ ಮೌಲ್ಯದ ಪ್ರತಿಪಾದನೆಯನ್ನು ಘೋಷಿಸುವ ಮೂಲಕ ವಾಣಿಜ್ಯ ವಾಹನ ಉದ್ಯಮದಲ್ಲಿ ಮುನ್ನಡೆ ಸಾಧಿಸುತ್ತಿದೆ. ಹೆಚ್ಚುತ್ತಿರುವ ಇಂಧನ ಬೆಲೆಗಳು ಮತ್ತು ವಿಕಸನಗೊಂಡ ನಿಯಂತ್ರಕ ಮಾನದಂಡಗಳಿಂದ ಎದುರಾಗುವ ಸವಾಲುಗಳನ್ನು ಎದುರಿಸಲು 'ಹೆಚ್ಚು ಮೈಲೇಜ್ ಪಡೆಯಿರಿ ಅಥವಾ ಟ್ರಕ್ ಹಿಂತಿರುಸಿ' ಈ ಉದ್ಯಮದ ಮೊದಲ ಉಪಕ್ರಮವನ್ನು ಪರಿಚಯಿಸಲು ಮುಂದಾಗಿದೆ.ಮಹಿಂದ್ರಾದ ಹೊಸ ಶ್ರೇಣಿಯು ಸಾಬೀತಾದ 7.2ಲಿ ಎಂ ಪವರ್ ಇಂಜಿನ್ , ಹೆಚ್ ಸಿ ವಿ ಮತ್ತು ಎಂಡಿಐ ಟೆಕ್ ಎಂಜಿನ್ ಐಎಲ್ ಸಿ ವಿ ಜೊತೆಗೆ ಫ್ಯೂಯೆಲ್ ಸ್ಮಾರ್ಟ್ ತಂತ್ರಜ್ಞಾನ, ಸೌಮ್ಯ ಇಜಿಆರ್‌ಜೊತೆಗೆ ಸಾಬೀತಾದ ನಂತರದ ವ್ಯವಸ್ಥೆಯೊಂದಿಗೆ ಕಡಿಮೆ ಎಡಿಬ್ಲೂ ಬಳಕೆಗೆ ಕಾರಣವಾಗುತ್ತದೆ ಮತ್ತು ಅನೇಕ ಇತರ ತಾಂತ್ರಿಕ ಪ್ರಗತಿಗಳು, ಹಾಗೆಯೇ ಅತ್ಯಾಧುನಿಕ iMAXX ಟೆಲಿಮ್ಯಾಟಿಕ್ಸ್ ಪರಿಹಾರ, ಇವೆಲ್ಲವೂ ಹೆಚ್ಚಿನ ಮೈಲೇಜ್ ಅನ್ನು ಖಾತರಿಪಡಿಸುತ್ತವೆ. ಈ ಮೈಲೇಜ್ ಗ್ಯಾರಂಟಿ ಕೇವಲ ಇಂಧನ ದಕ್ಷತೆಯನ್ನು ಒಳಗೊಂಡಿರುತ್ತದೆ. ಈ ಕುರಿತಾದ ಮಾತನಾಡಿದ ಟ್ರಕ್ ಗಳು, ಬಸ್ ಗಳು, ಸಿಇ, ಏರೋಸ್ಪೇಸ್ ಮತ್ತು ಡಿಫೆನ್ಸ್ ಬ್ಯುಸಿನೆಸ್ ಗಳ ಅಧ್ಯಕ್ಷರು – ಮಹೀಂದ್ರಾ ಮತ್ತು ಮಹೀಂದ್ರಾ ಲಿಮಿಟೆಡ್, ಗ್ರೂಪ್ ಎಕ್ಸಿಕ್ಯೂಟಿವ್ ಬೋರ್ಡ್, ಮಹೀಂದ್ರಾ ಗ್ರೂಪ್ ನ ಸದಸ್ಯ ವಿನೋದ್ ಸಹಾಯ್ , ಹೆಚ್ಚು ಮೈಲೇಜ್ ಪಡೆಯಿರಿ ಅಥವಾ ಟ್ರಕ್ ಹಿಂತಿರುಗಿಸಿ ' ಎಂದು ಗ್ರಾಹಕರಿಗೆ ನೀಡಲಾಗುತ್ತಿರುವ ಭರವಸೆ ಉನ್ನತ ಹೈಟೆಕ್ ಪರಿಣತಿಯನ್ನು ಪ್ರತಿಬಿಂಬಿಸುವ ಹೆಗ್ಗುರುತಾಗಿದೆ ಎಂದರು.

## ಚಿಲ್ಲಿ ಗಾರ್ಲಿಕ್ ಪನೀರ್

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಪನೀರ್ – 200 ಗ್ರಾಂ, ಮೆಣಸಿನಕಾಯಿ – ಎರಡು, ಬೆಳ್ಳುಳ್ಳಿ ಪೇಸ್ಟ್ – ಎರಡು ಚಮಚ, ಕೊತ್ತಂಬರಿ ಪುಡಿ – ಒಂದು ಚಮಚ, ಕಸೂರಿ ಮೇತಿ – ಒಂದು ಚಮಚ, ಬೆಳ್ಳುಳ್ಳಿ ಎಸಳು – ಎಂಟು, ಮೊಸರು – ಅರ್ಧ ಕಪ್, ಗರಂ ಮಸಾಲಾ – ಅರ್ಧ ಚಮಚ, ಖಾರದಪುಡಿ – ಒಂದು ಚಮಚ, ಉಪ್ಪು – ರುಚಿಗೆ, ನಿಂಬೆ ರಸ – ಎರಡು ಚಮಚ

### ಮಾಡುವ ವಿಧಾನ

ಒಂದು ಬೌಲ್‌ನಲ್ಲಿ ಮೊಸರು, ನಿಂಬೆ ರಸ, ಬೆಳ್ಳುಳ್ಳಿ ಪೇಸ್ಟ್, ಗರಂ ಮಸಾಲಾ, ಕೊತ್ತಂಬರಿ ಪುಡಿ, ಕಸೂರಿ ಮೇತಿ, ಖಾರದಪುಡಿ ಮತ್ತು ರುಚಿಗೆ ಉಪ್ಪು ಸೇರಿಸಿ ಚೆನ್ನಾಗಿ ಮಿಶ್ರಣ ಮಾಡಿ.

ಇದೇ ಬೌಲ್‌ಗೆ ಪನೀರ್ ತುಂಡುಗಳನ್ನು ಸೇರಿಸಿ ಅದರೊಂದಿಗೆ ಈ ಮಿಶ್ರಣವನ್ನು ಚೆನ್ನಾಗಿ ಬೆರೆಸಿ. ಇದನ್ನ ಅರ್ಧ ಗಂಟೆಯವರೆಗೆ ಪಕ್ಕಕ್ಕೆ ಇರಿಸಿ. ಈಗ ಬಾಣಲಿಯನ್ನು ಒಲೆಯ ಮೇಲೆ ಇಟ್ಟು ಅದಕ್ಕೆ ಎಣ್ಣೆ ಹಾಕಿ. ಸಣ್ಣಗೆ ಕತ್ತರಿಸಿದ ಬೆಳ್ಳುಳ್ಳಿ ಮತ್ತು ಹಸಿರು ಮೆಣಸಿನಕಾಯಿಯನ್ನು ಸೇರಿಸಿ ಮಿಶ್ರಣ ಮಾಡಿ. ಇದನ್ನು ಕಡಿಮೆ ಉರಿಯಲ್ಲಿ ಬೇಯಿಸಿ. ಮೊದಲೇ ಮ್ಯಾರಿನೇಟ್ ಮಾಡಿದ ಪನೀರ್ ತುಂಡುಗಳನ್ನು ಬಾಣಲೆಯಲ್ಲಿ ಒಂದೊಂದಾಗಿ ಫ್ರೈ ಮಾಡಿ. ಎಲ್ಲವನ್ನೂ ಬಾಣಲೆಗೆ ಹಾಕಿದ ನಂತರ ಅದರ ಮೇಲೆ ಮುಚ್ಚಳವನ್ನು ಹಾಕಿ ಕಡಿಮೆ ಉರಿಯಲ್ಲಿ ಬೇಯಿಸಿ. ಪನೀರ್ ತುಂಡುಗಳು ಚೆನ್ನಾಗಿ ಬೇಯುವವರೆಗೆ ನೋಡಿಕೊಳ್ಳಿ. ನಂತರ ಮುಚ್ಚಳ ತೆಗೆದು ಈ ಪನೀರ್ ಅನ್ನು ಫ್ರೈ ಮಾಡಿ. ಗೋಲ್ಡನ್ ಬ್ರೌನ್ ಬಣ್ಣ ಬರುವವರೆಗೆ ಫ್ರೈ ಮಾಡಿದರೆ ಟೇಸ್ಟಿ ಚಿಲ್ಲಿ ಗಾರ್ಲಿಕ್ ಪನೀರ್ ರೆಸಿಪಿ ರೆಡಿ. ಇದು ಮಧ್ಯಾಹ್ನದ ಊಟ ಸಂಜೆ ಸ್ನ್ಯಾಕ್ಸ್‌ಗೆ ಹೇಳಿ ಮಾಡಿಸಿದ ತಿನಿಸು. ಸ್ವಲ್ಪ ಖಾರದ ಕಡಿಮೆ ಹಾಕಿದ್ರೆ ಮಕ್ಕಳು ಕೂಡ ಇಷ್ಟಪಟ್ಟು ತಿನ್ನುತ್ತಾರೆ.

# ಅನಂತ್-ರಾಧಿಕಾ ಜೋಡಿಗೆ ಪ್ರಧಾನಿ ಮೋದಿ ಆಶೀರ್ವಾದ



ಮುಂಬೈನ ಜಿಯೋ ವರ್ಲ್ಡ್ ಕನ್ವೆನ್ಷನ್ ಸೆಂಟರ್‌ನಲ್ಲಿ ನಡೆದ ಅನಂತ್ ಅಂಬಾನಿ ಮತ್ತು ರಾಧಿಕಾ ಮರ್ಚೆಂಟ್ ಅವರ ವಿವಾಹ ಮಹೋತ್ಸವ ಜರುಗಿತು. ಪ್ರಧಾನ ಮಂತ್ರಿ ನರೇಂದ್ರ ಮೋದಿಯವರು ಕಾರ್ಯಕ್ರಮಕ್ಕೆ ಆಗಮಿಸಿದ್ದು, ವರನ ಪೋಷಕರಾದ ನೀತಾ ಮತ್ತು ಮುಖೇಶ್ ಅಂಬಾನಿ ಪ್ರಾಧನಿಯವರನ್ನು ಆತ್ಮೀಯವಾಗಿ ಬರಮಾಡಿಕೊಂಡರು.

ಮುಕೇಶ್ ಅಂಬಾನಿ ಅವರ ಪುತ್ರ ಅನಂತ್ ಅಂಬಾನಿ ಮತ್ತು ವೀರನ್ ಮರ್ಚೆಂಟ್ ಅವರ ಪುತ್ರಿ ರಾಧಿಕಾ ಮರ್ಚೆಂಟ್ ಜುಲೈ 12, 2024 ರ ರಾತ್ರಿ ವಿವಾಹವಾದರು. ಸಾಂಪ್ರದಾಯಿಕ ಗುಜರಾತಿ ಶೈಲಿಯಲ್ಲಿ ವಿವಾಹವನ್ನು ಮುಂಬೈನ ಜಿಯೋ ವರ್ಲ್ಡ್ ಕನ್ವೆನ್ಷನ್ ಸೆಂಟರ್‌ನಲ್ಲಿ ನಡೆಸಲಾಯಿತು .

ಚಲನಚಿತ್ರ, ರಾಜಕೀಯ, ಕ್ರೀಡೆ ಮತ್ತು ವ್ಯಾಪಾರ ಕ್ಷೇತ್ರಗಳ ಪ್ರಮುಖ ವ್ಯಕ್ತಿಗಳು ಸಮಾರಂಭದಲ್ಲಿ ಭಾಗಿಯಾಗಿದ್ದರು, ದೇಶೀಯ ಮತ್ತು ಅಂತರರಾಷ್ಟ್ರೀಯ ಸ್ಟಾರ್ಗಳು ಕೂಡ ಸಮಾರಂಭದಲ್ಲಿ ಹಾಜರ್ ಆಗಿದ್ದರು. ಮದುವೆ ಸಮಾರಂಭವು ಮುಂಬೈನ ಜಿಯೋ ವರ್ಲ್ಡ್ ಡ್ರೈವ್‌ನಲ್ಲಿ ನಡೆಯಿತು.

ಜಿಯೋ ವರ್ಲ್ಡ್ ಕನ್ವೆನ್ಷನ್ ಸೆಂಟರ್‌ನಲ್ಲಿ 'ಶುಭ ಆಶೀರ್ವಾದ'ಕಾರ್ಯಕ್ರಮವನ್ನು ಸಹ ಆಯೋಜಿಸಲಾಗಿತ್ತು, ವಿವಿಧ ಕ್ಷೇತ್ರಗಳ ಹಲವಾರು ಸೆಲೆಬ್ರಿಟಿಗಳು ಇದರಲ್ಲಿ ಭಾಗವಹಿಸಿದ್ದರು.

'ಶುಭ ಆಶೀರ್ವಾದ' ಕಾರ್ಯಕ್ರಮಕ್ಕೂ ಮುನ್ನ ಪ್ರಧಾನಿ ಮೋದಿ ಅವರು ಗೋರೈ-ಮುಲುಂಡ್ ಲಿಂಕ್ ರಸ್ತೆಯಲ್ಲಿ ಥಾಣೆ ಮತ್ತು ಬೊರಿವಲಿ ಸುರಂಗಗಳ ಶಂಕು ಸ್ಥಾಪನಾ ಸಮಾರಂಭವನ್ನು ಉದ್ಘಾಟಿಸಿದರು. ಈ ಉದ್ಘಾಟನೆಯು ಮುಂಬೈನಲ್ಲಿ ? 29,400 ಕೋಟಿ ಮೌಲ್ಯದ ಅಭಿವೃದ್ಧಿ ಯೋಜನೆಗಳ ಪ್ರಾರಂಭವನ್ನು ಗುರುತಿಸಿತು. ಮಹಾರಾಷ್ಟ್ರ ಮುಖ್ಯಮಂತ್ರಿ ಏಕನಾಥ್ ಶಿಂಧೆ, ಉಪಮುಖ್ಯಮಂತ್ರಿಗಳಾದ ದೇವೇಂದ್ರ ಫಡ್ನವೀಸ್ ಮತ್ತು ಅಜಿತ್ ಪವಾರ್ ಅವರೊಂದಿಗೆ ಕಾರ್ಯಕ್ರಮದಲ್ಲಿ ಪ್ರಧಾನಿ ಭಾಗಿಯಾಗಿದ್ದರು.

ಮದುವೆಯ ಸಂಭ್ರಮಾಚರಣೆಯ ಎರಡನೇ ದಿನವು ಫ್ಯಾಷನ್ ಐಕಾನ್ಗಳು, ತಾರೆಗಳು, ರಾಜಕಾರಣಿಗಳು ಮತ್ತು ಪುರೋಹಿತರನ್ನು ಸೇರಿದಂತೆ ಸೆಲೆಬ್ರಿಟಿಗಳನ್ನು ಹಾಜರ್ ಇದ್ದರು.

'ಶುಭ್ ಆಶೀರ್ವಾದ್' ಸಮಾರಂಭದ ಸ್ಮರಣೀಯ ಕ್ಷಣಗಳನ್ನು ಸೆರೆಹಿಡಿಯುವ ವೀಡಿಯೊಗಳು ಸಾಮಾಜಿಕ ಮಾಧ್ಯಮದಲ್ಲಿ ತ್ವರಿತವಾಗಿ ಭಾರಿ ವೈರಲ್ ಆಗಿದ್ದು, ಈವೆಂಟ್ನ ಭವ್ಯತೆ ಮತ್ತು ಮಹತ್ವವನ್ನು ಪ್ರದರ್ಶಿಸುತ್ತದೆ.

# ರಕ್ತದಾನದಿಂದ ಆರೋಗ್ಯ ಲಾಭ



### ಹೆಲ್ತ್ ಟಿಪ್ಸ್

ರಕ್ತ ದಾನ ಮಾಡುವುದರಿಂದ ದೇಹ ವಿಪರೀತ ಸುಸ್ತಾಗುತ್ತದೆ, ಹೆಚ್ಚು ಆಹಾರ ಸೇವಿಸುವ ಮೂಲಕ ಮತ್ತೆ ನೀವು ಸಹಜ ಸ್ಥಿತಿಗೆ ಬರಲು ಕನಿಷ್ಠ ಒಂದು ತಿಂಗಳು ಬೇಕಾಗುತ್ತದೆ ಎಂಬಿತ್ಯಾದಿ ತಪ್ಪು ತಿಳುವಳಿಕೆ ನಿಮ್ಮಲ್ಲೂ ಇದೆಯೇ? ಇಂದೇ ಅದನ್ನು ದೂರ ಮಾಡಿ, ರಕ್ತದಾನದ ಮಹತ್ವ ಹಾಗೂ ಲಾಭಗಳನ್ನು ತಿಳಿಯಿರಿ.

ರಕ್ತದಾನ ಮಾಡುವುದರಿಂದ ದೇಹತೂಕ ಕಡಿಮೆಯಾಗುತ್ತದೆ. ಇದರಿಂದ ಕ್ಯಾಲೊರಿಗಳು ಕರಗುತ್ತವೆ ಎಂಬುದನ್ನು ಅಧ್ಯಯನಗಳು ದೃಢಪಡಿಸಿವೆ. ಹಿಮೋಗ್ಲೋಬಿನ್ ಪ್ರಮಾಣವನ್ನು ಪರೀಕ್ಷಿಸಿಕೊಂಡು ರಕ್ತದಾನ ಮಾಡುವುದು ಅತ್ಯುತ್ತಮ ವಿಧಾನ.

ನಿಯಮಿತವಾಗಿ ರಕ್ತದಾನ ಮಾಡಿದರೆ ದೇಹದ ಕಬ್ಬಿಣಾಂಶ ಹತೋಟಿಗೆ ಬರುತ್ತದೆ. ಇದರಿಂದ ಹೃದ್ರೋಗದ ಅಪಾಯವೂ ಕಡಿಮೆಯಾಗುತ್ತದೆ. ಹೃದಯಾಘಾತ ಹಾಗೂ ಪಾರ್ಶ್ವವಾಯುವಿನಿಂದಲೂ ಮುಕ್ತಿ ಪಡೆಯಬಹುದು.

ರಕ್ತದಾನದಿಂದ ಕ್ಯಾನ್ಸರ್ ಬರುವ ಸಾಧ್ಯತೆಗಳು ಕಡಿಮೆ ಎಂಬುದನ್ನು ಸಂಶೋಧನಗಳು ಹೇಳುತ್ತವೆ. ಇವು ಸಾಕಷ್ಟು ಪ್ರಮಾಣದ ಹೊಸ ರಕ್ತ ಕಣಗಳನ್ನು ಉತ್ಪಾದಿಸುತ್ತವೆ. ರಕ್ತದಾನ ಮಾಡಿದ 48 ಗಂಟೆಗಳ ಒಳಗೆ ನಿಮ್ಮ ದೇಹದಲ್ಲಿ ಕಳೆದು ಹೋದ ಅಷ್ಟೂ ರಕ್ತಕಣಗಳು ಮತ್ತೆ ಉತ್ಪತ್ತಿಯಾಗುತ್ತವೆ. ಹಾಗಾಗಿ ರಕ್ತದಾನ ಮಾಡಿ, ಹಲವು ಲಾಭಗಳನ್ನು ನಿಮ್ಮದಾಗಿಸಿಕೊಳ್ಳಿ.

# 'ನೈಸ್ ರೋಡ್'ನಲ್ಲಿ ಕಾಣಿಸಿಕೊಂಡ ಧರ್ಮ



ಗೋಪಾಲ್ ಹಳೇಪಾಳ್ಯ ಕಥೆ, ಚಿತ್ರಕಥೆ ಬರೆದು ನಿರ್ದೇಶನ ಮಾಡಿರುವ, ಸಸ್ಪೆನ್ಸ್, ಥ್ರಿಲ್ಲರ್ ಕಥಾಹಂದರ ಒಳಗೊಂಡ ನೈಸ್ ರೋಡ್ ಚಿತ್ರದ ಟ್ರೇಲರ್ ಬಿಡುಗಡೆ ಕಾರ್ಯಕ್ರಮ ಇತ್ತೀಚೆಗೆ ನೆರವೇರಿತು. ಕಳೆದ ಜನ್ಮದಲ್ಲಿ ಮಾಡಿದ ತಪ್ಪಗೆ ಈ ಜನ್ಮದಲ್ಲಿ ಶಿಕ್ಷೆ ಕೊಡುವುದು ಯಾವ ನ್ಯಾಯ ಎನ್ನುವ ಅಂಶವನ್ನಿಟ್ಟುಕೊಂಡು ಕರ್ಮ ಮತ್ತು ಧರ್ಮದ ಮೇಲೆ 'ನೈಸ್ ರೋಡ್' ಚಿತ್ರದ ಕಥೆ ಹೆಣೆಯಲಾಗಿದೆ. ನಿರ್ದೇಶನದ ಜೊತೆಗೆ ಪುನರ್ ಗೀತಾ ಸಿನಿಮಾಸ್ ಬ್ಯಾನರ್ ಅಡಿ ಗೋಪಾಲ್ ಹಳೇಪಾಳ್ಯ ಅವರೇ ಈ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ.ಈ ಸಂದರ್ಭದಲ್ಲಿ ನಿರ್ದೇಶಕ ಗೋಪಾಲ್ ಮಾತನಾಡುತ್ತ ಈ ಹಿಂದೆ ನಾನು ತಾಂಡವ ಎಂಬ ಸಿನಿಮಾ ನಿರ್ದೇಶನ ಮಾಡಿದ್ದೆ. ನೈಸ್ ರೋಡ್ ಸಸ್ಪೆನ್ಸ್, ಥ್ರಿಲ್ಲರ್ ಕಥೆಯಾಗಿದ್ದು ಪಾಪ, ಪುಣ್ಯ, ಪುನರ್ಜನ್ಮದ ಕಾನ್ಸೆಪ್ಟ್ ಇಟ್ಟುಕೊಂಡು ಮಾಡಿದ ಚಿತ್ರ. ಈ ಕಥೆ ಬರೆಯುವಾಗಲೇ ಇನ್ವೆಸ್ಟಿಗೇಶನ್ ಆಫೀಸರ್ ಪಾತ್ರಕ್ಕೆ ಧರ್ಮ ಅವರನ್ನು ಆಯ್ಕೆ ಮಾಡಿಕೊಂಡಿದ್ದೆ, ಮತ್ತೊಂದು ಮುಖ್ಯ ಪಾತ್ರದಲ್ಲಿ ಜ್ಯೋತಿ ರೈ ಕಾಣಿಸಿಕೊಂಡಿದ್ದಾರೆ. ಗೋವಿಂದೇಗೌಡ, ಮಂಜು ನಾಥ್ ರಂಗಾಯಣ, ಮಂಜು ಕ್ರಿಶ್, ರೇಣು ಶಿಕಾರಿ, ಪ್ರಭು, ಸಚ್ಚಿ ರವಿಕಿಶೋರ್ ಸೇರಿದಂತೆ ಸಾಕಷ್ಟು ಕಲಾವಿದರು ನಟಿಸಿದ್ದಾರೆ. 25 ದಿನಗಳ ಕಾಲ ಬೆಂಗಳೂರು, ಕುಣಿಗಲ್ ಸುತ್ತಮುತ್ತ ಶೂಟಿಂಗ್ ಮಾಡಲಾಗಿದೆ. ಇದೊಂದು ಕಾಲ್ಪನಿಕ ಕಥೆಯಾಗಿದ್ದು ಈ ತಿಂಗಳ ಕೊನೆಯ ವಾರ ರಿಲೀಸ್ ಮಾಡೋ ಪ್ಲ್ಯಾನ್ ಇದೆ ಎಂದರು.

# ಹೊಳೆಯುವ ತುಟಿಗೆ ಮನೆಮದ್ದು

### ಬ್ಯೂಟಿ ಟಿಪ್ಸ್



ನೈಸರ್ಗಿಕವಾಗಿ ಹೊಳೆಯುವ ತುಟಿ ಇರಬೇಕು ಅಂತಾ ಯಾರಿಗೆ ತಾನೇ ಆಸೆ ಇರೋದಿಲ್ಲ ಹೇಳಿ..? ಈಗಂತೂ ಲಿಪ್ಸ್ಟಿಕ್‌ಗಳ ಬಳಕೆ ಮಾಡುವವರ ಸಂಖ್ಯೆ ಹೆಚ್ಚಾಗಿರೋದ್ರಿಂದ ಬಹುತೇಕ ಮಂದಿ ಶುಷ್ಕ ತುಟಿಯ ಸಮಸ್ಯೆ ಎದುರಿಸ್ತಾ ಇರ್ತಾರೆ. ಇದಕ್ಕಾಗಿ ಲಿಪ್ ಬಾಮ್ಗಳನ್ನ ಹಚ್ಚಿದ್ರೂ ಸಹ ಶಾಶ್ವತ ಪರಿಹಾರ ಸಿಗೋದಿಲ್ಲ.

ಆದರೆ ಮನೆಯಲ್ಲೇ ಇರುವ ಕೆಲ ವಸ್ತುಗಳನ್ನ ಬಳಕೆ ಮಾಡುವ ಮೂಲಕ ನೀವು ನೈಸರ್ಗಿಕವಾಗಿಯೇ ಕಾಂತಿಯುತ ತುಟಿಯನ್ನ ಹೊಂದಬಹುದಾಗಿದೆ. ಇದಕ್ಕಾಗಿ ನೀವು ಸಕ್ಕರೆಯನ್ನ ಬಳಕೆ ಮಾಡಬೇಕು. ಸಕ್ಕರೆಯನ್ನ ಕಾಫಿ ಪುಡಿಯೊಂದಿಗೆ ಮಿಶ್ರಣ ಮಾಡಿ. ಇದಕ್ಕೆ ಕೆಲ ಹನಿ ಆಲಿವ್ ಇಲ್ಲವೇ ಕೊಬ್ಬರಿ ಎಣ್ಣೆಯನ್ನ ಮಿಕ್ಸ್ ಮಾಡಿ. ಇದಕ್ಕೆ ನಿಂಬೆ ರಸವನ್ನ ಸೇರಿಸಿ ಚೆನ್ನಾಗಿ ಕಲಸಿ. ಇದನ್ನ 15 ನಿಮಿಷಗಳ ಕಾಲ ನಿಮ್ಮ ತುಟಿಗೆ ಸ್ಕಬ್ ರೀತಿಯಲ್ಲಿ ಬಳಕೆ ಮಾಡಿ. ವಾರಕ್ಕೆ 1 ರಿಂದ 2 ಬಾರಿ ಈ ರೀತಿ ಮಾಡೋದ್ರಿಂದ ಉತ್ತಮ ಫಲಿತಾಂಶ ಸಿಗಲಿದೆ.

ಇದರ ಬದಲು ಬ್ರೌನ್ ಶುಗರ್ ತೆಗೆದುಕೊಂಡ ಪ್ರಮಾಣದಲ್ಲಿ ಜೇನು ತುಪ್ಪ ಹಾಗೂ ತುಪ್ಪ ಮತ್ತು ಹಾಲಿನ ಕೆನೆಯನ್ನ ತೆಗೆದುಕೊಂಡು ಸರಿಯಾಗಿ ಪೇಸ್ಟ್ ಮಾಡಿಕೊಳ್ಳಿ. ಇದನ್ನ ನಿಮ್ಮ ತುಟಿಗಳ ಮೇಲೆ 10 ನಿಮಿಷಗಳ ಕಾಲ ಮಸಾಜ್ ಮಾಡಿ ತೊಳೆಯಿರಿ. ಉತ್ತಮ ಫಲಿತಾಂಶಕ್ಕಾಗಿ ವಾರದಲ್ಲಿ 1 ರಿಂದ 2ವಾರ ಈ ರೀತಿ ಮಾಡಿ.

# 'YiPPee! ಟಾಸ್' ಅಭಿಯಾನದಲ್ಲಿ ರಾಹುಲ್ ದ್ರಾವಿಡ್, ಜಸ್ಪ್ರೀತ್ ಬುಮ್ರಾ ಮತ್ತು ಸೂರ್ಯಕುಮಾರ್ ಯಾದವ್



ಸನ್‌ಫೀಸ್ಟ್ YiPPee, ITC ಲಿಮಿಟೆಡ್‌ನ ಪ್ರಮುಖ ಇನ್ಸ್ಟಂಟ್ ನೂಡಲ್ ಮತ್ತು ಪಾಸ್ತಾ ಬ್ರ್ಯಾಂಡ್, ದೇಶದ ಅತ್ಯಂತ ಪ್ರೀತಿಯ ಕ್ರಿಕೆಟಿಗರಾದ ರಾಹುಲ್ ದ್ರಾವಿಡ್, ಜಸ್ಪ್ರಿತ್ ಬುಮ್ರಾ ಮತ್ತು ಸೂರ್ಯ ಕುಮಾರ್ ಯಾದವ್ ಅವರನ್ನು ಒಳಗೊಂಡ ಹೊಚ್ಚಹೊಸ ಅಭಿಯಾನದೊಂದಿಗೆ ಮರಳಿದೆ. ಈ ಮೋಜು ಮಸ್ತಿ ತುಂಬಿದ ಅಭಿಯಾನವು YiPPee ಯ ವಿಶಿಷ್ಟ ಗುಣಗಳನ್ನು ಎತ್ತಿ ತೋರಿಸುವ ತಮಾಷೆಯ ಶೈಲಿಯಲ್ಲಿ ಉನ್ನತ ಕ್ರಿಕೆಟಿಗರ ಜನಪ್ರಿಯತೆಯನ್ನು ಹೆಚ್ಚಿಸುತ್ತದೆ!

ಕ್ರಿಕೆಟ್ ದಿಗ್ಗಜರಾದ ಜಸ್ಪ್ರೀತ್ ಬುಮ್ರಾ ಮತ್ತು ಸೂರ್ಯ ಕುಮಾರ್ ಯಾದವ್ ಅವರು ತಮ್ಮ ಇನ್ಸ್ಟಾಗ್ರಾಮ್ ಖಾತೆಗಳಲ್ಲಿ 'ದಿ ಟಾಸ್' ಕುರಿತು ಹಂಚಿಕೊಂಡಿರುವ ರಹಸ್ಯಕರ ಪೋಸ್ಟ್‌ಗಳ ಬಗ್ಗೆ ತಿಳಿದುಕೊಳ್ಳುವ ಕುರಿತು ಸಾಮಾಜಿಕ ಜಾಲತಾಣ ಹೆಚ್ಚು ಕುತೂಹಲ ಹೊರಹಾಕಿದೆ.

ಆಟಗಾರರ ಆಯಾ ಪತ್ನಿಯರು ಕೂಡ ಶೀಘ್ರದಲ್ಲೇ ಅದರ ಬಗ್ಗೆ ಪೋಸ್ಟ್ ಮಾಡಿದ್ದರಿಂದ ಆಸಕ್ತಿ ಇನ್ನಷ್ಟು ಹೆಚ್ಚಿದೆ. ಹಲವಾರು ಖಾತೆಗಳು ಸಾಮಾಜಿಕ ಮಾಧ್ಯಮದಲ್ಲಿ ಟಾಸ್ ಎಂದರೇನು ಎಂದು ತಿಳಿದುಕೊಳ್ಳುವ ತಮ್ಮ ಬಯಕೆಯನ್ನು ಹಂಚಿಕೊಂಡಿದ್ದಾರೆ. ಜನರಿಂದ ವ್ಯಾಪಕವಾದ ಊಹಾಪೋಹಗಳೊಂದಿಗೆ, ಹಲವಾರು ಸಂಭಾಷಣೆಯು ಎಲ್ಲರನ್ನು ಸೆಳೆಯುತ್ತಿದ್ದು, ಸಾಮಾಜಿಕ ಮಾಧ್ಯಮದಾದ್ಯಂತ ಲಕ್ಷಾಂತರ ವೀಕ್ಷಣೆ ಗಳಿಸಿದೆ.ಇತ್ತೀಚೆಗೆ ಬಿಡುಗಡೆಯಾದ TVCಗಳು ದ್ರಾವಿಡ್, ಬುಮ್ರಾ ಮತ್ತು 'SKY'' ಅನ್ನು ಹಗುರವಾದ ಸನ್ನಿವೇಶಗಳಲ್ಲಿ ಪ್ರದರ್ಶಿಸಿದ್ದವು, ಅಲ್ಲಿ ಅವರು YiPPee ಅನ್ನು ಬಳಸಿಕೊಂಡು ದಿನನಿತ್ಯದ ಸ್ನೇಹಪರ ಬ್ಯಾಂಟರ್ಗಳನ್ನು ತಮಾಷೆಯ ರೀತಿಯಲ್ಲಿ ಇತ್ಯರ್ಥಗೊಳಿಸಲು YiPPee ಅನ್ನು ಬಳಸುತ್ತಾರೆ! ನೂಡಲ್ಸ್. ಇದು ಲಾಂಗ್ ಮತ್ತು ನಾನ್-ಸ್ಟಿಕ್ಕಿ ನೂಡಲ್ಸ್‌ನ ಬ್ರ್ಯಾಂಡ್‌ನ ಪ್ರಮುಖ USP ಗಳಲ್ಲಿ ನವೀನ ಆಟವಾಗಿದೆ. ಅಭಿಯಾನದ ಕುರಿತು ಮಾತನಾಡಿದ ಸ್ನ್ಯಾಕ್ಸ್, ನೂಡಲ್ಸ್ ಮತ್ತು ಪಾಸ್ತಾ, ಫುಡ್ ಬ್ಯುಸಿನೆಸ್, ಐಟಿಸಿ ಲಿಮಿಟೆಡ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕವಿತಾ ಚತುರ್ವೇದಿ, ''ಭಾರತದಲ್ಲಿ ಕ್ರಿಕೆಟ್ ಒಂದು ಭಾವನೆಯಾಗಿದೆ ಮತ್ತು ಕ್ರೀಡೆಯನ್ನು ಒಟ್ಟುಗೂಡಿಸುವ ಮೂಲಕ ನಮ್ಮ ಗ್ರಾಹಕರೊಂದಿಗೆ ಸಂಪರ್ಕ ಸಾಧಿಸಲು ಉತ್ತಮ ಮಾರ್ಗ ಯಾವುದು ಎಂದರೆ YiPPeeನ ರುಚಿಭರಿತ ನೂಡಲ್ಸ್. ಈ ಅಭಿಯಾನವು ನಮ್ಮ ಬ್ರ್ಯಾಂಡ್‌ನ ಲವಲವಿಕೆಯ ಶಕ್ತಿಯನ್ನು ಮತ್ತು YiPPee ಬೌಲ್ ಅನ್ನು ಸವಿಯುವ ಸಂತೋಷವನ್ನು ಆಚರಿಸುತ್ತದೆ! ಸ್ನೇಹಿತರು ಮತ್ತು ಕುಟುಂಬದೊಂದಿಗೆ.

ಜನಪ್ರಿಯ ಕ್ರಿಕೆಟಿಗ ಜಸ್ಪ್ರೀತ್ ಬುಮ್ರಾ ಅವರು ಇದು ತುಂಬಾ ತಮಾಷೆಯ ಅಭಿಯಾನವಾಗಿದೆ ಮತ್ತು ನಾವು ಬಹಳಷ್ಟು ಆನಂದಿಸಿದ್ದೇವೆ. ತಮಾಷೆಯನ್ನು ಪರಿಹರಿಸಲು ಒಂದು ಮಾರ್ಗವಿದ್ದರೆ, ಅದು YiPPee ಮೂಲಕ ಎಂದರು! ಪ್ರಖ್ಯಾತ ಬ್ಯಾಟ್ಸ್‌ಮನ್ ಸೂರ್ಯ ಕುಮಾರ್ ಯಾದವ್, ''ಈ ಅಭಿಯಾನದ ಭಾಗವಾಗಲು ನಾನು ರೋಮಾಂಚನಗೊಂಡಿದ್ದೇನೆ ಏಕೆಂದರೆ ಇದು ಮೈದಾನದ ಒಳಗೆ ಮತ್ತು ಹೊರಗೆ ನಮ್ಮ ಒಡನಾಟವನ್ನು ಸಂಪೂರ್ಣವಾಗಿ ಪ್ರತಿಬಿಂಬಿಸುತ್ತದೆ. YiPPee ಜೊತೆಗೆ! ನಮ್ಮ ತಮಾಷೆಯ ಪರಿಹಾಸ್ಯವನ್ನು ಇತ್ಯರ್ಥಪಡಿಸುವುದು ತುಂಬಾ ಸುಲಭವಾಗಿದೆ ಎಂದರುಲೆಜೆಂಡರಿ ರಾಹುಲ್ ದ್ರಾವಿಡ್, ''ಈ ಅಭಿಯಾನದಲ್ಲಿ ಬುಮ್ರಾ ಮತ್ತು ಸ್ಕೈ ಅವರೊಂದಿಗೆ ಕೆಲಸ ಮಾಡುವಾಗ ನಾನು ಅದ್ಭುತ ಸಮಯವನ್ನು ಹೊಂದಿದ್ದೇನೆ. ನಾವು ಆನಂದದಾಯಕವಾದದ್ದನ್ನು ರಚಿಸಿದ್ದು, ಪ್ರತಿಯೊಬ್ಬರೂ ಅದನ್ನು ಇಷ್ಟಪಡುತ್ತಾರೆ ಎಂದು ನಾನು ಭಾವಿಸುತ್ತೇನೆ ಎಂದರು.



**ಜಯಶ್ರೀ.ಬಿ.ಆರ್**
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

# ರಾಶಿ ಭವಿಷ್ಯ

**ಮೇಷ:** ವಿದ್ಯಾಭ್ಯಾಸದಲ್ಲಿ ಯಶಸ್ಸು, ತಾಯಿಯಿಂದ ಸಹಕಾರ, ಅವಿವಾಹಿತರಿಗೆ ವಿವಾಹ ಯೋಗ, ದೊಡ್ಡವರ ಮಾತಿಗೆ ಮನ್ನಣೆ ನೀಡಿ.

**ವೃಷಭ:** ಅತಿಯಾದ ಆತ್ಮವಿಶ್ವಾಸದಿಂದ ತೊಂದರೆ, ಆಸ್ತಿಯ ವಿಚಾರವಾಗಿ ಘರ್ಷಣೆ, ಅನಾರೋಗ್ಯದ ಸಮಸ್ಯೆ.

**ಮಿಥುನ:** ವೃತ್ತಿಯಲ್ಲಿ ಹಿತಶತ್ರುಗಳ ಕಾಟ, ಅನಿರೀಕ್ಷಿತ ಧನಸಹಾಯ, ಉದ್ಯೋಗದಲ್ಲಿ ಅಭಿವೃದ್ಧಿ.

**ಕಟಕ:** ನ್ಯಾಯಾಲಯದ ತೀರ್ಪಿಗಾಗಿ ಪರದಾಟ, ಹಿರಿಯರ ಆರೋಗ್ಯದ ಬಗ್ಗೆ ಎಚ್ಚರ, ಆಸ್ತಿ ಖರೀದಿ ವಿಚಾರದಲ್ಲಿ ಎಚ್ಚರವಿರಲಿ.

**ಸಿಂಹ:** ಧಾರ್ಮಿಕ ಕಾರ್ಯಗಳಲ್ಲಿ ಆಸಕ್ತಿ, ವಾದ ವಿವಾದಗಳಿಂದ ದೂರವಿರಿ, ವಿದ್ಯಾರ್ಥಿಗಳಿಗೆ ಯಶಸ್ಸು.

**ಕನ್ಯಾ:** ಕೃಷಿಕರಿಗೆ ಉತ್ತಮ ಬೆಳೆ ಸಾಧ್ಯತೆ, ಬಂಧುಗಳಿಂದ ಕಿರಿಕಿರಿ ಉಂಟಾಗಬಹುದು, ಬ್ಯಾಂಕ್ ನೌಕರರಿಗೆ ಪ್ರಗತಿ.

**ತುಲಾ:** ಆಮದು ರಫ್ತು ಉದ್ಯಮಿಗಳಿಗೆ ಧನಲಾಭ, ಸಣ್ಣ ಕೈಗಾರಿಕೆಯವರಿಗೆ ಪ್ರೋತ್ಸಾಹ, ನಿರುದ್ಯೋಗಿಗಳಿಗೆ ಸೂಕ್ತ ಉದ್ಯೋಗ.

**ವೃಶ್ಚಿಕ:** ಮನೆಯಲ್ಲಿ ರಂಪಾಟಗಳು ಹೆಚ್ಚಾಗುತ್ತವೆ, ಔಷದ ವ್ಯಾಪಾರಿಗಳಿಗೆ ಲಾಭ, ಕಟ್ಟಡ ನಿರ್ಮಾಣ ಅರ್ಧಕ್ಕೆ ನಿಲ್ಲುವ ಸಾಧ್ಯತೆ.

**ಧನಸ್ಸು:** ಲೇವಾದೇವಿ ವ್ಯವಹಾರದಿಂದ ತೊಂದರೆ, ತಾಯಿ ಆರೋಗ್ಯದಲ್ಲಿ ಚೇತರಿಕೆ, ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಹೆಚ್ಚಿನ ಶ್ರಮ ಅಗತ್ಯ.

**ಮಕರ:** ತಾಯಿಯಿಂದ ಸಲಹೆ ಸಹಕಾರ, ಶತ್ರು ಕಾಟ ಹೆಚ್ಚಾಗುವ ಸಾಧ್ಯತೆ ಇದೆ, ವಿನಾಕಾರಣ ಅಪವಾದಕ್ಕೆ ಗುರಿಯಾಗುವಿರಿ.

**ಕುಂಭ:** ಹೋಟೆಲ್ ಉದ್ಯಮಿಗಳಿಗೆ ಆದಾಯ, ಮೂಳೆಯ ತಜ್ಞರಿಗೆ ಬೇಡಿಕೆ, ತಂದೆಯಿಂದ ಧನ ಸಹಾಯ.

**ಮೀನ:** ವೃತ್ತಿ ಕ್ಷೇತ್ರದಲ್ಲಿ ಹಿತಶತ್ರುಗಳು, ಸರ್ಕಾರದಿಂದ ಅನುದಾನ ಪ್ರಾಪ್ತಿ, ವಿದ್ಯುತ್ ಉಪಕರಣಗಳಿಂದ ತೊಂದರೆ.

# ಶಾರ್ಕ್ ಜಾಗೃತಿ ದಿನ




ಜುಲೈ 14 ರಂದು ಶಾರ್ಕ್ ಜಾಗೃತಿ ದಿನವನ್ನು ಆಚರಿಸಲಾಗುತ್ತದೆ. ಸಮುದ್ರದ ಅಪಾಯಗಳ ಬಗ್ಗೆ ನೀವು ಯೋಚಿಸಿದಾಗ, ಚಲನಚಿತ್ರಗಳು ಮತ್ತು ಕಾರ್ಟೂನ್ಗಳಲ್ಲಿ ಚಿತ್ರಿಸಿದ ರೀತಿಯಲ್ಲಿ ಶಾರ್ಕ್ಗಳು ಖಂಡಿತವಾಗಿಯೂ ಪಟ್ಟಿಯಲ್ಲಿ ಸ್ಥಾನ ಪಡೆಯುತ್ತವೆ. ಆದಾಗ್ಯೂ, ಶಾರ್ಕ್ ಜಾಗೃತಿ ದಿನವು ಹೇಳಿದ ಮುಗ್ಧ ಮೀನುಗಳಿಗೆ ಫೌಲ್ ಮಾಡುವ ದಿನವಲ್ಲ, ಬದಲಿಗೆ, ಇದು ಅವರಿಗಾಗಿ ಫೌಲ್ ಅಳುವ ದಿನವಾಗಿದೆ. ಬಲವಾದ ಮತ್ತು ಅತ್ಯಂತ ಸ್ಥಿತಿಸ್ಥಾಪಕ ಪರಭಕ್ಷಕಗಳು, ವಾಸ್ತವವಾಗಿ, ಇತರ ಮಾರ್ಗಗಳಿಗಿಂತ ಮನುಷ್ಯರಿಗೆ ಹೆಚ್ಚು ಹೆದರುತ್ತಾರೆ. ಶಾರ್ಕ್ನಿಂದ ಸಾಯುವುದಕ್ಕಿಂತ ಅಥವಾ ದಾಳಿ ಮಾಡುವುದಕ್ಕಿಂತ ಮಿಂಚಿನಿಂದ ಹೊಡೆಯುವ ದೊಡ್ಡ ಅವಕಾಶವಿದೆ. ಮನುಷ್ಯರು ಭಯಪಡುವ ಕಾರಣದಿಂದ ಸಾಯುವುದರಿಂದ ಹಿಡಿದು ಮಾಂಸ ಮತ್ತು ರೆಕ್ಕೆಗಳಿಗಾಗಿ ಕೊಯ್ಲು ಮಾಡುವವರೆಗೆ ಶಾರ್ಕ್ಗಳು ಅಳಿವಿನಂಚಿನಲ್ಲಿರುವ ಪ್ರಭೇದಗಳ ಪಟ್ಟಿಯಲ್ಲಿ ಸ್ಥಾನ ಪಡೆದಿವೆ, ಇದು ಅವರಿಗೆ ಮತ್ತು ಪರಿಸರಕ್ಕೆ ಕೆಟ್ಟ ಸುದ್ದಿಯಾಗಿದೆ.

ಶಾರ್ಕ್ ಜಾಗೃತಿ ದಿನವು U.S. ನಲ್ಲಿ ತನ್ನ ಮೂಲವನ್ನು ಹೊಂದಿದೆ ಎಂದು ತೋರುತ್ತದೆ, ಆದರೆ ಹೇಳಲಾದ ಸಮುದ್ರ ಜೀವಿಗಳ ಪರವಾಗಿ ಜಾಗೃತಿ ಮೂಡಿಸುವ ದಿನದ ಗುರಿಗಳು ಸಾರ್ವತ್ರಿಕವಾಗಿವೆ. ಮೀನಿನಂತೆ ಶಾರ್ಕ್ಗಳು ಇತಿಹಾಸದಲ್ಲಿ ಬಹಳ ಹಿಂದೆಯೇ ಇವೆ, ಅನೇಕ ವಿಜ್ಞಾನಿಗಳು ಅವುಗಳನ್ನು 'ಜೀವಂತ ಪಳೆಯುಳಿಕೆಗಳು' ಎಂದು ಉಲ್ಲೇಖಿಸುತ್ತಾರೆ. ವಾಸ್ತವವಾಗಿ, ಶಾರ್ಕ್ಗಳು ಮರಗಳು ಮತ್ತು ಡೈನೋಸಾರ್ಗಳಿಗಿಂತ ಹಳೆಯವು, ಎರಡನೆಯದು ಕೇವಲ 230 ಮಿಲಿಯನ್ ವರ್ಷಗಳ ಹಿಂದೆ ಭೂಮಿಯ ಮೇಲೆ ಸುತ್ತಾಡಿದೆ. ಮತ್ತೊಂದೆಡೆ, ಶಾರ್ಕ್ಗಳು ಈಗ 420 ಮಿಲಿಯನ್ ವರ್ಷಗಳಿಗಿಂತಲೂ ಹೆಚ್ಚು ಕಾಲ ಗ್ರಹದಲ್ಲಿವೆ. ಅವರು ಐದು ಸಾಮೂಹಿಕ ಅಳಿವುಗಳನ್ನು ಸಹ ಉಳಿಸಿಕೊಂಡಿದ್ದಾರೆ. ಅವು ಮೀನಿನ ಕಾರ್ಟಿಲ್ಯಾಜಿನಸ್ ಗುಂಪಿಗೆ ಸೇರಿವೆ ಏಕೆಂದರೆ ಅವುಗಳ ಅಸ್ಥಿಪಂಜರದ ಹೆಚ್ಚಿನ ಭಾಗವು ಕಾರ್ಟಿಲೆಜ್ನಿಂದ ಮಾಡಲ್ಪಟ್ಟಿದೆ, ಅವುಗಳ ಹಲ್ಲುಗಳನ್ನು ಹೊರತುಪಡಿಸಿ, ಅವು ಗಟ್ಟಿಯಾದ, ಚೂಪಾದ ಮತ್ತು ಬಲವಾಗಿರುತ್ತವೆ ಮತ್ತು ಅವುಗಳ ಆಹಾರವನ್ನು ಕಸಿದುಕೊಳ್ಳಲು ಮತ್ತು ಒಡೆಯುತ್ತವೆ. ಅವರ ನಯವಾದ ದೇಹದ ಆಕಾರಗಳು ಈಜುವಾಗ ಚುರುಕುತನವನ್ನು ಒದಗಿಸಲು ಸಹಾಯ ಮಾಡುತ್ತದೆ. ಶಾರ್ಕ್‌ಗಳು ಇತರ ಸಮುದ್ರ ನಿವಾಸಿಗಳ ಜನಸಂಖ್ಯೆಯನ್ನು ನಿಯಂತ್ರಣದಲ್ಲಿಟ್ಟುಕೊಳ್ಳುವ ಮೂಲಕ ಸಮುದ್ರದ ಆರೋಗ್ಯವನ್ನು ನಿಯಂತ್ರಣದಲ್ಲಿಟ್ಟುಕೊಳ್ಳುತ್ತವೆ. ಉದಾಹರಣೆಗೆ, ಶಾರ್ಕ್ಗಳು ಸಮುದ್ರ ಆಮೆಗಳನ್ನು ಬೇಟೆಯಾಡುತ್ತವೆ, ಅವು ಇಂಗಾಲದ ಶೇಖರಣೆಗೆ ಮುಖ್ಯವಾದ ಸೀಗ್ರಾಸ್ ಅನ್ನು ತಿನ್ನುತ್ತವೆ. ಸಮುದ್ರ ಆಮೆ ಜನಸಂಖ್ಯೆಯು ಹೆಚ್ಚಾದರೆ, ಇಂಗಾಲದ ಮಳಿಗೆಗಳು ಬೆದರಿಕೆಗೆ ಒಳಗಾಗುತ್ತವೆ.

# ಧ್ರುವ್ ರಾಥಿಗೆ ಸಂಕಷ್ಟ



**ನವದೆಹಲಿ:** ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಪುತ್ರಿ ವಿರುದ್ಧ ಜನರನ್ನು ದಾರಿತಪ್ಪಿಸುವಂತಹ ಪೋಸ್ಟ್ ಮಾಡಿರುವ ಆರೋಪದಡಿ ಖ್ಯಾತ ಯೂಟ್ಯೂಬರ್ ಧ್ರುವ್ ರಥೀ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

ಓಂ ಬಿರ್ಲಾ ಅವರ ಪುತ್ರಿ, ಅಂಜಲಿ ಬಿರ್ಲಾ ಯುಪಿಎಸ್ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವುದಕ್ಕೆ ಸಂಬಂಧಿಸಿದಂತೆ ಧ್ರುವ್ ರಥೀ ಅವರ ಪರೋಡಿ ಎಂಬ ಎಕ್ಸ್ ಖಾತೆಯಲ್ಲಿ ಪೋಸ್ಟ್ ಪ್ರಕಟವಾಗಿತ್ತು.

ಅಂಜಲಿ ಪರೀಕ್ಷೆ ಬರೆಯದೆ ಯುಪಿಎಸ್ಸಿ ಪರೀಕ್ಷೆ ಉತ್ತೀರ್ಣರಾಗಿದ್ದಾರೆ ಎಂದು ಅದರಲ್ಲಿ ಅಂಜಲಿಯವರ ಫೋಟೊ ಸಹಿತ ಸುಳ್ಳು ಮಾಹಿತಿ ಬಿತ್ತರವಾಗಿತ್ತು.

ಯೂಟ್ಯೂಬರ್ ಧ್ರುವ್ ರಥೀ ಸದಾ ಮೋದಿ ವಿರೋಧಿ ವಿಡಿಯೋಗಳ ಮೂಲಕ ಸುದ್ದಿಯಲ್ಲಿರುವವರು. ಓಂ ಬಿರ್ಲಾ ಪುತ್ರಿ ವಿರುದ್ಧ ಇಂಥಹ ಪೋಸ್ಟ್ ಮಾಡಿರುವ ಆರೋಪದಲ್ಲಿ ರಥೀ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

ಪರೀಕ್ಷೆ ಬರೆಯದೇ ನೀವು ಯುಪಿಎಸ್ಸಿ ತೇರ್ಗಡೆಯಾಗಬಹುದಾದ ಏಕೈಕ ದೇಶ ಭಾರತ. ಅದಕ್ಕೆ ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಅವರ ಮಗಳಾಗಿ ಹುಟ್ಟಬೇಕು. ವೃತ್ತಿಯಲ್ಲಿ ಮಾಡೆಲ್ ಆಗಿರುವ ಅಂಜಲಿ ಬಿರ್ಲಾ ಯಾವುದೇ ಪರೀಕ್ಷೆ ಬರೆಯದೆ ಯುಪಿಎಸ್ಸಿ ಪಾಸ್ ಆಗಿದ್ದಾರೆ. ಮೋದಿ ಸರ್ಕಾರ ನಮ್ಮ ಶಿಕ್ಷಣ ವ್ಯವಸ್ಥೆಯನ್ನು ಅಪಹಾಸ್ಯ ಮಾಡುತ್ತಿದೆ ಎಂದು ಪೋಸ್ಟ್ ಮಾಡಿದ್ದರು.

# ಭಾರತದಲ್ಲಿ ನಡೆಯಲಿದೆ ವಿಶ್ವ ಮನೋರಂಜನಾ ಶೃಂಗಸಭೆ



**ನವದೆಹಲಿ:** ಮಾಹಿತಿ ಪ್ರಸಾರ ಸಚಿವಾಲಯವು ನವೆಂಬರ್ 20–24 ರವರೆಗೆ ವಿಶ್ವ ಆಡಿಯೋ ವಿಷುಯಲ್ ಮತ್ತು ಎಂಟರ್ಟೈನ್ಮೆಂಟ್ ಶೃಂಗಸಭೆ (ವೇವ್ಸ್) ಯ ಮೊದಲ ಆವೃತ್ತಿಯನ್ನು ಆಯೋಜಿಸುತ್ತಿದ್ದು, ಗೋವಾದಲ್ಲಿ ನಡೆಯಲಿದೆ.

ಕೇಂದ್ರ, ಐಟಿ ಸಚಿವ ಅಶ್ವಿನಿ ವೈಷ್ಣವ್ ಮಾಹಿತಿ ನೀಡಿದ್ದು, ಮಾಧ್ಯಮ ಮತ್ತು ಮನರಂಜನಾ ಉದ್ಯಮವು ಉದ್ಯೋಗದ ಪ್ರಮುಖ ಮೂಲವಾಗಿದೆ, ಇದು 25 ಲಕ್ಷ ಜನರಿಗೆ ಉದ್ಯೋಗಗಳನ್ನು ಒದಗಿಸುತ್ತಿದೆ. ತಂತ್ರಜ್ಞಾನದಲ್ಲಿನ ಪ್ರಗತಿಯಿಂದ ಈ ಉದ್ಯೋಗ ಮೂಲ ವಿಸ್ತರಿಸುತ್ತ ಹೋಗುತ್ತಿದೆ. ಇದನ್ನು ಇನ್ನಷ್ಟು ಪ್ರಗತಿಯತ್ತ ಕೊಂಡೊಯ್ಯುವ ನಿಟ್ಟಿನಲ್ಲಿ ಗೋವಾದಲ್ಲಿ ವಿಶ್ವ ಆಡಿಯೋ ವಿಷುಯಲ್, ಮನರಂಜನಾ ಶೃಂಗಸಭೆ ಆಯೋಜಿಸಲಾಗಿದೆ.

ಇಂಟರ್ ನ್ಯಾಷನಲ್ ಫಿಲ್ಮ್ ಫೆಸ್ಟಿವಲ್ ಆಫ್ ಇಂಡಿಯಾ ಜೊತೆಗೆ ನಡೆಯುವ ಈ ಜಾಗತಿಕ ಶೃಂಗಸಭೆಯು ಗಣನೀಯ ಉದ್ಯೋಗಾವಕಾಶಗಳನ್ನು ಸೃಷ್ಟಿಸುವ ಗುರಿಯನ್ನು ಹೊಂದಿದೆ ಎಂದು ಹೇಳಿದ್ದಾರೆ.

ಕೇಂದ್ರ ಸರ್ಕಾರದ ಕ್ರಮವನ್ನು ಸ್ವಾಗತಿಸಿದ ಗೋವಾ ಮುಖ್ಯಮಂತ್ರಿ ಪ್ರಮೋದ್ ಸಾವಂತ್, ಸಚಿವಾಲಯದ ನಿರ್ಧಾರವನ್ನು ಸ್ವಾಗತಿಸುತ್ತೇನೆ. ಕಳೆದ 20 ವರ್ಷಗಳಿಂದಇಂಟರ್ ನ್ಯಾಷನಲ್ ಫಿಲ್ಮ್ ಫೆಸ್ಟಿವಲ್ ಆಫ್ ಇಂಡಿಯಾ ವನ್ನು ಆಯೋಜಿಸುತ್ತಿದ್ದೇವೆ. ಈ ಶೃಂಗಸಭೆಯನ್ನು ಯಶಸ್ವಿಗೊಳಿಸಲು ಬದ್ಧರಾಗಿದ್ದೇವೆ ಎಂದು ಹೇಳಿದ್ದಾರೆ.

# 46 ವರ್ಷದ ನಂತರ ತೆರೆಯಲಿದೆ ಪುರಿ ಜಗನ್ನಾಥ ದೇಗುಲ ರತ್ನ ಭಂಡಾರದ ಬಾಗಿಲು!



**ಭುವನೇಶ್ವರ:** ತಿರುವಂತನಪುರಂನಲ್ಲಿರುವ ಪದ್ಮನಾಭ ದೇವಸ್ಥಾನ ತಳ ಮಹಡಿಯಲ್ಲಿ ದೊಡ್ಡ ಪ್ರಮಾಣ ಪುರಾತನ ಕಾಲದ ಚಿನ್ನಾಭರಣ ಪತ್ತೆಯಾಗಿತ್ತು. ಇದು ಇಡೀ ದೇಶದ ಗಮನ ಸೆಳೆದಿತ್ತು. ಅಂತಹದೇ ಮತ್ತೊಂದು ಘಟನೆ ಈಗ ಒಡಿಶಾದ ಪುರಿಯಲ್ಲಿ ನಡೆಯಬಹುದಾ ಎನ್ನುವ ಕುತೂಹಲ ಮನೆ ಮಾಡಿದೆ. 46 ವರ್ಷಗಳ ಬಳಿಕ ಪುರಿಯ ಜಗನ್ನಾಥ ದೇವಾಲಯದ ರತ್ನ ಭಂಡಾರದ ಬಾಗಿಲನ್ನು ತೆರೆಯಲು ಎಲ್ಲಾ ರೀತಿಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದ್ದು ಅಲ್ಲಿರುವ ಪುರಾತನ ಚಿನ್ನಾಭರಣ, ವಜ್ರ, ವೈಡೂರ್ಯದ ಬಗ್ಗೆ ತಿಳಿದುಕೊಳ್ಳುವ ಕುತೂಹಲ ಹೆಚ್ಚಾಗತೊಡಗಿದೆ.

1985ರ ಜುಲೈ 14ರಂದು ಬಲಭದ್ರ ದೇವರ ಚಿನ್ನಾಭರಣಗಳ ಪತ್ತೆಗಾಗಿ ರತ್ನ ಭಂಡಾರವನ್ನು ಕೊನೆಯ ಬಾರಿಗೆ ತೆರೆಯಲಾಗಿತ್ತು. ರತ್ನ ಭಂಡಾರದಲ್ಲಿ ಎಷ್ಟು ನಿಧಿಗಳಿವೆ ಎಂಬ ಬಗ್ಗೆ 1978ರ ಮೇ 13ರಿಂದ ಜುಲೈ 13ರವರೆಗೆ ಲೆಕ್ಕಾಚಾರ ಹಾಕಲಾಗಿದ್ದು, ಇದು ಕೊನೆಯದಾಗಿ ನಡೆದ ಲೆಕ್ಕಾಚಾರವಾಗಿತ್ತು. ಆ ಬಳಿಕ ರತ್ನ ಭಂಡಾರದೊಳಗೆ ವಿಷಕಾರಿ ಸರ್ಪಗಳು, ನಾಗರ ಹಾವುಗಳು ಕಾವಲು ಕಾಯುತ್ತಿರುವ ಬಗ್ಗೆ ದಂತಕಥೆಗಳು, ಜಾನಪದ ಕಥೆಗಳು ಹುಟ್ಟಿಕೊಂಡಿದ್ದವು, ಹೀಗಾಗೀ ಬಾಗಿಲು ತೆರೆಯುವ ಸಾಹಸ ಮಾಡಲು ಯಾವ ಸರ್ಕಾರ ಹೋಗಿರಲಿಲ್ಲ.

ಬರೋಬ್ಬರಿ 45 ವರ್ಷಗಳ ಬಳಿಕ ರತ್ನ ಭಂಡಾರದ ಬಾಗಿಲು ತೆರೆಯಲ್ಲಿದ್ದು, ಅಲ್ಲಿರುವ ಪುರಾತನ ಚಿನ್ನಾಭರಣ, ವಜ್ರ, ವೈಡೂರ್ಯದ ಬಗ್ಗೆ ತಿಳಿದುಕೊಳ್ಳುವ ಕುತೂಹಲ ಹೆಚ್ಚಾಗತೊಡಗಿದೆ. ಅದರ ಜೊತೆಗೆ ಅಲ್ಲಿ ವಾಸವಾಗಿರುವ ಹಾವುಗಳ ಬಗ್ಗೆಯೂ ಅಧಿಕಾರಿಗಳಿಗೆ ಅಷ್ಟೇ ಭಯ ಹುಟ್ಟಿಸಿದೆ. ಹೀಗಾಗೀ ನುರಿತ ಉರಗ ತಜ್ಞರು ವೈದ್ಯರ ತಂಡ, ಅಂಬುಲೆನ್ಸ್ ಸನ್ನದ್ಧವಾಗಿಟ್ಟುಕೊಳ್ಳಲಾಗಿದೆ.

**ಸಂಪತ್ತು ಎಷ್ಟಿದೆ?:** ಜಗನ್ನಾಥ ದೇವಸ್ಥಾನದ ರತ್ನ ಭಂಡಾರದಲ್ಲಿ ಇರುವ ಅಮೂಲ್ಯ ವಜ್ರ ವೈಡೂರ್ಯ, ಚಿನ್ನಾಭರಣಗಳನ್ನು ಬಳಸಿಕೊಂಡರೆ ವಿಶ್ವದ ಹಲವು ಬಡ ರಾಷ್ಟ್ರಗಳ ಆರ್ಥಿಕತೆಯನ್ನು ಸುಧಾರಿಸಬಹುದಂತೆ. 2018 ರಲ್ಲಿ, ಆಗಿನ ಕಾನೂನು ಸಚಿವ ಪ್ರತಾಪ್ ಜೆನಾ ಅವರು 'ರತ್ನ ಭಂಡಾರ್' 12,831 ಭಾರಿ (ಒಂದು ಭಾರಿ 11.66 ಗ್ರಾಂಗೆ ಸಮ) ಚಿನ್ನಾಭರಣಗಳನ್ನು ಹೊಂದಿದೆ. 22,153 ಭಾರಿ ಬೆಳ್ಳಿ ಪಾತ್ರೆಗಳು ಮತ್ತು ಇತರ ವಸ್ತುಗಳನ್ನು ಅಮೂಲ್ಯವಾದ ಕಲ್ಲುಗಳಿಂದ ಅಳವಡಿಸಲಾಗಿದೆ ಎಂದು ರಾಜ್ಯ ವಿಧಾನಸಭೆಗೆ ತಿಳಿಸಿದ್ದರು. ದೇವಾಲಯದಲ್ಲಿ ಕೆಲಸ ಮಾಡುತ್ತಿರುವ ಹಿರಿಯ ವ್ಯಕ್ತಿಗಳ ಪ್ರಕಾರ ರತ್ನ ಭಂಡಾರವು ಮೂರು ಭಾಗಗಳನ್ನು ಒಳಗೊಂಡಿದೆ. ಹೊರಗಿನ ಕೋಣೆಯಲ್ಲಿ ದೇವಸ್ಥಾನದ ಆಚರಣೆಗಳಲ್ಲಿ ಬಳಸುವ ಆಭರಣ, ಒಳಗಿನ ಕೊಠಡಿಯಲ್ಲಿ ದೇವಸ್ಥಾನ ಬಳಸದ ಆಭರಣ ಮತ್ತು ರಾಜರು ಮತ್ತು ಭಕ್ತರು ದಾನ ಮಾಡಿದ ಇತರ ಅಮೂಲ್ಯ ವಸ್ತುಗಳನ್ನು ಹೊಂದಿದೆ.

# ಉಪಚುನಾವಣೆ : 13 ಸ್ಥಾನಗಳ ಪೈಕಿ 10ರಲ್ಲಿ 'ಇಂಡಿಯಾ ಮೈತ್ರಿಕೂಟ' ಜಯಭೇರಿ



**ನವದೆಹಲಿ:** ಏಳು ರಾಜ್ಯಗಳ 13 ವಿಧಾನಸಭಾ ಸ್ಥಾನಗಳಿಗೆ ಶನಿವಾರ ನಡೆದ ಉಪಚುನಾವಣೆಯ ಮತ ಎಣಿಕೆಯಲ್ಲಿ ಇಂಡಿಯಾ ಮೈತ್ರಿಕೂಟ 10 ಸ್ಥಾನಗಳನ್ನ ಗೆದ್ದರೆ, ಬಿಜೆಪಿ ಎರಡು ಕ್ಷೇತ್ರಗಳಲ್ಲಿ ಜಯಗಳಿಸಿದೆ.

ಜುಲೈ 10 ರಂದು ಮತದಾನ ನಡೆದ ವಿಧಾನಸಭಾ ವಿಭಾಗಗಳಲ್ಲಿ, ಹಿಮಾಚಲ ಪ್ರದೇಶದ ಡೆಹ್ರಾಡೂನ್ ಮತ್ತು ನಲಘರ್ ಸ್ಥಾನಗಳನ್ನ ಕಾಂಗ್ರೆಸ್ ಗೆದ್ದಿದೆ ಆದರೆ ಹಮೀರ್ಪುರವನ್ನ ಬಿಜೆಪಿಗೆ ಕಳೆದುಕೊಂಡಿದೆ.

ಮುಖ್ಯಮಂತ್ರಿ ಸುಖ್ವಿಂದರ್ ಸಿಂಗ್ ಸುಖು ಅವರ ಪತ್ನಿ ಕಮಲೇಶ್ ಠಾಕೂರ್ ಅವರನ್ನ ಡೆಹ್ರಾಡೂನ್'ನಲ್ಲಿ ಕಾಂಗ್ರೆಸ್ ಕಣಕ್ಕಿಳಿಸಿತ್ತು, ಅಲ್ಲಿ ಅವರು ಬಿಜೆಪಿಯ ಹೋಶ್ಯಾರ್ ಸಿಂಗ್ ವಿರುದ್ಧ 9,399 ಮತಗಳ ಅಂತರದಿಂದ ಗೆದ್ದಿದ್ದಾರೆ.

ನಲಘರ್ ಕ್ಷೇತ್ರದಲ್ಲಿ ಕಾಂಗ್ರೆಸ್ ನ ಹರ್ದೀಪ್ ಸಿಂಗ್ ಬಾವಾ ಅವರು ಬಿಜೆಪಿಯ ಕೆಎಲ್ ಠಾಕೂರ್ ಅವರನ್ನು 8,990 ಮತಗಳ ಅಂತರದಿಂದ ಸೋಲಿಸಿದ್ದಾರೆ. ಆದಾಗ್ಯೂ, ಹಮೀರ್ಪುರ ಸ್ಥಾನವು ಅದರ ನಾಯಕ ಆಶಿಶ್ ಶರ್ಮಾ ಅವರು ತಮ್ಮ ಸಮೀಪದ ಪ್ರತಿಸ್ಪರ್ಧಿ ಕಾಂಗ್ರೆಸ್ ನಾಯಕ ಪುಷ್ಪಿಂದರ್ ವರ್ಮಾ ಅವರನ್ನು 1,571 ಮತಗಳ ಅಂತರದಿಂದ ಸೋಲಿಸಿದ ನಂತರ ಬಿಜೆಪಿಗೆ ಹೋಯಿತು.

ಫೆಬ್ರವರಿ 27 ರಂದು ನಡೆದ ರಾಜ್ಯಸಭಾ ಚುನಾವಣೆಯಲ್ಲಿ ಆರು ಕಾಂಗ್ರೆಸ್ ಬಂಡಾಯಗಾರರೊಂದಿಗೆ ಸ್ವತಂತ್ರ ಶಾಸಕರಾದ ಹೋಶ್ಯಾರ್ ಸಿಂಗ್, ಆಶಿಶ್ ಶರ್ಮಾ ಮತ್ತು ಕೆಎಲ್ ಠಾಕೂರ್ ಅವರು ಬಿಜೆಪಿ ಅಭ್ಯರ್ಥಿಯ ಪರವಾಗಿ ಮತ ಚಲಾಯಿಸಿದ ನಂತರ ಮೂರು ವಿಧಾನಸಭಾ ಸ್ಥಾನಗಳು ಖಾಲಿಯಾಗಿವೆ.



# ರಾಹುಲ್ ಜೊತೆ ಮಾತುಕತೆ ನಡೆದೇ ಇಲ್ಲ - ಸ್ಪಷ್ಟನೆ



**ನ್ಯೂಯಾರ್ಕ್:** ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಮತ್ತು ಅಮೇರಿಕಾ ಉಪಾಧ್ಯಕ್ಷೆ ಕಮಲಾ ಹ್ಯಾರಿಸ್ ದೂರವಾಣಿ ಮೂಲಕ ಮಾತುಕತೆ ನಡೆಸಿರುವ ಸುದ್ದಿಯನ್ನು ಯುಎಸ್ ಉಪಾಧ್ಯಕ್ಷರ ಕಚೇರಿಯೂ ಅಲ್ಲಗಳೆದಿದೆ. ಗುರುವಾರದ ಇವರಿಬ್ಬರೂ ದೂರವಾಣಿ ಮೂಲಕ ಮಾತುಕತೆ ನಡೆಸಿದ್ದಾರೆ ಎಂಬುವುದು ವ್ಯಾಪಕವಾಗಿ ವರದಿಯಾಗಿತ್ತು. ಇವರಿಬ್ಬರ ಮಾತುಕತೆಯೂ ಅಮೇರಿಕಾದ ಅಧ್ಯಕ್ಷೀಯ ಚುನಾವಣೆಗೆ ಸಂಬಂಧಿಸಿದಂತೆ ಆಗಿದ್ದು, ಈ ಕುರಿತು ಹಲವು ಮಹತ್ವದ ವಿಷಯಗಳ ಚರ್ಚೆ ನಡೆಸಿದ್ದಾರೆ ಎಂದು ವರದಿಯಾಗಿತ್ತು. ಆದರೆ ಈ ವರದಿಯನ್ನು ಅಲ್ಲಗಳೆದಿರುವ ಕಮಲಾ ಹ್ಯಾರಿಸ್ ಅವರ ಕಚೇರಿಯ ಪ್ರಕಾರ ಈ ಸುದ್ದಿ ತಪ್ಪಾಗಿದ್ದು, ಕಮಲಾ ಹ್ಯಾರಿಸ್ ಅವರು ರಾಹುಲ್ ಗಾಂಧಿ ಜೊತೆ ಮಾತನಾಡಿಲ್ಲ ಎಂದು ಸ್ಪಷ್ಟಪಡಿಸಿದೆ.

# ಪಾಕ್‌ಗೆ ಐಎಂಎಫ್‌ನಿಂದ ನೆರವು

**ಇಸ್ಲಾಮಾಬಾದ್:** ಆರ್ಥಿಕ ಬಿಕ್ಕಟ್ಟಿನಲ್ಲಿರುವ ಪಾಕಿಸ್ತಾನಕ್ಕೆ ಅಂತಾರಾಷ್ಟ್ರೀಯ ಹಣಕಾಸು ನಿಧಿ(ಐಎಂಎಫ್) 58 ಸಾವಿರ ಕೋಟಿ ರೂ.(7 ಬಿಲಿಯನ್ ಡಾಲರ್)ಗಳಷ್ಟು ಸಾಲ ನೀಡಲು ಒಪ್ಪಿಕೊಂಡಿದೆ. ಇದರ ಬೆನ್ನಲ್ಲೇ ಮಾತನಾಡಿರುವ ಪಾಕ್ ಪ್ರಧಾನಿ ಶೆಹಬಾಜ್ ಷರೀಫ್, ''ಐಎಂಎಫ್ ನೆರವು ಪಡೆಯುತ್ತಿರುವುದು ಇದು ಕೊನೆಯ ಬಾರಿ. ಯಾರಿಗೆ ತೆರಿಗೆ ವಿಧಿಸುತ್ತಿಲ್ಲವೋ ಅವರಿಗೆ ಇನ್ನು ಮುಂದೆ ತೆರಿಗೆ ವಿಧಿಸಿ ಆರ್ಥಿಕತೆಯನ್ನು ಹಳಿಗೆ ತರಲಾಗುತ್ತದೆ' ಎಂದಿದ್ದಾರೆ. 1958ರಿಂದಲೂ ಪಾಕ್ 24 ಬಾರಿ ಐಎಂಎಫ್ ನಿಂದ ನೆರವು ಪಡೆದಿದೆ.




# ಪಾಕ್ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಖುಲಾಸೆ

**ಪಾಕಿಸ್ತಾನ:** ಪಾಕಿಸ್ತಾನದ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಅವರ ಅಕ್ರಮ ವಿವಾಹದ ಆರೋಪವನ್ನು ಪಾಕಿಸ್ತಾನ ನ್ಯಾಯಾಲಯ ಶನಿವಾರ ಖುಲಾಸೆಗೊಳಿಸಿದೆ. ಈ ಕುರಿತು ಪಾಕಿಸ್ತಾನದ ಸುದ್ದಿ ಮಾಧ್ಯಮಗಳು ವರದಿ ಮಾಡಿದ್ದು, ಇದ್ದತ್ ಪ್ರಕರಣದಲ್ಲಿ ಅರ್ಜಿದಾರರೊಬ್ಬರು ವಿವಾಹದ ಕಾನೂನುಬದ್ಧತೆಯನ್ನು ಪ್ರಶ್ನಿಸಿದ್ದರು. ಈ ಪ್ರಕರಣದಲ್ಲಿ ಫೆಬ್ರವರಿಯಲ್ಲಿ ನಡೆದ ಚುನಾವಣೆಗೆ ಕೆಲವೇ ದಿನಗಳ ಮೊದಲು ಖಾನ್ಗೆ ನೀಡಲಾಗಿದ್ದ ಏಳು ವರ್ಷಗಳ ಜೈಲು ಶಿಕ್ಷೆಯನ್ನು ಖುಲಾಸೆಗೊಳಿಸಿದೆ. ಆದಾಗ್ಯೂ, ಅವರು ಗಲಭೆಗೆ ಪ್ರಚೋದನೆ ನೀಡಿದ ಆರೋಪದಲ್ಲಿ ಖಾನ್ ಜೈಲಿನಲ್ಲಿಯೇ ಇರಲಿದ್ದಾರೆ. ಇಸ್ಲಾಮಾಬಾದ್ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯವು ಖಾನ್ ವಿರುದ್ಧದ ಆರೋಪಗಳನ್ನು ವಜಾಗೊಳಿಸಿದೆ. 71ರ ಹರೆಯದ ಖಾನ್ ಮತ್ತು ಅವರ ಪತ್ನಿ ಬುಶ್ರಾ, ಬೀಬಿ ಎಂದೂ ಕರೆಯಲ್ಪಡುವ ಬುಶ್ರಾ, ಖಾನ್ ಅವರಿಗೆ ಫೆಬ್ರವರಿಯಲ್ಲಿ ಏಳು ವರ್ಷಗಳ ಶಿಕ್ಷೆ ವಿಧಿಸಲಾಯಿತು. ಅವರು ಹಿಂದಿನ ವಿವಾಹದಿಂದ ಬೀಬಿಯ ವಿಚ್ಛೇದನ ಮತ್ತು ಅವಳ ನಡುವಿನ ಅಗತ್ಯ ಮಧ್ಯಂತರವನ್ನು ಅನುಸರಿಸಲು ವಿಫಲವಾದ ಮೂಲಕ ಇಸ್ಲಾಮಿಕ್ ಕಾನೂನನ್ನು ಉಲ್ಲಂಘಿಸಿದ ಆರೋಪದಲ್ಲಿ ನ್ಯಾಯಾಲಯವು ಅವರನ್ನು ತಪ್ಪಿತಸ್ಥರೆಂದು ಪರಿಗಣಿಸಿತ್ತು. ಆದರೆ ಇಸ್ಲಾಮಾಬಾದ್ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯದ ನ್ಯಾಯಾಧೀಶ ಅಫ್ಜಲ್ ಮಜೋಕಾ , ಇಮ್ರಾನ್ ಖಾನ್ ಮತ್ತು ಬುಶ್ರಾ, ಬೀಬಿ ಇಬ್ಬರ ಮನವಿಗಳನ್ನು ಸ್ವೀಕರಿಸಲಾಗಿದೆ ಎಂದು ನ್ಯಾಯಾಲಯದಲ್ಲಿ ಘೋಷಿಸಿದರು



# ಜಮ್ಮು ಕಾಶ್ಮೀರಕ್ಕೆ ನಿರಂತರ ದ್ರೋಹ - ಖರ್ಗೆ ವಾಗ್ದಾಳಿ



**ನವದೆಹಲಿ:** ಜಮ್ಮು ಮತ್ತು ಕಾಶ್ಮೀರಕ್ಕೆ ನರೇಂದ್ರ ಮೋದಿ ಸರ್ಕಾರದ ದ್ರೋಹಕ್ಕೆ ಯಾವುದೇ ಅಡೆತಡೆಯಿಲ್ಲ. ಕೇಂದ್ರವು ಲೆಫ್ಟಿನೆಂಟ್ ಗವರ್ನರ್ಗೆ ಹೆಚ್ಚಿನ ಅಧಿಕಾರವನ್ನು ನೀಡುವುದು ಸಂವಿಧಾನ್ ಹತ್ಯಾ ದಿವಸ್ ಅನ್ನು ಮೋದಿಯವರು ತನ್ನ ಆಡಳಿತದಲ್ಲಿ ಪ್ರತಿದಿನ ಮುಂದುವರಿಯುತ್ತಿರುವುದಕ್ಕೆ ಮತ್ತೊಂದು ಉದಾಹರಣೆ ಎಂದು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ವಾಗ್ದಾಳಿ ನಡೆಸಿದ್ದಾರೆ. ಗೃಹ ವ್ಯವಹಾರಗಳ ಸಚಿವಾಲಯವು ಜಮ್ಮು ಮತ್ತು ಕಾಶ್ಮೀರ ಮರುಸಂಘಟನೆ ಕಾಯಿದೆ, 2019 ರ ನಿಯಮಗಳನ್ನು ತಿದ್ದುಪಡಿ ಮಾಡಿದ ನಂತರ, ಖರ್ಗೆ ಅವರು ಜಮ್ಮು ಕಾಶ್ಮೀರಕ್ಕೆ ಮೋದಿ ಸರ್ಕಾರ ನಿರಂತರ ದ್ರೋಹ ಮಾಡುವುದನ್ನು ಮುಂದುವರಿಸಿದೆ ಎಂದಿದ್ದಾರೆ. ನಿಯಮಗಳನ್ನು ತಿದ್ದುಪಡಿ ಮಾಡುವ ಮೂಲಕ ಲೆಫ್ಟಿನೆಂಟ್ ಗವರ್ನರ್ಗೆ ಹೆಚ್ಚಿನ ಅಧಿಕಾರವನ್ನು ನೀಡುವ ಹೊಸ ಸೆಕ್ಷನ್ಗಳ ಅಳವಡಿಕೆಗೆ ಎರಡು ಅರ್ಥಗಳಿವೆ. ಒಂದು, ಜಮ್ಮು ಮತ್ತು ಕಾಶ್ಮೀರಕ್ಕೆ ಪೂರ್ಣ ರಾಜ್ಯ ಸ್ಥಾನಮಾನ ಮರುಸ್ಥಾಪಿಸಲು ಈ ವರ್ಷದ ಸೆಪ್ಟೆಂಬರ್ ಒಳಗೆ ಅಸೆಂಬ್ಲಿ ಚುನಾವಣೆಯನ್ನು ಸುಪ್ರೀಂಕೋರ್ಟ್ ಕಡ್ಡಾಯಗೊಳಿಸಿದ್ದರೂ ಸಹ ಮೋದಿ ಸರ್ಕಾರವು ವಿಳಂಬ ಮಾಡಲು ಬಯಸುತ್ತದೆ ಎಂದು ಖರ್ಗೆ 'ಎಕ್ಸ್'ನಲ್ಲಿ ಪೋಸ್ಟ್ ಮಾಡಿದ್ದಾರೆ.

# ಟ್ರಂಪ್ ಪ್ರಚಾರಕ್ಕೆ ಎಲಾನ್ ಮಸ್ಕ್





**ವಾಷಿಂಗ್ಟನ್:** ಅಮೆರಿಕ ಅಧ್ಯಕ್ಷೀಯ ಚುನಾವಣೆಯಲ್ಲಿ ರಿಪಬ್ಲಿಕನ್ ಪಕ್ಷದ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ಗೆಲುವಿಗಾಗಿ ಕೆಲಸ ನಿರ್ವಹಿಸುತ್ತಿರುವ ರಾಜಕೀಯ ಸಂಸ್ಥೆಗೆ ಟೆಸ್ಲಾ ಮಾಲೀಕ ಎಲಾನ್ ಮಸ್ಕ್ ಭಾರೀ ಮೊತ್ತದ ದೇಣಿಗೆ ನೀಡಿದ್ದಾರೆ. ಅಮೆರಿಕ ರಾಜಕೀಯ ಕ್ಷೇತ್ರದಲ್ಲಿ ತನ್ನ ಛಾಪು ಮೂಡಿಸಲು ಮಸ್ಕ್ ಮಾಡಿರುವ ಹೊಸ ತಂತ್ರಗಾರಿಕೆ ಇದು ಎಂದು ವಿಶ್ಲೇಷಿಸಲಾಗುತ್ತಿದೆ.

ಒಂದು ಸಣ್ಣ ರಾಜಕೀಯ ಸಂಸ್ಥೆಯಾದ ಅಮೆರಿಕ ಪಿಎಸಿಗೆ ಮಸ್ಕ್ ಕೊಡುಗೆ ನೀಡಿದ್ದು, ಅವರು ಎಷ್ಟು ಮೊತ್ತ ನೀಡಿದ್ದಾರೆಂದು ಬಹಿರಂಗವಾಗಿಲ್ಲ.

# ಟಿಬೆಟ್ ಬಿಕ್ಕಟ್ಟು ಪರಿಹಾರ ಕಾಯ್ದೆಗೆ ಬೈಡನ್ ಸಹಿ



**ವಾಷಿಂಗ್ಟನ್:** ಟಿಬೆಟ್‌ಗೆ ಅಮೆರಿಕದ ಬೆಂಬಲವನ್ನು ಹೆಚ್ಚಿಸುವ ಮತ್ತು ಟಿಬೆಟ್‌ನ ಸ್ಥಿತಿ ಹಾಗೂ ಆಡಳಿತದ ಮೇಲಿನ ವಿವಾದಕ್ಕೆ ಶಾಂತಿಯುತ ಪರಿಹಾರ ಕಂಡುಕೊಳ್ಳಲು ಚೀನಾ ಮತ್ತು ದಲಾಯ್ ಲಾಮಾ ನಡುವೆ ಮಾತುಕತೆಯನ್ನು ಉತ್ತೇಜಿಸುವ ವಿನ ಮಸೂದೆಗೆ ಅಮೆರಿಕ ಅಧ್ಯಕ್ಷ ಜೋ ಬೈಡನ್ ಸಹಿ ಹಾಕಿದ್ದಾರೆ.

'ಟಿಬೆಟ್ ಬಿಕ್ಕಟ್ಟು ಪರಿಹಾರ' ಕಾಯ್ದೆಯು ಅಸ್ಥಿರಗೊಳಿಸುವ ಕಾಯ್ದೆ ಎಂದು ಚೀನಾ ವಿರೋಧಿಸಿದೆ. ಕಳೆದ ಫೆಬ್ರವರಿಯಲ್ಲಿ ಹೌಸ್ ಆಫ್ ರೆಪ್ರಸೆಂಟೇಟಿವ್ಸ್‌ನಲ್ಲಿ (ಸಂಸತ್ತ ಕೆಳಮನೆ)ಯಲ್ಲಿ ಅನುಮೋದನೆಗೊಂಡಿದ್ದ ಮಸೂದೆಯನ್ನು ಮೇ ತಿಂಗಳಿನಲ್ಲಿ ಸೆನೆಟ್ ಕೂಡಾ ಅನುಮೋದಿಸಿತ್ತು. ಇದೀಗ ಮಸೂದೆಗೆ ಅಧ್ಯಕ್ಷರು ಸಹಿ ಹಾಕುವ ಮೂಲಕ ಅದು ಕಾಯ್ದೆಯ ರೂಪ ಪಡೆದಿದೆ.

ಟಿಬೆಟ್–ಚೀನಾ ವಿವಾದಕ್ಕೆ ಪರಿಹಾರವನ್ನು ಪ್ರೋತ್ಸಾಹಿಸುವ ಮಸೂದೆಯನ್ನು ಎಲ್ಲಾ ಸಂಸದರೂ ಪಕ್ಷಬೇಧ ಮರೆತು ಬೆಂಬಲಿಸಿದ್ದಾರೆ. ಟಿಬೆಟಿಯನ್ನರ ಮಾನವ ಹಕ್ಕುಗಳನ್ನು ಮುನ್ನಡೆಸಲು ಮತ್ತು ಅವರ ವಿಶಿಷ್ಟ ಭಾಷೆ, ಸಂಸ್ಕೃತಿ ಮತ್ತು ಧಾರ್ಮಿಕ ಪರಂಪರೆಯನ್ನು ಸಂರಕ್ಷಿಸುವ ಬೆಂಬಲಿಸುವ ಸಂಸತ್ತ ಬದ್ಧತೆಯನ್ನು ಶ್ಲಾಘಿಸುತ್ತೇನೆ' ಎಂದು ಬೈಡನ್ ಹೇಳಿದ್ದಾರೆ.

# ಇಸ್ರೇಲ್ ಭೀಕರ ದಾಳಿ; ಹಮಾಸ್ 'ಮಿಲಿಟರಿ ಮುಖ್ಯಸ್ಥ' ಸೇರಿ 71 ಮಂದಿಯ ಹತ್ಯೆ

**ಇಸ್ರೇಲ್:** 2023ರ ಅಕ್ಟೋಬರ್ 7ರಂದು ಹಮಾಸ್ ಉಗ್ರರು ನಡೆಸಿದ ದಾಳಿಗೆ ನಿರಂತರವಾಗಿ ಇಸ್ರೇಲ್ ಪ್ರತಿದಾಳಿ ನಡೆಸುತ್ತಲೆ ಇದೆ. ಇದೀಗ ಗಾಜಾ ಪಟ್ಟಿಯ ಖಾನ್ ಯೌನಿಸ್ ಪ್ರದೇಶದ ಮೇಲೆ ಇಸ್ರೇಲ್ ಭೀಕರ ದಾಳಿ ನಡೆಸಿದ್ದು, ಅಕ್ಟೋಬರ್ 7ರ ದಾಳಿಯ ರೂವಾರಿ, ಹಮಾಸ್ ಮಿಲಿಟರಿ ವಿಭಾಗದ ಮುಖ್ಯಸ್ಥ ಮೊಹಮ್ಮದ್ ಡೈಫ್ ಎಂಬಾತನನ್ನು ಹತ್ಯೆ ಮಾಡಲಾಗಿದೆ.

ಘಟನೆಯಲ್ಲಿ ಇನ್ನೂ 71 ಮಂದಿ ಮೃತಪಟ್ಟಿದ್ದಾರೆ.

ಖಾನ್ ಯೌನಿಸ್ ಪ್ರದೇಶವು ಹಮಾಸ್ ಉಗ್ರರ ಸುರಕ್ಷಿತ ತಾಣ ಎಂದೇ ಖ್ಯಾತಿ ಪಡೆದಿದೆ. ಇದರ ಮೇಲೆ ಇಸ್ರೇಲ್ ಭೀಕರ ದಾಳಿ ನಡೆಸಿದ ಕಾರಣ 71 ಮಂದಿ ಮೃತಪಟ್ಟರೆ, 289 ಮಂದಿ ಗಂಭೀರವಾಗಿ ಗಾಯಗೊಂಡಿದ್ದಾರೆ. ಅವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ. ಮೃತರೆಲ್ಲರೂ ನಾಗರಿಕರು ಎಂದು ಗಾಜಾ ಆರೋಗ್ಯ ಸಚಿವಾಲಯವು ಮಾಹಿತಿ ನೀಡಿದೆ. ಹಾಗೆಯೇ, ಗಾಜಾ ನಗರದ ಮೇಲೆ ಇಸ್ರೇಲ್ ನಡೆಸುತ್ತಿರುವ ದಾಳಿಯನ್ನು ತೀವ್ರವಾಗಿ ಖಂಡಿಸಿದೆ.

ಇಸ್ರೇಲ್ ಮೇಲೆ ನಿರಂತರವಾಗಿ ದಾಳಿಗೆ ಪಿತೂರಿ ನಡೆಸುವ, 2023ರ ಅಕ್ಟೋಬರ್ 7ರಂದು ಇಸ್ರೇಲ್ ಮೇಲೆ ದಾಳಿ ನಡೆಸುವ ಯೋಜನೆಯ ರೂವಾರಿ ಎನಿಸಿರುವ ಮೊಹಮ್ಮದ್ ಡೈಫ್ ಹತ್ಯೆಗಾಗಿ ಹಲವು ವರ್ಷಗಳಿಂದಲೂ ಇಸ್ರೇಲ್ ಗುಪ್ತಚರ ಇಲಾಖೆಯು ಪ್ಲಾನ್ ಮಾಡಿತ್ತು ಎಂದು ಹೇಳಲಾಗುತ್ತಿದೆ. ಖಾನ್ ಯೌನಿಸ್ ಪ್ರದೇಶದಲ್ಲಿ ಮೊಹಮ್ಮದ್ ಡೈಫ್ ಅಡಗಿರುವ ಕುರಿತು ನಿಖರ ಮಾಹಿತಿ ಪಡೆದ ಇಸ್ರೇಲ್ ಯೋಧರು ದಾಳಿಯ ಮೂಲಕ ಆತನನ್ನು ಹತ್ಯೆ ಮಾಡಿದ್ದಾರೆ ಎಂದು ತಿಳಿದುಬಂದಿದೆ.



# ಬ್ರಿಟನ್: ಜೈಲುಗಳಿಂದ ಸಾವಿರಾರು ಕೈದಿಗಳ ಬಿಡುಗಡೆಗೆ ನಿರ್ಧಾರ

**ಲಂಡನ್:** ಬ್ರಿಟನ್‌ನ ಹಲವು ಜೈಲುಗಳಲ್ಲಿ ಕೈದಿಗಳು ಕಿಕ್ಕಿರಿದು ತುಂಬಿರುವ ಕಾರಣ ಜೈಲು ವ್ಯವಸ್ಥೆ ಕುಸಿಯುವುದನ್ನು ತಡೆಯಲು ಸೆಪ್ಟಂಬರ್ ನ ಒಳಗೆ ಸಾವಿರಾರು ಕೈದಿಗಳನ್ನು ಬಿಡುಗಡೆಗೊಳಿಲು ನಿರ್ಧರಿಸಿರುವುದಾಗಿ ಬ್ರಿಟನ್ನ ನ್ಯಾಯ ಇಲಾಖೆಯ ಸಚಿವೆ ಶಬಾನಾ ಮಹ್ಮೂದ್ ಘೋಷಿಸಿದ್ದಾರೆ.

2023ರಿಂದಲೂ ಬ್ರಿಟನ್‌ನ ಜೈಲುಗಳು 99%ದಷ್ಟು ತುಂಬಿದ್ದು ಹೆಚ್ಚುವರಿ 700ರಷ್ಟು ಪುರುಷ ಕೈದಿಗಳಿಗೆ ಮಾತ್ರ ಸ್ಥಳಾವಕಾಶವಿದೆ. ಸಮಸ್ಯೆಯನ್ನು ತಕ್ಷಣ ಪರಿಹರಿಸದಿದ್ದರೆ ಕಾನೂನು ಸುವ್ಯವಸ್ಥೆ ಸಂಪೂರ್ಣ ಕುಸಿಯುವ ಅಪಾಯವಿದೆ. ಮುಂದಿನ ಮಾರ್ಚ್ನೊಳಗೆ ಹೆಚ್ಚುವರಿ 1,000 ಟ್ರೈನೀ ಪ್ರೊಬೇಷನರಿ ಅಧಿಕಾರಿಗಳನ್ನು ನೇಮಿಸಲಾಗುವುದು. ಹೆಚ್ಚುವರಿ 20,000 ಸ್ಥಳಾವಕಾಶ ಇರುವ 6 ಹೊಸ ಜೈಲುಗಳನ್ನು ನಿರ್ಮಿಸಲು ನಿರ್ಧರಿಸಿರುವುದಾಗಿ ಸರಕಾರ ಹೇಳಿದೆ.

ಜುಲೈ 12ರವರೆಗಿನ ಅಂಕಿಅಂಶದ ಪ್ರಕಾರ ಬ್ರಿಟನ್ನ ಜೈಲುಗಳಲ್ಲಿ 87,505 ಕೈದಿಗಳಿದ್ದು ಇವರಲ್ಲಿ 83,755 ಪುರುಷರು. ಹೆಚ್ಚುವರಿಯಾಗಿ ಕೇವಲ 1,451 ಕೈದಿಗಳಿಗೆ ಸ್ಥಳಾವಕಾಶವಿದೆ. ನಿಯಮದ ಪ್ರಕಾರ ವರ್ಷದ ಎಲ್ಲಾ ಸಮಯಗಳಲ್ಲೂ ಜೈಲುಗಳಲ್ಲಿ ಹೆಚ್ಚುವರಿ 1,425 ಪುರುಷ ಕೈದಿಗಳಿಗೆ ಅವಕಾಶ ಇರಬೇಕು ಎಂದು ಕಾರಾಗೃಹಗಳ ಮುಖ್ಯ ಅಧೀಕ್ಷಕ ಚಾರ್ಲಿ ಟೇಲರ್ ಹೇಳಿದ್ದಾರೆ.



ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054








## 'ವಿಶ್ವ ಕನ್ನಡ ಹಬ್ಬ'ಕ್ಕೆ ಡಾ.ಶಿವರಾಜ್ ಕುಮಾರ್ ಆಗಮನ....!

'ಸಿಂಗಪುರದಲ್ಲಿ ಕರ್ನಾಟಕ ಪ್ರೆಸ್ ಕ್ಲಬ್ ಕೌನ್ಸಿಲ್' ಹಾಗೂ 'ಸಿಂಗಪುರ ಕನ್ನಡಿಗರ' ಸಹಕಾರದಲ್ಲಿ ಆಯೋಜಿಸಿರುವ ವಿಶ್ವ ಕನ್ನಡ ಹಬ್ಬಕ್ಕೆ ಕನ್ನಡ ಚಿತ್ರರಂಗದ ಮೇರುನಟ, ಹ್ಯಾಟ್ರಿಕ್ ಹೀರೊ ಡಾ.ಶಿವರಾಜ್ ಕುಮಾರ್ ರವರಿಗೆ 'ವಿಶ್ವ ಕನ್ನಡ ಹಬ್ಬ'ಕ್ಕೆ ಆಹ್ವಾನ ನೀಡಲಾಯಿತು. ಕಾರ್ಯಕ್ರಮದ ರೂಪುರೇಷೆಗಳನ್ನು ಅಧ್ಯಕ್ಷರಾದ ಶಿವಕುಮಾರ್ ನಾಗರ ನವಿಲೆಯವರು ತಿಳಿಸಿದರು. ಕರ್ನಾಟಕ ಪ್ರೆಸ್ ಕ್ಲಬ್ ಕೌನ್ಸಿಲ್ ಸಂಸ್ಥೆಯ ಸಾಧನೆಗಳು ಹಾಗೂ ಕಳೆದ 'ದುಬೈ ವಿಶ್ವ ಕನ್ನಡ ಹಬ್ಬ'ದ ಯಶಸ್ವಿ ಕುರಿತು ಶಿವಣ್ಣ ಶ್ಲಾಘನೀಯ ವ್ಯಕ್ತಪಡಿಸಿದರು. ಈ ಸಂದರ್ಭವನ್ನು ಉದ್ದೇಶಿಸಿ ಮಾವತನಾಡಿದ ಶಿವಣ್ಣ ಅಧ್ಯಕ್ಷರಾದ ಶಿವಕುಮಾರ್ ನಾಗರ ನವಿಲೆಯವರ ನೇತೃತ್ವದಲ್ಲಿ ಸೆಪ್ಟೆಂಬರ್ 28 ರಂದು ಸಿಂಗಪುರದಲ್ಲಿ ವಿಶ್ವ ಕನ್ನಡ ಹಬ್ಬವನ್ನು ವಿಜೃಂಭಣೆಯಿಂದ ಆಚರಣೆ ಮಾಡುತ್ತಿದ್ದಾರೆ. ತಾಯಿ ಭುವನೇಶ್ವರಿಯ ಕೀರ್ತಿ ಪತಾಕೆಯನ್ನು ಹಾರಿಸಲು ನಾನು ಕೂಡ ಸಿಂಗಪುರಕ್ಕೆ ಹೊರಟಿದ್ದೇನೆ. ಕನ್ನಡವನ್ನು ಉಳಿಸೋಣ, ಕನ್ನಡವನ್ನು ಬೆಳೆಸೋಣ ಎಂದರು. ಸಿಂಗಾಪುರ ಕನ್ನಡಿಗರು ಈ ಶಿವಣ್ಣನನ್ನು ನೋಡಲು ಕಾತರದಿಂದ ಕಾಯುತ್ತಿರುವುದು ವಿಶೇಷ ಎನ್ನುತ್ತಾ, ಸಿಂಗಪುರ ಕನ್ನಡ ಅಭಿಮಾನಿಗಳಿಗೆ ಧನ್ಯವಾದಗಳನ್ನು ತಿಳಿಸಿದರು. ಈ ಸಂದರ್ಭದಲ್ಲಿ ವಿಶ್ವ ಕನ್ನಡ ಹಬ್ಬದ ಆಯ್ಕೆ ಸಮಿತಿ ಅಧ್ಯಕ್ಷರಾದ ದಿನೇಶ್ ಜೋಶಿ, ನಟಿ ರೂಪಿಕಾ, ಸುನಿಲ್, ರಂಜಿತಾ, ಸೈ ರಮೇಶ್, ಕಾವ್ಯ, ಸತೀಶ್, ಪವನ್ ಉಪಸ್ಥಿತರಿದ್ದರು.

## ಕೊನೆಗೂ ಹೊರಬಿತ್ತು 'ಮಾಣಿಕ್ಯ' ನಟಿಯ ಮದುವೆ ಫೋಟೋಸ್

'ಮಾಣಿಕ್ಯ' ನಟಿ ವರಲಕ್ಷ್ಮಿ ಶರತ್‌ಕುಮಾರ್ ಇತ್ತೀಚೆಗೆ ಅದ್ದೂರಿಯಾಗಿ ಥೈಲ್ಯಾಂಡ್‌ನಲ್ಲಿ ಮದುವೆಯಾಗಿದ್ದರು. ಬಳಿಕ ಚೆನ್ನೈನಲ್ಲಿ ಗ್ರ್ಯಾಂಡ್ ಆಗಿ ಆರತಕ್ಷತೆ ಆಯೋಜಿಸಿದ್ದರು. ಆದರೆ ಮದುವೆ ಫೋಟೋ ಮಾತ್ರ ಎಲ್ಲೂ ಶೇರ್ ಆಗಿರಲಿಲ್ಲ. ಇದೀಗ ನಟಿಯ ಮದುವೆಯ ಸುಂದರ ಫೋಟೋಗಳು ಹೊರಬಿದ್ದಿದೆ. ಮದುವೆಯಲ್ಲಿ ನಟಿ ಕೆಂಪು ಬಣ್ಣದ ಸೀರೆಯಲ್ಲಿ ಮಿಂಚಿದ್ರೆ, ವರ ನಿಯೋಲಾಯ್ ಲೈಟ್ ಬಣ್ಣ ಶರ್ಟ್ ಮತ್ತು ಪಂಚೆ ಧರಿಸಿದ್ದಾರೆ. ಖುಷಿ ಖುಷಿಯಾಗಿ ಮದುವೆಯಾಗಿರುವ ನಟಿಯ ದಾಂಪತ್ಯಕ್ಕೆ ಈಗ ಫ್ಯಾನ್ಸ್ ಶುಭಕೋರುತ್ತಿದ್ದಾರೆ. ವರಲಕ್ಷ್ಮಿ ಮತ್ತು ನಿಕೊಲಾಯ್ ಹಿಂದೂ ಮತ್ತು ಕ್ರೈಸ್ತ ಎರಡು ಧರ್ಮದ ಪ್ರಕಾರ ಅದ್ದೂರಿಯಾಗಿ ಮದುವೆಯಾಗಿದ್ದಾರೆ. ಅಂದಹಾಗೆ, ಜುಲೈ 3ರಂದು ಚೆನ್ನೈನಲ್ಲಿ ನಡೆದ ಆರತಕ್ಷತೆ ಕಾರ್ಯಕ್ರಮಕ್ಕೆ ಕನ್ನಡದ ನಟ ಸುದೀಪ್ ಭಾಗಿಯಾಗಿದ್ದರು. ಸುದೀಪ್ ಜೊತೆ ಪತ್ನಿ ಪ್ರಿಯಾ, ಮಗಳು ಸಾನ್ವಿ ಕೂಡ ಭಾಗಿಯಾಗಿದ್ದರು. ಸುದೀಪ್ ಕುಟುಂಬದ ಜೊತೆ ವರಲಕ್ಷ್ಮಿ ಉತ್ತಮ ಒಡನಾಟ ಹೊಂದಿದ್ದಾರೆ. ನಟಿಯ ಆತರಕ್ಷತೆಯಲ್ಲಿ ತಮಿಳು ನಟ ಸಿದ್ಧಾರ್ಥ್, ಬಾಲಯ್ಯ, ನಟಿ ತ್ರಿಷ ಸೇರಿದಂತೆ ಅನೇಕರು ಭಾಗಿಯಾಗಿ ಹೊಸ ಜೋಡಿಗೆ ಶುಭಕೋರಿದ್ದಾರೆ. ಇನ್ನೂ ವರಲಕ್ಷ್ಮಿ ಅವರು ಉದ್ಯಮಿ ನಿಕೋಲಾಯ್ ಜೊತೆ ಮಾರ್ಚ್ 1ರಂದು ಮುಂಬೈನಲ್ಲಿ ಅದ್ದೂರಿಯಾಗಿ ನಿಶ್ಚಿತಾರ್ಥ ಮಾಡಿಕೊಂಡಿದ್ದರು. ಹಲವು ವರ್ಷಗಳ ಪ್ರೀತಿಗೆ ಇಬ್ಬರೂ ಉಂಗುರದ ಮುದ್ರೆ ಒತ್ತಿದ್ದರು.

## ಜೈಲಿನಲ್ಲಿ ನಟ ದರ್ಶನ್ ಹನುಮಾನ್ ಚಾಲೀಸ್ ಪಠಣ

ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲು ಪಾಲಾಗಿರೋ ನಟ ದರ್ಶನ್ ನೋವಿನಲ್ಲೇ ದಿನಗಳನ್ನು ದೂಡುತ್ತಿದ್ದಾರಂತೆ. ಆ ನೋವನ್ನು ಕಡಿಮೆ ಮಾಡಿಕೊಳ್ಳುವುದಕ್ಕಾಗಿ ಅವರು ಯೋಗ ಮತ್ತು ಹನುಮಾನ್ ಚಾಲೀಸ್ ಪಠಣಕ್ಕೆ ಮುಂದಾಗಿದ್ದಾರಂತೆ. ನಿತ್ಯವೂ ಈಗ ಜೈಲಿನಲ್ಲಿ ಕೂತು ದರ್ಶನ್ ಹನುಮಾನ್ ಚಾಲೀಸ್ ಪಠಣ ಮಾಡುತ್ತಿದ್ದಾರೆ. ಜೊತೆಗೆ ಜೈಲರ್ ಗೆ ಮನವಿ ಮಾಡಿ ಅಲ್ಲೇ ಸಿಗುವ ಪುಸ್ತಕಗಳನ್ನು ಓದುತ್ತಿದ್ದಾರಂತೆ.

ಪರಪ್ಪನ ಅಗ್ರಹಾರ ಜೈಲಿಗೆ ದರ್ಶನ್ ಸೇರಿ ಮೂರು ವಾರಗಳು ಕಳೆದಿವೆ. ಒಂದೊಂದು ದಿನವನ್ನೂ ಅವರು ಕಳೆಯೋಕೆ ಕಷ್ಟ ಪಡ್ತಿದ್ದಾರೆ. ಆರೋಗ್ಯದಲ್ಲಿ ಆಗಾಗ್ಗೆ ಸಮಸ್ಯೆ ಕಾಣಿಸಿಕೊಳ್ತಿದೆ. ನಿತ್ಯವೂ ಅವರ ತೂಕ ಕಳೆದುಕೊಳ್ಳುತ್ತಿದ್ದಾರೆ. ಜೊತೆಗೆ ಜೈಲಿನ ಆಹಾರ ಕೂಡ ಅವರಿಗೆ ಒಗ್ಗುತ್ತಿಲ್ಲ. ಇದರಿಂದಾಗಿ ದರ್ಶನ್ ಕುಗ್ಗಿ ಹೋಗಿದ್ದಾರಂತೆ. ಖಿನ್ನತೆಯಿಂದಲೂ ಬಳಲುತ್ತಿದ್ದಾರಂತೆ. ಆರೋಗ್ಯದ ಸಮಸ್ಯೆಯನ್ನು ಮುಂದಿಟ್ಟುಕೊಂಡು ಮೊನ್ನೆಯಷ್ಟೇ ತನಗೆ ಮನೆ ಊಟ ಬೇಕು ಅಂತ ಮಾನ್ಯ ನ್ಯಾಯಾಲಯಕ್ಕೆ ಮನವಿ ಸಲ್ಲಿಸಿದ್ದರು ದರ್ಶನ್. ಈ ಅರ್ಜಿಯ ವಿಚಾರಣೆಯನ್ನು ಜುಲೈ 18ಕ್ಕೆ ನ್ಯಾಯಾಲಯ ಮುಂದೂಡಿದೆ. ಅವತ್ತು ಮನೆ ಊಟಕ್ಕೆ ಅನುಮತಿ ಸಿಗತ್ತಾ? ಅಥವಾ ಜೈಲೂಟವೇ ಮುಂದುವರೆಯತ್ತಾ ಅಂತ ಕಾದು ನೋಡಬೇಕು.



## 'ಕಲ್ಕಿ 2898 ಎಡಿ' ಚಿತ್ರಕ್ಕಿದ್ದ ದೊಡ್ಡ ಅಡೆತಡೆ ದೂರ

'ಕಲ್ಕಿ 2898 ಎಡಿ' ಸಿನಿಮಾ ಸೂಪರ್ ಹಿಟ್ ಆಗಿದೆ. ಪ್ರಭಾಸ್, ದೀಪಿಕಾ ಪಡುಕೋಣೆ, ದಿಶಾ ಪಟಾಣಿ, ಅಮಿತಾಭ್ ಬಚ್ಚನ್ ಮೊದಲಾದವರು ನಟಿಸಿರೋ ಈ ಚಿತ್ರ ಬಾಕ್ಸ್ ಆಫೀಸ್‌ನಲ್ಲಿಮೆಚ್ಚುಗೆಪಡೆಯುತ್ತಿದೆ. ಸದ್ಯ ಈ ಸಿನಿಮಾಮೂರನೇ ವಾರಕ್ಕೆ ಕಾಲಿಟ್ಟಿದೆ. ಈ ಚಿತ್ರಕ್ಕೆ ಇದ್ದ ದೊಡ್ಡ ಅಡೆತಡೆ ದೂರವಾಗಿದೆ. ಅಷ್ಟಕ್ಕೂ ಏನಿದು ಅಡೆತಡೆ? ಇದು ನಿವಾರಣೆ ಆಗಿದ್ದು ಹೇಗೆ ಎನ್ನುವ ಪ್ರಶ್ನೆಗೆ ಈ ಸ್ಟೋರಿಯಲ್ಲಿ ಉತ್ತರ ಇದೆ.

'ಕಲ್ಕಿ 2898 ಎಡಿ' ಸಿನಿಮಾದಲ್ಲಿ ಕಮಲ್ ಹಾಸನ್ ಕಾಣಿಸಿಕೊಂಡಿದ್ದಾರೆ. ಅವರ ಪಾತ್ರ ತೆರೆಮೇಲೆ ಹೆಚ್ಚು ಹೊತ್ತು ಬರದೆ ಇರಬಹುದು. ಆದರೆ, ಇಡೀ ಸಿನಿಮಾದಲ್ಲಿ ಪ್ರಮುಖ ಪಾತ್ರ ವಹಿಸೋದು ಅವರೇ. ಇಷ್ಟೇ ಅಲ್ಲ, ಮುಂದಿನ ಭಾಗದಲ್ಲಿ ಅವರ ಪಾತ್ರ ಹೆಚ್ಚು ಹೊತ್ತು ಕಾಣಿಸಿಕೊಳ್ಳುವ ಸಾಧ್ಯತೆ ಇದೆ. ಈಗ 'ಕಲ್ಕಿ 2898 ಎಡಿ' ಚಿತ್ರಕ್ಕೆ ಕಮಲ್ ಹಾಸನ್ ನಟನೆಯ 'ಇಂಡಿಯನ್ 2' ಚಿತ್ರವೇ ಮುಳುವಾಗುವ ಸಾಧ್ಯತೆ ಇತ್ತು.

ಕಮಲ್ ಹಾಸನ್ ನಟನೆಯ, ಶಂಕರ್ ನಿರ್ದೇಶನದ 'ಇಂಡಿಯನ್ 2' ಸಿನಿಮಾ ಜುಲೈ 12ರಂದು ಬಿಡುಗಡೆ ಕಂಡಿದೆ. ಇದು 'ಇಂಡಿಯನ್' ಸಿನಿಮಾದ ಸೀಕ್ವೆಲ್. ಆದರೆ, 'ಇಂಡಿಯನ್ 2' ಚಿತ್ರಕ್ಕೆ ಗಳಿಕೆ ಆಗಿರೋದು ಕೇವಲ 25–26 ಕೋಟಿ ರೂಪಾಯಿ. ಈ ಚಿತ್ರಕ್ಕೆ ಎಲ್ಲ ಕಡೆಗಳಿಂದ ಮಿಶ್ರಪ್ರತಿಕ್ರಿಯೆ ಸಿಕ್ಕಿರುವುದೇ ಇದಕ್ಕೆ ಕಾರಣ. 'ಕಲ್ಕಿ 2898 ಎಡಿ' ಸಿನಿಮಾಗೆ ಇದು ಲಾಭ ಮಾಡಿಕೊಟ್ಟಿದೆ.

ಕಮಲ್ ಹಾಸನ್ ಅವರು 'ಇಂಡಿಯನ್ 2' ಚಿತ್ರದಲ್ಲಿ ಹಲವು ಗೆಟಪ್‌ನಲ್ಲಿ ಕಾಣಿಸಿಕೊಳ್ಳುತ್ತಾರೆ. ಇದನ್ನು ಹೊರತುಪಡಿಸಿ ಹೆಚ್ಚಿನದ್ದೇನು ಇಲ್ಲ ಎನ್ನಲಾಗಿದೆ. ಈ ಸಿನಿಮಾ ಭ್ರಷ್ಟಾಚಾರದ ವಿರುದ್ಧ ಇದೆ. ಕಥಾ ನಾಯಕ ಭ್ರಷ್ಟಾಚಾರದ ವಿರುದ್ಧ ತಿರುಗಿಬೀಳೋ ಅನೇಕ ಸಿನಿಮಾಗಳು ಈಗಾಗಲೇ ರಿಲೀಸ್ ಆಗಿವೆ. ಹೀಗಾಗಿ ಮತ್ತೆ ಅದನ್ನೇ ತೋರಿಸಿದರೆ ಜನರು ಹೇಗೆ ಆ ಸಿನಿಮಾ ನೋಡಲು ಸಾಧ್ಯ?



### ಯಶಸ್ವಿ ಕೈ ತಪ್ಪಿದ ಚೊಚ್ಚಲ ಟಿ20ಐ ಶತಕ

## 10 ವಿಕೆಟ್ ಜಯದೊಂದಿಗೆ ಸರಣಿ ಗೆದ್ದ ಭಾರತ!

ಯಶಸ್ವಿ ಜೈಸ್ವಾಲ್, ನಾಯಕ ಶುಭಮನ್ ಗಿಲ್ ಅವರ ಶತಕದ ಜೊತೆಯಾಟದಿಂದ ಜಿಂಬಾಬ್ವೆ ವಿರುದ್ಧ ಭಾರತ 10 ವಿಕೆಟ್‌ಗಳ ಜಯ ಸಾಧಿಸಿದೆ. ಈ ಮೂಲಕ 5 ಪಂದ್ಯಗಳ ಸರಣಿಯಲ್ಲಿ 3–1 ಅಂತರದಲ್ಲಿ ಮುನ್ನಡೆ ಸಾಧಿಸಿದ್ದು, ಸರಣಿ ಗೆದ್ದುಕೊಂಡಿದೆ.

ಇಲ್ಲಿನ ಹರಾರೆ ಸ್ಪೋರ್ಟ್ಸ್‌ಕ್ಲಬ್ ಮೈದಾನದಲ್ಲಿ ನಡೆದ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಫೀಲ್ಡಿಂಗ್ ಆಯ್ದುಕೊಂಡ ಭಾರತ ಬ್ಯಾಟಿಂಗ್ ಮಾಡುವ ಅವಕಾಶವನ್ನು ಜಿಂಬಾಬ್ವೆಗೆ ಬಿಟ್ಟುಕೊಟ್ಟಿತು. ಮೊದಲು ಬ್ಯಾಟಿಂಗ್ ಮಾಡಿದ ಜಿಂಬಾಬ್ವೆ 20 ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ 152 ರನ್ ಗಳಿಸಿತ್ತು. 153 ರನ್ ಗುರಿ ಪಡೆದ ಭಾರತ 15.2 ಓವರ್‌ಗಳಲ್ಲೇ 156 ರನ್ ಚಚ್ಚಿ ಗೆಲುವು ಸಾಧಿಸಿತು. 153 ಗುರಿ ಪಡೆದ ಭಾರತದ ಪರ ಆರಂಭಿಕನಾಗಿ ಕಣಕ್ಕಿಳಿದ ಯಶಸ್ವಿ ಜೈಸ್ವಾಲ್ ಎದುರಾಳಿ ಬೌಲರ್‌ಗಳನ್ನು ಹಿಗ್ಗಾಮುಗ್ಗಾ ದಂಡಿಸಿದರು. ಇದರೊಂದಿಗೆ ನಾಯಕ ಶುಭಮನ್ ಗಿಲ್ ಸಹ ಬ್ಯಾಟಿಂಗ್ ಸಾಥ್ ನೀಡಿದರು. ಮುರಿಯದ ಮೊದಲ ವಿಕೆಟ್‌ಗೆ ಈ ಜೋಡಿ 15.2 ಓವರ್‌ಗಳಲ್ಲಿ 156 ರನ್ ಜೊತೆಯಾಟ ನೀಡುವ ಮೂಲಕ ತಂಡಕ್ಕೆ ಗೆಲುವು ತಂದುಕೊಟ್ಟಿತು.

ಕೈತಪ್ಪಿದ ಯಶಸ್ವಿ ಚೊಚ್ಚಲ ಅಂತಾರಾಷ್ಟ್ರೀಯ ಶತಕ: ಆರಂಭದಿಂದಲೇ ಸ್ಫೋಟಕ ಪ್ರದರ್ಶನಕ್ಕೆ ಮುಂದಾಗಿದ್ದ ಯಶಸ್ವಿ ಜೈಸ್ವಾಲ್ 29 ಎಸೆತಗಳಲ್ಲೇ ಸ್ಫೋಟಕ ಫಿಫ್ಟಿ ಬಾರಿಸಿದ್ದರು. ಬಳಿಕವೂ ತಮ್ಮ ಆಕ್ರಮಣಕಾರಿ ಬ್ಯಾಟಿಂಗ್ ಮುಂದುವರಿಸಿ 53 ಎಸೆತಗಳಲ್ಲಿ 93 ರನ್ (2 ಸಿಕ್ಸರ್, 13 ಬೌಂಡರಿ) ಗಳಿಸಿ ಅಜೇಯರಾಗುಳಿದರು. ಈ ವೇಳೆ ಟಿ20 ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಚೊಚ್ಚಲ ಶತಕ ಸಿಡಿಸುವ ಸನಿಹದಲ್ಲಿದ್ದ ಯಶಸ್ವಿ ಜೈಸ್ವಾಲ್ ಶತಕ ವಂಚಿತರಾದರು. ಮತ್ತೊಂದೆಡೆ ತಾಳ್ಮೆಯ ಬ್ಯಾಟಿಂಗ್‌ನೊಂದಿಗೆ ಸಾಥ್ ನೀಡಿದ ನಾಯಕ ಶುಭಮನ್ ಗಿಲ್ 39 ಎಸೆತಗಳಲ್ಲಿ 58 ರನ್ (6 ಬೌಂಡರಿ), 2 ಸಿಕ್ಸರ್) ಗಳಿಸಿ ಮಿಂಚಿದರು.

ಇದಕ್ಕೂ ಮುನ್ನ ಬ್ಯಾಟಿಂಗ್ ಮಾಡಿದ್ದ ಜಿಂಬಾಬ್ವೆ ಪರ ನಾಯಕ ಸಿಖಂದರ್ ರಝಾ 28 ಎಸೆತಗಳಲ್ಲಿ ಸ್ಫೋಟಕ 46 ರನ್ (3 ಸಿಕ್ಸರ್, 2 ಬೌಂಡರಿ) ಬಾರಿಸಿದರೆ, ಆರಂಭಿಕರಾದ ವೆಸ್ಲಿ ಮಾಧೆವೆರೆ 25 ರನ್, ತಡಿವಾನಾಶೆ ಮರುಮಣಿ 32 ರನ್‌ಗಳ ಕೊಡುಗೆ ನೀಡಿದರು. ಇದರೊಂದಿಗೆ ಜಿಂಬಾಬ್ವೆ 152 ರನ್ ಕಲೆಹಾಕಿತ್ತು.

ಟೀಂ ಇಂಡಿಯಾ ಪರ ಖಲೀಲ್ ಅಹ್ಮದ್ 2 ವಿಕೆಟ್ ಕಿತ್ತರೆ, ತುಷಾರ್ ದೇಶ್‌ಪಾಂಡೆ, ವಾಷಿಂಗ್ಟನ್ ಸುಂದರ್, ಅಭಿಷೇಕ್ ಶರ್ಮಾ, ಶಿವಂ ದುಬೆ ತಲಾ ಒಂದೊಂದು ವಿಕೆಟ್ ಪಡೆದು ಮಿಂಚಿದರು.



### ವಾಹನ ಸವಾರರಿಗೆ ಸಂಕಷ್ಟ, ಜನರಿಗೆ ಆತಂಕ

## ಸಿಲಿಕಾನ್ ಸಿಟಿಯಲ್ಲಿ ಬೀದಿನಾಯಿಗಳ ಕಾಟ

**ಬೆಂಗಳೂರು:** ರಾಜ್ಯ ರಾಜಧಾನಿಯಲ್ಲಿ ಬೀದಿನಾಯಿಗಳ ಹಾವಳಿ ಜೋರಾಗ್ತಿದೆ. ಶಾಪಿಂಗ್ ಹಾಟ್ ಸ್ಪಾಟ್ ಆಗಿದ್ದ ಬಸವನಗುಡಿಯ ಗಾಂಧಿ ಬಜಾರ್, ಲಾಲ್ ಬಾಗ್, ಸಂಪಂಗಿ ರಾಮನಗರ ಸೇರಿದಂತೆ ಹಲವೆಡೆ ಬೀದಿನಾಯಿಗಳು ಎಲ್ಲೆಂದರಲ್ಲಿ ಗುಂಪು ಗುಂಪಾಗಿ ಕಂಡುಬರ್ತಿದೆ.ರಾಜಧಾನಿಯ ರಸ್ತೆಗಳಲ್ಲಿ ಸೈಲೆಂಟ್ ಆಗಿ ಮಲಗಿ ನಿದ್ದೆಮಾಡ್ತಿರೋ ಈ ಶ್ವಾನಗಳು, ಕೆಲವೊಮ್ಮೆ ವೈಲೆಂಟ್ ಆಗ್ತಿರೋದು ಸಿಟಿಮಂದಿಗೆ ಸಂಕ?ಟ ತಂದಿಟ್ಟಿದೆ.

ಶಾಪಿಂಗ್ ಹಾಟ್ ಸ್ಪಾಟ್ ಆಗಿರೋ ಗಾಂಧಿ ಬಜಾರ್ ಸುತ್ತಮುತ್ತ ಬೀದಿನಾಯಿಗಳು ಗುಂಪು ಕಟ್ಟಿಕೊಂಡು ಓಡಾಡ್ತಿವೆ. ಸಂಜೆ ವೇಳೆ ಕೆಲ ಶ್ವಾನಗಳು ಜನರಿಗೆ ಕಾಟ ಕೊಡ್ತಿರೋದು ಜನರನ್ನ ಹೈರಾಣಾಗಿಸಿದೆ. ಅತ್ತ ಸಂಪಂಗಿ ರಾಮನಗರ ಸುತ್ತಮುತ್ತ ಯಾವ ವಾಹನ ಬಂದ್ರೂ ಬೀದಿನಾಯಿಗಳು ಅಟ್ಟಾಡಿಸಿಕೊಂಡು ಹೋಗ್ತಿದ್ದು, ಇದರಿಂದ ವಾಹನ ಸವಾರರು ಗಾಬರಿಯಾಗಿ ಅಪಘಾತ ಸಂಭವಿಸಿದ ಉದಾಹರಣೆಯಿದೆ.ಬೀದಿನಾಯಿಗಳ ಕಾಟಕ್ಕೆ ಬೇಸತ್ತ ಮಂದಿ, ಪಾಲಿಕೆ ಬೀದಿನಾಯಿಗಳಿಗೆ ಕಡಿವಾಣ ಹಾಕಬೇಕು ಅಂತಾ ಆಗ್ರಹ ಮಾಡ್ತಿದ್ದಾರೆ.



ಇನ್ನು ಬೀದಿನಾಯಿಗಳು ಹಲವೆಡೆ ಜನರಿಗೆ ಸಮಸ್ಯೆಯಾಗ್ತಿದ್ದರು ಪಾಲಿಕೆ ಕ್ರಮ ಕೈಗೊಂಡಿಲ್ಲ ಅಂತಿರೋ ಸಿಟಿಮಂದಿ, ಬೀದಿನಾಯಿಗಳನ್ನ ಸೆರೆಹಿಡಿಯೋದೊಂದೆ ಇದಕ್ಕೆ ಪರಿಹಾರ ಅಂತಾ ಆಗ್ರಹ ಮಾಡ್ತಿದ್ದಾರೆ.ಅಲ್ಲದೇ ಬೀದಿಗಳಲ್ಲಿ ನಾಯಿಗಳ ಕಾಟಕ್ಕೆ ಮಹಿಳೆಯರು, ಮಕ್ಕಳು ಓಡಾಡೋಕು ಭಯಪಡುವಂತಾಗಿದೆ ಅಂತಿರೋ ಜನರು, ಬೀದಿನಾಯಿಗಳ ಮೇಲೆ ನಿಗಾ ಇಡಿ ಅಂತಿದ್ದಾರೆ.

ಸದ್ಯ ಬೀದಿನಾಯಿಗಳಿಗೆ ಸಂತಾನಹರಣ ಚಿಕಿತ್ಸೆ ನೀಡಿ ಸೈಲೆಂಟ್ ಆಗ್ತಿರೋ ಪಾಲಿಕೆ, ಬೀದಿನಾಯಿಗಳು ಜನರ ಮೇಲೆ ದಾಳಿ ನಡೆಸೋ ಮೊದಲೇ ಪಾಲಿಕೆ ಎಚ್ಚೆತ್ತುಕೊಳ್ಳಬೇಕಿದೆ.ಬೀದಿನಾಯಿಗಳ ಕಾಟಕ್ಕೆ ಸುಸ್ತಾದ ಸಿಟಿಮಂದಿ ಪಾಲಿಕೆಗೆ ಹಿಡಿಶಾಪ ಹಾಕ್ತಿದ್ದು, ಸದ್ಯ ಬೀದಿನಾಯಿಗಳ ಕಾಟಕ್ಕೆ ಪಾಲಿಕೆ ಬ್ರೇಕ್ ಹಾಕುತ್ತಾ ಅನ್ನೋದನ್ನ ಕಾದುನೋಡಬೇಕಿದೆ.

## ತಹಶೀಲ್ದಾರ್ ಕಚೇರಿ ವಾಹನ, ಪೀಠೋಪಕರಣ ಜಪ್ತಿ

**ಹಾಸನ:** ಭೂಸ್ವಾಧೀನ ಪ್ರಕರಣದಲ್ಲಿ ಪರಿಹಾರ ನೀಡಲು ವಿಳಂಬ ಮಾಡಿದ ಹಿನ್ನೆಲೆ ನ್ಯಾಯಾಲಯದ ಆದೇಶದಂತೆ ಸಕಲೇಶಪುರದ ಉಪವಿಭಾಗಾಧಿಕಾರಿ ಕಚೇರಿಯ ವಾಹನ ಹಾಗೂ ಪೀಠೋಪಕರಣಗಳನ್ನು ಅಧಿಕಾರಿಗಳು ಜಪ್ತಿ ಮಾಡಿದ್ದಾರೆ.

1994 ರಲ್ಲಿ ಬೇಲೂರು ಚನ್ನಕೇಶವ ದೇವಾಲಯಕ್ಕೆ ಹೊಂದಿಕೊಂಡಿದ್ದ ಸುದೀಂದ್ರ, ಹಾಗೂ ರಾಮು ಎಂಬವರ 800 ಚದರ ಅಡಿ ಭೂಮಿಯನ್ನು ಹೋಟೆಲ್ ನಿರ್ಮಾಣಕ್ಕಾಗಿ ಪ್ರವಾಸೋದ್ಯಮ ಇಲಾಖೆ ಸ್ವಾಧೀನ ಪಡಿಸಿಕೊಂಡಿತ್ತು.ಈ ವೇಳೆ ಪ್ರತಿ ಚದರ ಅಡಿಗೆ ಇಲಾಖೆ 277 ರೂ.ಗಳಂತೆ ಪರಿಹಾರ ನೀಡಿತ್ತು. ಹೆಚ್ಚಿನ ಪರಿಹಾರ ನೀಡುವಂತೆ ಸುದೀಂದ್ರ, ಹಾಗೂ ರಾಮು ಅವರು ನ್ಯಾಯಾಲಯದ ಮೊರೆ ಹೋಗಿದ್ದರು. ಸುದೀರ್ಘ ವಿಚಾರಣೆ ನಂತರ ಚದರ ಅಡಿಗೆ 950 ರೂ.ನಂತೆ 1.75 ಕೋಟಿ ರೂ. ಪರಿಹಾರ ನೀಡುವಂತೆ ಅಂದಿನ ಭೂ ಸ್ವಾಧೀನಾಧಿಕಾರಿ ಹಾಗೂ ಉಪವಿಭಾಗಾಧಿಕಾರಿಗೆ ನ್ಯಾಯಾಲಯ ಆದೇಶಿಸಿತ್ತು.ತೀರ್ಪು ಪ್ರಕಟಗೊಂಡು 7 ವರ್ಷ ಕಳೆದರೂ ಪರಿಹಾರ ನೀಡದೆ ಇರುವುದರಿಂದ ಉಪವಿಭಾಗಾಧಿಕಾರಿ ಕಚೇರಿ ಜಪ್ತಿಗೆ ಬೇಲೂರು ನ್ಯಾಯಾಲಯ ಆದೇಶಿಸಿತ್ತು. ಆದೇಶದ ಅನ್ವಯ 2 ಲಾರಿಗಳಲ್ಲಿ ಅಧಿಕಾರಿಗಳು ಕಚೇರಿಯ ಪೀಠೋಪಕರಣಗಳನ್ನು ತುಂಬಿಕೊಂಡು ನ್ಯಾಯಾಲಯಕ್ಕೆ ಕೊಂಡೊಯ್ದಿದ್ದಾರೆ.ಭೂಮಿ ಕಳೆದುಕೊಂಡವರ ಪರ ಕೆ.ಎಲ್.ನಟರಾಜ್ ವಾದ ಮಂಡಿಸಿದ್ದರು.



## ನ.19ರಿಂದ ಬೆಂಗಳೂರು ಟೆಕ್ ಸಮ್ಮಿಟ್

**ಬೆಂಗಳೂರು:** ಬೆಂಗಳೂರನ್ನು ಜಾಗತಿಕ ತಂತ್ರಜ್ಞಾನದ ನಾಯಕವನ್ನಾಗಿಸುವ ಉದ್ದೇಶದೊಂದಿಗೆ 27ನೇ ಆವೃತ್ತಿಯ ಬೆಂಗಳೂರು ಟೆಕ್ ಸಮ್ಮಿಟ್ (ಬಿಟಿಎಸ್)ಅನ್ನು ನ. 19ರಿಂದ 21ರವರೆಗೆ ಬೆಂಗಳೂರು ಅರಮನೆಯಲ್ಲಿ ಆಯೋಜಿಸಲಾಗುತ್ತಿದ್ದು, ಅನ್‌ಬೌಂಡ್ (ಮಿತಿ ರಹಿತ) ಘೋಷವಾಕ್ಯದೊಂದಿಗೆ ಸಮ್ಮಿಟ್ ನಡೆಯಲಿದೆ ಎಂದು ಐಟಿ–ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದರು.



ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಬಾರಿಯ ಬಿಟಿಎಸ್ ಅನ್ನು ನಾವೀನ್ಯತೆ ಮತ್ತು ಜಾಗತಿಕ ಸಹಭಾಗಿತ್ವದೊಂದಿಗೆ ಆಯೋಜಿಸಲಾಗುತ್ತಿದೆ.ಈ ಬಾರಿ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ ಸೇರಿದಂತೆ ಇನ್ನಿತರ ತಂತ್ರಜ್ಞಾನಗಳ ಮೂಲಕ ಕೃಷಿ ಮತ್ತು ಕೃಷಿಕರು, ನಗರವಾಸಿಗಳು ಸೇರಿದಂತೆ ರಾಜ್ಯದ ಇತರ ಸಮಸ್ಯೆಗಳಿಗೆ ವರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಪ್ರಯತ್ನಿಸಲಾಗುವುದು.3 ದಿನಗಳ ಶೃಂಗಸಭೆಯಲ್ಲಿ ಅದಕ್ಕೆ ಪೂರಕವಾದಂತಹ ಸಂವಾದ, ಉಪನ್ಯಾಸ ಕಾರ್ಯಕ್ರಮಗಳು, ಪ್ರದರ್ಶನಗಳನ್ನು ಆಯೋಜಿನಲಾಗುತ್ತಿದೆ ಎಂದರು.

ಈ ಬಾರಿಯ ಬಿಟಿಎಸ್‌ನಲ್ಲಿ 31ಕ್ಕೂ ಹೆಚ್ಚಿನ ದೇಶಗಳಿಂದ ಪ್ರತಿನಿಧಿಗಳು ಪಾಲ್ಗೊಳ್ಳಲಿದ್ದಾರೆ.700 ಹೆಚ್ಚಿನ ಪ್ರದರ್ಶಕರಲಿದ್ದು, ಅದರಲ್ಲಿ 500ಕ್ಕೂ ಹೆಚ್ಚಿನ ಸ್ಟಾರ್ಟ್ ಅಪ್‌ಗಳಾಗಿದೆ.ಜತೆಗೆ 460ಕ್ಕೂ ಹೆಚ್ಚಿನ ವಿಷಯ ಪರಿಣಿತರು 15ಕ್ಕೂ ಹೆಚ್ಚಿನ ಸಂವಾದ ಕಾರ್ಯಕ್ರಮಗಳನ್ನು ನಡೆಸಲಿದ್ದಾರೆ. 5 ಸಾವಿರಕ್ಕೂ ಹೆಚ್ಚಿನ ಪ್ರತಿನಿಧಿಗಳು ಪಾಲ್ಗೊಳ್ಳಲಿದ್ದು, 50 ಸಾವಿರಕ್ಕೂ ಹೆಚ್ಚಿನ ಜನರು ಬಿಟಿಎಸ್‌ಗೆ ಭೇಟಿ ನೀಡಿ ತಮ್ಮ ಜ್ಞಾನವನ್ನು ಹಾಗೂ ಉದ್ಯಮವನ್ನು ವಿಸ್ತರಿಸುವ ನಿರೀಕ್ಷೆಯಿದೆ ಎಂದು ವಿವರಿಸಿದರು.

ಬಿಟಿಎಸ್ ಮೂಲಕ ಸಣ್ಣ ಮತ್ತು ದೊಡ್ಡ ಪ್ರಮಾಣದ ಉದ್ಯಮ ಮತ್ತು ಉದ್ಯಮಿಗಳ ನಡುವೆ ಸಂವಹನ ನಡೆಯುವಂತೆ ಮಾಡಲಾಗುವುದು.ಅದಕ್ಕಾಗಿ 2 ಸಾವಿರಕ್ಕೂ ಹೆಚ್ಚಿನ ಆನ್‌ಲೈನ್ ಬಿಡಿಬಿ ಹಾಗೂ 500ಕ್ಕೂ ಹೆಚ್ಚಿನ ನೇರ ಬಿ2ಬಿ ಆಯೋಜಿಸಲಾಗುತ್ತಿದೆ. ಜತೆಗೆ ಸಂಶೋಧನೆ ಮತ್ತು ಅಭಿವೃದ್ಧಿ, ಬಾಹ್ಯಾಕಾಶ, ಎಲೆಕ್ಟ್ರಾನಿಕ್ಸ್, ಕೃತಕ ಬುದ್ಧಿಮತ್ತೆ, ಸೆಮಿ ಕಂಡಕ್ಟರ್‌ಹೀಗೆ ಪ್ರತಿ ಕ್ಷೇತ್ರಕ್ಕೂ ಪ್ರತ್ಯೇಕ ಪೆವಿಲಿಯನ್‌ಗಳನ್ನು ಸ್ಥಾಪಿಸಲಾಗುತ್ತದೆ. ಈ ಬಾರಿಯ ಬಿಟಿಎಸ್‌ನಲ್ಲಿ ದೇಶದ 36ಕ್ಕೂ ಹೆಚ್ಚಿನ ನಗರಗಳ ಪ್ರತಿನಿಧಿಗಳು ಪಾಲ್ಗೊಳ್ಳಲಿದ್ದಾರೆ.ಜತೆಗೆ ಮಟ್ಟದಲ್ಲಿ ದೇಶದ ತಂತ್ರಜ್ಞಾನವನ್ನು ವಿಸ್ತರಿಸುವ ನಿಟ್ಟಿನಲ್ಲಿ ಬಿಟಿಎಸ್ ಆಯೋಜಿಸಲಾಗುತ್ತಿದೆ ಎಂದು ಹೇಳಿದರು.

## ಐಪಿಎಲ್ ಟ್ರೋಫಿ ತಂದುಕೊಡದಿದ್ದಕ್ಕೆ ತಲೆದಂಡ

7 ಆವೃತ್ತಿ ಕಳೆದರೂ ಐಪಿಎಲ್ ಟ್ರೋಫಿ ತಂದುಕೊಡುವಲ್ಲಿ ವಿಫಲರಾದ ರಿಕಿ ಪಾಟಿಂಗ್ ಅವರನ್ನು ಡೆಲ್ಲಿ ಕ್ಯಾಪಿಟಲ್ಸ್ ಫ್ರಾಂಚೈಸಿ ಮುಖ್ಯ ಕೋಚ್ ಹುದ್ದೆಯಿಂದ ವಜಾಗೊಳಿಸಿದೆ. 2025ರ ಇಂಡಿಯನ್ ಪ್ರೀಮಿಯರ್ ಲೀಗ್ ಆವೃತ್ತಿಯಿಂದ ಪಾಂಟಿಂಗ್ ಡೆಲ್ಲಿ ತಂಡದ ಮುಖ್ಯ ಕೋಚ್ ಆಗಿ ಕಾರ್ಯನಿರ್ವಹಿಸುವುದಿಲ್ಲ ಎಂದು ಡೆಲ್ಲಿ ಕ್ಯಾಪಿಟಲ್ಸ್ ತಂಡದ ನಿರ್ದೇಶಕ ಸೌರವ್ ಗಂಗೂಲಿ ಖಚಿತಪಡಿಸಿದ್ದಾರೆ.

ಆಸ್ಟ್ರೇಲಿಯಾ ತಂಡದ ಮಾಜಿ ನಾಯಕರೂ ಆಗಿರುವ ರಿಕಿ ಪಾಂಟಿಂಗ್ ಕಳೆದ 7 ಆವೃತ್ತಿಗಳಿಂದ ಡೆಲ್ಲಿ ಕ್ಯಾಪಿಟಲ್ಸ್ ಮುಖ್ಯ ಕೋಚ್ ಆಗಿ ಸೇವೆ ಸಲ್ಲಿಸುತ್ತಿದ್ದರು. ಡೆಲ್ಲಿ ಕ್ಯಾಪಿಟಲ್ಸ್ ಸೇರುವ ಮುನ್ನ ಪಾಂಟಿಂಗ್ ಮುಂಬೈ ಇಂಡಿಯನ್ಸ್ ತಂಡವನ್ನು ಮುನ್ನಡೆಸಿದ್ದರು. ಪಾಂಟಿಂಗ್ ನೇತೃತ್ವದಲ್ಲಿ 2020ರಲ್ಲಿ ಪಾಂಟಿಂಗ್ ಅವರ ಸಾರಥ್ಯದಲ್ಲೇ ಡೆಲ್ಲಿ ತಂಡ ಫೈನಲ್ ಪ್ರವೇಶಿಸಿತ್ತು. ಆದ್ರೆ ಮುಂಬೈ ಇಂಡಿಯನ್ಸ್ ವಿರುದ್ಧ ಸೋತು ಪ್ರಶಸ್ತಿ ಗೆಲ್ಲಲು ವಿಫಲವಾಯಿತು.

2024ರ ಆವೃತ್ತಿಯಲ್ಲಿ ಆರಂಭದಲ್ಲಿ ಸತತ ಮೂರು ಸೋಲು ಕಂಡಿದ್ದ ಡೆಲ್ಲಿ ಕ್ಯಾಪಿಟಲ್ಸ್ ತಂಡ ಬಳಿಕ ಅದ್ಭುತ ಬ್ಯಾಟಿಂಗ್ ಪ್ರದರ್ಶನ ನೀಡಿತ್ತು. 14 ಪಂದ್ಯಗಳಲ್ಲಿ 7ರಲ್ಲಿ ಗೆಲುವು ಸಾಧಿಸಿದರೂ ಪ್ಲೇ ಆಫ್‌ನಿಂದ ಹೊರಗುಳಿಯಿತು. ಇದೀಗ ತಂಡದ ಅದೃಷ್ಟ ಬದಲಾಯಿಸುವ ಪ್ರಯತ್ನದಲ್ಲಿ ನಿರಾಸೆ ಮೂಡಿಸಿದ ರಿಕಿ ಪಾಂಟಿಂಗ್ ಅವರನ್ನು ಮುಂದುವರಿಸರಿದಲು ಫ್ರಾಂಚೈಸಿ ನಿರ್ಧರಿಸಿದೆ. ಕ್ರಿಕೆಟ್ ನಿರ್ದೇಶಕ ಸೌರವ್ ಗಂಗೂಲಿ ಇದನ್ನು ದೃಢಪಡಿಸಿದ್ದಾರೆ.



**ಡೆಲ್ಲಿ ಕ್ಯಾಪಿಟಲ್ಸ್ ಕೋಚ್ ಹುದ್ದೆಯಿಂದ ರಿಕಿ ಪಾಂಟಿಂಗ್ ಗೆ ಕೊಕ್?!**

**ರಿಕಿ ಪಾಂಟಿಂಗ್ ಅವರನ್ನು ಮುಂದುವರಿಸರಿದಲು ಫ್ರಾಂಚೈಸಿ ನಿರ್ಧಾರ**

**ಕ್ರಿಕೆಟ್ ನಿರ್ದೇಶಕ ಸೌರವ್ ಗಂಗೂಲಿ ದೃಢ**

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com